23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 338 | ನವದೆಹಲಿ | ಬೆಲೆ ₹10 | ಜೂನ್ 12 2026, ಶುಕ್ರವಾರ

## ಒಳಪುಟಗಳಲ್ಲಿ

ಮೀನಾಕ್ಷಿ ನಟರಾಜನ್ ಅರ್ಜಿ ವಿಚಾರಣೆಗೆ ಸುಪ್ರೀಂ ಸಮ್ಮತಿ - ಪು.4

ಮಾದಕವಸ್ತು ಹಾವಳಿ ತಡೆಗೆ ನೀಲನಕ್ಷೆ ರೂಪಿಸಿ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ - ಪು.5

ಸಮರ್ಪಕ ರಸಗೊಬ್ಬರ ಪೂರೈಸಿ, ಎಪಿಎಂಸಿ ಎದುರು ರೈತಸಂಘದಿಂದ ಸತ್ಯಾಗ್ರಹ ಪು.6

# ಜಾಗತಿಕ ಅನಿಶ್ಚಿತ ಪರಿಸ್ಥಿತಿಯಲ್ಲೂ ಅಭಿವೃದ್ಧಿ ಪಥದಲ್ಲಿ ಭಾರತ

## ನೀತಿ ಆಯೋಗದ 11ನೇ ಸಭೆಯಲ್ಲಿ ಪ್ರಧಾನಿ ಮೋದಿ ಪ್ರತಿಪಾದನೆ, ಡಿಕೆಶಿ ಸೇರಿ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳು ಭಾಗಿ




**ನವದೆಹಲಿ, ಜೂ.11: ಜಾಗತಿಕ ಅನಿಶ್ಚಿತತೆ ಮತ್ತು ಅಸ್ಥಿರತೆಯ ನಡುವೆಯೂ ಭಾರತ ವಿಶ್ವಾಸ ಮತ್ತು ತನ್ನ ಅತ್ಯುತ್ತಮ ನಿರ್ಧಾರದೊಂದಿಗೆ ಅಭಿವೃದ್ಧಿ ಪಥದಲ್ಲಿ ಮುಂದುವರಿಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ನೀತಿ ಆಯೋಗದ ಆಡಳಿತ ಸಭೆಯ 11ನೇ ಸಭೆಯನ್ನು ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.**

ವಿಕಸಿತ ಭಾರತದ ದೃಷ್ಟಿಯತ್ತ ದೇಶ ಸಾಗುತ್ತಿರುವಾಗ ಎಲ್ಲರ ಜವಾಬ್ದಾರಿ ಇನ್ನಷ್ಟು ಹೆಚ್ಚಾಗಿದೆ. ಪ್ರಪಂಚವು ಅನಿಶ್ಚಿತತೆ ಮತ್ತು ಅಸ್ಥಿರತೆಯ ಕಾಲವನ್ನು ದಾಟುತ್ತಿದೆ. ಆದರೂ ಭಾರತ ವಿಶ್ವಾಸ ಮತ್ತು ಉತ್ತಮ ನಿರ್ಧಾರದೊಂದಿಗೆ ಬೆಳವಣಿಗೆಯ ಪಥದಲ್ಲಿ ಮುನ್ನುಗ್ಗುತ್ತಿದೆ ಎಂದು ವಿವರಿಸಿದರು.

ಪ್ರಧಾನಿ ಮೋದಿ ಅವರು ಹಲವು ದೇಶಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಸಹಿ ಮಾಡಿದ್ದು, ಇದು ಬೆಳವಣಿಗೆ ಮತ್ತು ರಫ್ತುಗಳಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಿದೆ. ಈ ಒಪ್ಪಂದಗಳು ನಮ್ಮ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ದೊಡ್ಡ ಅವಕಾಶ ನೀಡುತ್ತವೆ. ಅಂತರರಾಷ್ಟ್ರೀಯ ಮಾನದಂಡಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸುವ ಮೂಲಕ ಅವು ಜಾಗತಿಕ ಮಾರುಕಟ್ಟೆಗೆ ಸಿದ್ಧವಾಗಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು.

ಭಾರತದ ಜನಸಂಖ್ಯಾ ಬಲವು ಐತಿಹಾಸಿಕ ಅವಕಾಶವಾಗಿದೆ, ಯುವಕರಿಗೆ ಗುಣಮಟ್ಟದ ಶಿಕ್ಷಣ, ಬೇಡಿಕೆಗೆ ತಕ್ಕ ಕೌಶಲ್ಯ ತರಬೇತಿ ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಆದ್ಯತೆಯಾಗಿರಬೇಕು ಎಂದು ಒತ್ತಾಯಿಸಿದರು. ಸಬಲ ಯುವಕರು ವಿಕಸಿತ ಭಾರತದ ಪಯಣದಲ್ಲಿ ಪ್ರಮುಖ ಚಾಲಕಶಕ್ತಿಯಾಗುತ್ತಾರೆ ಎಂದರು.

ರಾಜ್ಯಗಳ ನಡುವೆ ಸಹಕಾರ ಮತ್ತು ಸಂವಾದವನ್ನು ಪ್ರೋತ್ಸಾಹಿಸಬೇಕು, ನೀತಿ ಆಯೋಗದ ರಾಜ್ಯಗಳ ನಡುವಿನ ಸಹಕಾರಕ್ಕೆ ವೇದಿಕೆಯಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ವಿಕಸಿತ ಭಾರತದ ದೃಷ್ಟಿಯಲ್ಲಿ ಮಹಿಳಾ ನೇತೃತ್ವದ ಬೆಳವಣಿಗೆಯು ಮುಖ್ಯ ಸ್ತಂಭವಾಗಿದೆ ಎಂದು ಪ್ರಧಾನಿ ಹೇಳಿದರು. ಕೃಷಿ, ಸ್ಟಾರ್ಟ್‌ಅಪ್‌ಗಳಿಂದ ಹಿಡಿದು ವಿಜ್ಞಾನ ಮತ್ತು ನಾವೀನ್ಯತೆಯವರೆಗೆ ನಾರಿಶಕ್ತಿ ಎಲ್ಲ ಕ್ಷೇತ್ರಗಳಲ್ಲೂ ಕೊಡುಗೆ ನೀಡುತ್ತಿದೆ ಎಂದರು. ರಾಜ್ಯಗಳು ಮಹಿಳೆಯರ ಶಿಕ್ಷಣ, ಕೌಶಲ್ಯ, ಸುರಕ್ಷತೆ ಮತ್ತು ಸಬಲೀಕರಣಕ್ಕೆ ಆದ್ಯತೆ ನೀಡಬೇಕು ಎಂದು ಪ್ರಧಾನಿ ಕರೆ ನೀಡಿದರು.

ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯಗಳು ಒಟ್ಟಾಗಿ ಭಾರತದ ಬೆಳವಣಿಗೆಯನ್ನು ವೇಗಗೊಳಿಸುತ್ತಿವೆ. ನಮ್ಮ ಸಮ್ಮಿಲಿತ ಪ್ರಯತ್ನಗಳು ವಿಕಸಿತ ಭಾರತದ ಸಾಮೂಹಿಕ ದೃಷ್ಟಿಯನ್ನು ನನಸು ಮಾಡುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಮೋದಿ ಹೇಳಿದರು. ಸಭೆಯಲ್ಲಿ ಡಿ.ಕೆ.ಶಿವಕುಮಾರ್, ವಿಜಯ್ ಸೇರಿದಂತೆ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಪಾಲ್ಗೊಂಡಿದ್ದರು.

## ಕರ್ನಾಟಕದಲ್ಲಿ ಆರ್ಥಿಕ ದಬ್ಬಾಳಿಕೆ: ರಾಧಾಮೋಹನ್ ದಾಸ್ ಅಗರವಾಲ್ ಟೀಕೆ



**ಬೆಂಗಳೂರು, ಜೂ.11:** ಕರ್ನಾಟಕದಲ್ಲಿ ಡಿ.ಕೆ. ಶಿವಕುಮಾರ್, ಸಚಿವರಾದ ರಾಮಲಿಂಗಾರೆಡ್ಡಿ ಹಾಗೂ ಕೃಷ್ಣಬೈರೇಗೌಡ ಅವರು ಆರ್ಥಿಕ ದಬ್ಬಾಳಿಕೆ ಮಾಡುತ್ತಿದ್ದಾರೆ. ಭ್ರಷ್ಟಾಚಾರದ ಕೇಂದ್ರವಾಗಿ ಬೆಂಗಳೂರು ಹೊರಹೊಮ್ಮಿದೆ. ಯಾವುದೇ ಅಭಿವೃದ್ಧಿ ಕೆಲಸ ಆಗುತ್ತಿಲ್ಲ, ಯಾವುದೇ ಮೂಲಸೌಕರ್ಯ ತಲುಪಿಸುವ ಯೋಜನೆಯಿಲ್ಲ. ಇದು ಬ್ರ್ಯಾಂಡ್ ಅಲ್ಲ ಬ್ಯಾಡ್ ಬೆಂಗಳೂರು ಎಂದು ಕರ್ನಾಟಕ ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಡಾ. ರಾಧಾಮೋಹನ್ ದಾಸ್ ಅಗರವಾಲ್ ಟೀಕಿಸಿದ್ದಾರೆ.

ಜಕ್ಕೂರು ಏರೊಡ್ರೋಮ್ ಬಳಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ಶಕ್ತಿಕೇಂದ್ರ ಪ್ರಮುಖರ ಸಭೆಯಲ್ಲಿ ಮಾತನಾಡಿದ ಅವರು, 2028ಕ್ಕೆ ಬ್ಯಾಟರಾಯನಪುರ ಕ್ಷೇತ್ರವನ್ನು ಭಾರತೀಯ ಜನತಾ ಪಕ್ಷ ಗೆಲ್ಲಬೇಕು. ನಮ್ಮ ಶಕ್ತಿಕೇಂದ್ರದ ಎಲ್ಲಾ ಮುಖಂಡರು ಹೆಚ್ಚಿನ ಶ್ರಮವಹಿಸಿ ಮುಂದಿನ 2028ರ ಚುನಾವಣೆಯಲ್ಲಿ ಬ್ಯಾಟರಾಯನಪುರ ಗೆಲ್ಲುವ ಸಂಕಲ್ಪ ಮಾಡಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸಹ–ಉಸ್ತುವಾರಿ ಸುಧಾಕರ ರೆಡ್ಡಿ ಅವರು ಮಾತನಾಡಿ, ಕರ್ನಾಟಕದಲ್ಲಿ ಭ್ರಷ್ಟಾಚಾರ ನಡೆಸುತ್ತಿರುವ ಸರ್ಕಾರ ಬಂದಿದೆ. ಮುಂದಿನ ದಿನದಲ್ಲಿ ಜನ ತಕ್ಕಪಾಠ ಕಲಿಸುವ ಕೆಲಸ ಮಾಡುತ್ತಾರೆ. ದೇಶದಲ್ಲಿ ನರೇಂದ್ರ ಮೋದಿ ಒಳ್ಳೆಯ ಕೆಲಸ ಮಾಡುತ್ತಿದ್ದಾರೆ. ಕರ್ನಾಟಕದಲ್ಲಿ 2028ಕ್ಕೆ ಬಿಜೆಪಿ ಸರ್ಕಾರ ಬರುತ್ತದೆ. ಅದರಲ್ಲಿ ಬ್ಯಾಟರಾಯನಪುರ ಗೆಲ್ಲಬೇಕು ಎಂದು ನುಡಿದರು.

ರಾಜ್ಯ ಕಾರ್ಯದರ್ಶಿ ಎಚ್.ಸಿ.ತಮ್ಮೇಶ್‌ಗೌಡ ಅವರು ಮಾತನಾಡಿ, ಬ್ಯಾಟರಾಯನಪುರ ಕ್ಷೇತ್ರದಲ್ಲಿ ಕಾರ್ಯಕರ್ತರು ಮನೆಮನೆ ಸಂಪರ್ಕ ಮಾಡಿ ಸಂಘಟನೆಯನ್ನು ಬಲಪಡಿಸುವ ಕೆಲಸ ನಡೆಯುತ್ತಿದೆ. ಜೊತೆಗೆ ಜಿಬಿಎ ಚುನಾವಣೆ ಹಾಗೂ ಯಾವುದೇ ಸಂದರ್ಭದಲ್ಲಿ ವಿಧಾನಸಭಾ ಚುನಾವಣೆ ಬಂದರೂ ಕೂಡ ಗೆಲ್ಲುವ ಸಾಮರ್ಥ್ಯ ಬಿಜೆಪಿ ಸಂಘಟನೆಗೆ ಇದೆ. ಅಭಿವೃದ್ಧಿ ಮಾಡದ ಶಾಸಕರ ವಿರುದ್ಧ ದೊಡ್ಡ ಆಂದೋಲನ ಪ್ರಾರಂಭ ಆಗಲಿದ್ದು ಬ್ಯಾಟರಾಯನಪುರ ಜನಜಾಗೃತಿ ಅಭಿಯಾನವನ್ನು ಪ್ರಾರಂಭ ಮಾಡುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಮಂಡಲ ಅಧ್ಯಕ್ಷ ಕೃಷ್ಣಮೂರ್ತಿ, ಬಿಎಲ್‌ಎ–1 ಮಧುಸೂದನ್, ಯುವಮೋರ್ಚಾ ರಾಜ್ಯ ಕಾರ್ಯದರ್ಶಿ ದೀಪಕ್ ಕುಮಾರ್ ಭಾಗವಹಿಸಿದ್ದರು.

## ರಾಜ್ಯಸಭೆಗೆ ಮಲ್ಲಿಕಾರ್ಜುನ ಖರ್ಗೆ, ಮನ್ಸೂರ್ ಅಲಿಖಾನ್, ಪವನ್ ಖೇರಾ, ಪ್ರೊ.ಎಂ.ನಾಗರಾಜ ಅವಿರೋಧ ಆಯ್ಕೆ



**ಬೆಂಗಳೂರು, ಜೂ.11:** ರಾಜ್ಯಸಭಾ ಚುನಾವಣೆಯಲ್ಲಿ ಕರ್ನಾಟಕದ ನಾಲ್ಕು ಸ್ಥಾನಗಳಲ್ಲಿ ಕಾಂಗ್ರೆಸ್‌ನ ಮೂವರು ಮತ್ತು ಬಿಜೆಪಿಯ ಓರ್ವ ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಮುಖ್ಯವಕ್ತಾರ ಪವನ್ ಖೇರಾ, ಮನ್ಸೂರ್ ಅಲಿಖಾನ್ ಮತ್ತು ಬಿಜೆಪಿಯ ಪ್ರೊ. ಮಾ.ನಾಗರಾಜ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ರಾಜ್ಯಸಭೆ ನಾಲ್ಕು ಸ್ಥಾನ ಮತ್ತು ವಿಧಾನ ಪರಿಷತ್‌ನ ಏಳು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಗೆ ನಾಮಪತ್ರ ಸಲ್ಲಿಕೆ ಅವಧಿ ಮುಕ್ತಾಯಗೊಂಡಿದೆ. ರಾಜ್ಯಸಭೆ ಚುನಾವಣೆಗೆ ನಾಲ್ವರು ಹಾಗೂ ಪರಿಷತ್ ಚುನಾವಣೆಗೆ 8 ಮಂದಿ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರ ಹಿಂಪಡೆಯಲು ಗುರುವಾರ ಕಡೇ ದಿನವಾಗಿದ್ದು, ನಾಮಪತ್ರ ಸಲ್ಲಿಸಿದ್ದ ಕಾಂಗ್ರೆಸ್‌ನ ಮೂವರು ಮತ್ತು ಬಿಜೆಪಿಯ ಒಬ್ಬರು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ. ಹೆಚ್ಚುವರಿ ಅಭ್ಯರ್ಥಿ ಉಮೇದುವಾರಿಕೆಯನ್ನು ಸಲ್ಲಿಸದ ಕಾರಣ ವಿಧಾನಸಭೆಯ ಕಾರ್ಯದರ್ಶಿ ಹಾಗೂ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರು ಫಲಿತಾಂಶವನ್ನು ಪ್ರಕಟಿಸಿದರು. ನಾಲ್ವರು ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಪ್ರಕಟಿಸಿದ್ದಾರೆ.



ನವದೆಹಲಿಯಲ್ಲಿರುವ ಕೆಪಿಸಿಸಿ ನೂತನ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಕಾಂಗ್ರೆಸ್ ಮುಖಂಡ ರಾಹುಲ್‌ಗಾಂಧಿಯನ್ನು ಭೇಟಿಮಾಡಿ ಪಕ್ಷದ ವಿಚಾರಗಳ ಬಗ್ಗೆ ಚರ್ಚಿಸಿದರು.

## ರಾಜ್ಯದ ಸಮಗ್ರ ಅಭಿವೃದ್ಧಿಗೆ ಸಹಕಾರ ನೀಡಿ

### ಪ್ರಧಾನಮಂತ್ರಿ ನರೇಂದ್ರ ಮೋದಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ

ನವದೆಹಲಿ, ಜೂ.11: ನೀರಾವರಿ ಯೋಜನೆಗಳಿಗೆ ಸಹಕಾರ, ಕೇಂದ್ರದ ಬಾಕಿ ಅನುದಾನ, ಬೆಂಗಳೂರಿಗೆ ವಿಶೇಷ ಅನುದಾನ, ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ ಸೇರಿ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸಹಕರಿಸಲು ಸಿಎಂ ಡಿ.ಕೆ. ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ 18 ಬೇಡಿಕೆಗಳ ಪಟ್ಟಿ ಸಲ್ಲಿಸಿದ್ದಾರೆ. ದೆಹಲಿಯ ರಾಷ್ಟ್ರಪತಿ ಭವನದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರನ್ನು ಶಿವಕುಮಾರ್ ಅವರು ಗುರುವಾರ ಭೇಟಿ ಮಾಡಿ ಅಹವಾಲು ಸಲ್ಲಿಸಿ ಸಮಾಲೋಚನೆ ನಡೆಸಿದರು.

**ಬೇಡಿಕೆಗಳು ಏನೇನು?:**

**1) ಮೇಕೆದಾಟು ಯೋಜನೆ:** ಮೇಕೆದಾಟು ವಿಚಾರವಾಗಿ ಸುಪ್ರೀಂ ಕೋರ್ಟ್ 13.11.2025ರಂದು ತಮಿಳುನಾಡಿನ ವಿವಿಧ ಅರ್ಜಿಗಳನ್ನು ವಜಾಗೊಳಿಸಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಈಗಾಗಲೇ ಯೋಜನೆಯ ಮೌಲ್ಯಮಾಪನ ಮಾಡುವಂತೆ ಕೇಂದ್ರ ಜಲ ಆಯೋಗಕ್ಕೆ ಸೂಚಿಸಿರುವುದರಿಂದ, ಈ ಯೋಜನೆಗೆ ಶೀಘ್ರ ಅನುಮತಿ ನೀಡಬೇಕು.

**2) ಕೃಷ್ಣಾ ಮೇಲ್ದಂಡೆ ಯೋಜನೆಗೆ ಗೆಜೆಟ್ ಅಧಿಸೂಚನೆ:** ಕೃಷ್ಣಾ ನದಿ ನೀರು ಹಂಚಿಕೆಗೆ ಸಂಬಂಧಿಸಿದಂತೆ, ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ ತೀರ್ಪು ನೀಡಿ ಒಂದು ದಶಕಕ್ಕೂ ಹೆಚ್ಚು ಕಾಲ ಕಳೆದಿದ್ದರೂ, ಕೇಂದ್ರ ಸರ್ಕಾರವು ಈ ತೀರ್ಪನ್ನು ಇನ್ನೂ ಗೆಜೆಟ್‌ನಲ್ಲಿ ಅಧಿಸೂಚಿಸಿಲ್ಲ. ಕರ್ನಾಟಕ ರಾಜ್ಯ ಈ ಯೋಜನೆ ಜಾರಿಗೆ ಅನುಷ್ಠಾನದಲ್ಲಿ ಭಾರಿ ಮೊತ್ತವನ್ನು ಹೂಡಿಕೆ ಮಾಡಿದ್ದು, ಯೋಜನೆ ಮುಂದುವರಿಸಲು ಕೇಂದ್ರದ ಬೆಂಬಲದ ಅಗತ್ಯವಿದೆ.

**3) ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ ನೆರವು:** 2023–24ರ ಕೇಂದ್ರ ಬಜೆಟ್‌ನಲ್ಲಿ 5300 ಕೋಟಿ ರೂ.ಗಳ ನೆರವನ್ನು ಘೋಷಿಸಿತ್ತು. ಆದರೆ, 3 ವರ್ಷಗಳು ಕಳೆದರೂ ರಾಜ್ಯಕ್ಕೆ ಈ ಆರ್ಥಿಕ ನೆರವು ಬಿಡುಗಡೆಯಾಗಿಲ್ಲ. ಇತ್ತೀಚೆಗೆ ನಡೆದ ಜಲಶಕ್ತಿ ಸಚಿವಾಲಯದ ಸಲಹಾ ಸಮಿತಿಯ 160 ನೇ ಸಭೆಯಲ್ಲಿ, ಕರ್ನಾಟಕದ ಭದ್ರಾ ಮೇಲ್ದಂಡೆ ಯೋಜನೆಯ 21,167.93 ಕೋಟಿ ರೂ.ಗಳ ಪರಿಷ್ಕೃತ ವೆಚ್ಚದ ಅಂದಾಜಿನ ಪ್ರಸ್ತಾವನೆಯನ್ನು ಮೌಲ್ಯೀಕರಿಸಲಾಗಿದೆ. ಭಾರತ ಸರ್ಕಾರದ PMKSY-AIBP ಯೋಜನೆಯಡಿ ಈ ಯೋಜನೆಗೆ ನೆರವನ್ನು ಶೀಘ್ರವಾಗಿ ಬಿಡುಗಡೆ ಮಾಡಬೇಕು.

**4) ಕಳಸಾ ಮತ್ತು ಬಂಡೂರಿ ನಾಲಾ ಯೋಜನೆ:** ಕಳಸಾ ಮತ್ತು ಬಂಡೂರಿ ಯೋಜನೆಗೆ ಅರಣ್ಯ/ವನ್ಯಜೀವಿ ಮಂಜೂರಾತಿಯನ್ನು ಇನ್ನೂ ನೀಡಿಲ್ಲ. ಈ ಯೋಜನೆಗೆ ಯಾವುದೇ ಕಾನೂನು ಅಡಚಣೆಗಳಿಲ್ಲದಿದ್ದರೂ ಅನುಮತಿ ಬಾಕಿ ಉಳಿದಿದ್ದು, ಈ ಅನುಮತಿ ನೀಡಬೇಕಾಗಿ ಮನವಿ ಮಾಡಲಾಗಿದೆ.

5) **PMKSY-AIBP, FMBAP ಮತ್ತು MCAD ಯೋಜನೆಗಳಡಿ ನೀರಾವರಿ ಯೋಜನೆಗಳಿಗೆ ನೆರವು:** ಕರ್ನಾಟಕ ರಾಜ್ಯವು ಭಾರತ ಸರ್ಕಾರದ AIBP-PMKSY ಮತ್ತು FMBAP ಯೋಜನೆಗಳಡಿ ವಿವಿಧ ಯೋಜನೆಗಳಿಗೆ ಕೇಂದ್ರದ ನೆರವು ಕೋರಿ ಫೆಬ್ರವರಿ 2025 ರಲ್ಲಿ ನವದೆಹಲಿಯ DoWR, RD & GR ಮತ್ತು CWC ಗೆ PFR / DPR ಗಳನ್ನು ಸಲ್ಲಿಸಿದೆ. ಸೊಂತಿ ಏತ ನೀರಾವರಿ ಯೋಜನೆ, ಕೃಷ್ಣಾಮೇಲ್ದಂಡೆ ಯೋಜನೆಯ ಇಂಡಿ ಕಾಲುವೆ (64 ರಿಂದ 172 ಕಿ.ಮೀ.ವರೆಗೆ) ಮಲಪ್ರಭಾ ಕಾಲುವೆ ಘಟಪ್ರಭಾ ಬಲದಂಡೆ ಕಾಲುವೆ ಮತ್ತು ಚಿಕ್ಕೋಡಿ ಶಾಖಾ ಕಾಲುವೆ, ತುಂಗಭದ್ರಾ ಎಡದಂಡೆ ಕಾಲುವೆ ವ್ಯವಸ್ಥೆಯ ಬಾಕಿ ಉಳಿದಿರುವ ಕಾಮಗಾರಿಗಳು ಬೆಣ್ಣೆಹಳ್ಳ ನದಿ ಪ್ರವಾಹ ನಿಯಂತ್ರಣ ಮತ್ತು ಪ್ರವಾಹ ನಿರ್ವಹಣೆ ಯೋಜನೆ ಸೇರಿದಂತೆ ಒಟ್ಟು ಅಂದಾಜು ವೆಚ್ಚ 11,122.76 ಕೋಟಿ ರೂ.ಗಳಾಗಿದ್ದು, ಈ ಯೋಜನೆಗಳಿಗೆ ಶೀಘ್ರ ಅನುಮೋದನೆ ನೀಡಬೇಕು.

**6) ನದಿಗಳ ಜೋಡಣೆ ಯೋಜನೆಯಲ್ಲಿ ನ್ಯಾಯಯುತ ಪಾಲು:** ನದಿಗಳ ಜೋಡಣೆ ಕಾರ್ಯಕ್ರಮದ ಗೋದಾವರಿ–ಕಾವೇರಿ ಮತ್ತು ಬೇಡ್ತಿ–ವರದಾ ಲಿಂಕ್ ಯೋಜನೆಗಳ ಅಡಿಯಲ್ಲಿ ರಾಜ್ಯಕ್ಕೆ ಕನಿಷ್ಠ 40–45 ಟಿಎಂಸಿ ನ್ಯಾಯಸಮ್ಮತ ಹಂಚಿಕೆ ಮಾಡಬೇಕು.



**7)ಗ್ರಾಮ ಪಂಚಾಯಿತಿಗಳಿಗೆ 15 ನೇ ಹಣಕಾಸು ಆಯೋಗದ ಅನುದಾನ:** ಕರ್ನಾಟಕಕ್ಕೆ 2025–26ರ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ 2860 ಕೋಟಿ ರೂ.ಗಳ ಅನುದಾನ ಇನ್ನೂ ಬಾಕಿ ಇದೆ. ಈ ಅನುದಾನವನ್ನು ಸಕಾಲದಲ್ಲಿ ಬಿಡುಗಡೆ ಮಾಡಬೇಕು.

**8) ಬೆಂಗಳೂರಿಗೆ 26,000 ಕೋಟಿ ರೂ. ವಿಶೇಷ ಅನುದಾನ:** ರಾಷ್ಟ್ರೀಯ ಆರ್ಥಿಕತೆಗೆ ಬೆಂಗಳೂರಿನ ಕೊಡುಗೆಯನ್ನು ಪರಿಗಣಿಸಿ. ಇಲ್ಲಿನ ಮೂಲಸೌಕರ್ಯವನ್ನು ಬಲಪಡಿಸಲು 26,000 ಕೋಟಿ ರೂ.ಗಳ ನೆರವು ನೀಡಬೇಕು.

**9) ಎಸ್‌ಟಿಆರ್‌ಆರ್ ಯೋಜನೆ:** ಬೆಂಗಳೂರು ಸ್ಯಾಟಲೈಟ್ ಟೌನ್ ರಿಂಗ್ ರೋಡ್ ಯೋಜನೆಗೆ 01.01.2025 ರಂದು PPPAC ಅನುಮತಿ ನೀಡಿದ್ದರೂ, ಸಚಿವಸಂಪುಟದಲ್ಲಿ ಇನ್ನೂ ಅನುಮೋದನೆ ಸಿಕ್ಕಿಲ್ಲ. ಈ ಪ್ರಸ್ತಾವನೆಯು ಪ್ರಸ್ತುತ ಪ್ರಧಾನಮಂತ್ರಿಗಳ ಕಚೇರಿಯಲ್ಲಿದ್ದು ಕರ್ನಾಟಕ ಸರ್ಕಾರ ಅನುಮೋದನೆಯ ನಿರೀಕ್ಷೆಯಲ್ಲಿದೆ.

**10) ಬೆಂಗಳೂರು ಉಪನಗರ ರೈಲಿಗೆ ಹಣ ಬಿಡುಗಡೆ, ಬೆಂಗಳೂರು–ಮುಂಬೈ ಹೈ–ಸ್ಪೀಡ್ ರೈಲು ಕಾರಿಡಾರ್ ಪ್ರಾರಂಭ: ಬೆಂಗಳೂರು ಉಪನಗರ ರೈಲು ಯೋಜನೆಗೆ** ರೋಲಿಂಗ್ ಸ್ಟಾಕ್ ಅನ್ನು ಕಕಕ ಮಾದರಿಯಿಂದ ಇಕ್ವಿಟಿ ಮಾದರಿಗೆ ಬದಲಾಯಿಸುವ ಔಪಚಾರಿಕ ಅನುಮೋದನೆಯನ್ನು ತ್ವರಿತಗೊಳಿಸಲು ನಾನು ಕೇಂದ್ರ ಸಚಿವ ಸಂಪುಟವನ್ನು ಒತ್ತಾಯಿಸುತ್ತೇನೆ. ಕಿತ್ತೂರು ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕದ ಪ್ರಮುಖ ಜಿಲ್ಲೆಗಳನ್ನು ಸಂಪರ್ಕಿಸುವ ಬೆಂಗಳೂರು–ಮುಂಬೈ ಹೈ–ಸ್ಪೀಡ್ ರೈಲು ಕಾರಿಡಾರ್ ಯೋಜನೆಯನ್ನು ಸಹ ತ್ವರಿತಗೊಳಿಸಬೇಕಾಗಿ ವಿನಂತಿಸುತ್ತೇನೆ.

**11) ಡಬಲ್ ಡೆಕ್ಕರ್ ಫ್ಲೈಓವರ್ ಒಳಗೊಂಡ ಬಿಎಂಆರ್‌ಸಿಎಲ್ ಹಂತ–3 ಯೋಜನೆಗೆ ಅನುಮೋದನೆ:** 37.121 ಕಿಮೀ ಉದ್ದಕ್ಕೆ ಮೆಟ್ರೋ ಮಾರ್ಗವನ್ನು 9,700 ಕೋಟಿ ರೂ. ವೆಚ್ಚದಲ್ಲಿ ಡಬಲ್ ಡೆಕ್ಕರ್ ಮೇಲ್ಸೇತುವೆ ನಿರ್ಮಿಸಲು ನಿರ್ಧರಿಸಿದೆ. ಕರ್ನಾಟಕ ಸರ್ಕಾರ ಈ ವೆಚ್ಚ ಭರಿಸಲಿದ್ದು, ಈ ಪರಿಷ್ಕೃತ ಯೋಜನೆಗೆ ಅನುಮೋದನೆ ನೀಡಬೇಕು.

...3ನೇ ಪುಟಕ್ಕೆ

# ದೆಹಲಿಯಲ್ಲಿ ಸಿಎಂ ಡಿಕೆಶಿ: ಸಚಿವ ಸಂಪುಟ ವಿಸ್ತರಣೆ ಕಸರತ್ತು, ಸಚಿವಕಾಂಕ್ಷಿಗಳಲ್ಲಿ ತಳಮಳ

**ನವದೆಹಲಿ, ಜೂ.11:** ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ದೆಹಲಿಗೆ ಡಿಕೆ ಶಿವಕುಮಾರ್ ಆಗಮಿಸಿದ್ದು, ಡಿಕೆ ಶಿವಕುಮಾರ್ ದೆಹಲಿ ಭೇಟಿ ಬೆನ್ನಲ್ಲೇ ಸಚಿವ ಸಂಪುಟ ವಿಸ್ತರಣೆ ಚರ್ಚೆ ಮುನ್ನಲೆಗೆ ಬಂದಿದೆ. ಡಿ.ಕೆ ಶಿವಕುಮಾರ್ ಬೆನ್ನಲೆ ದೆಹಲಿಗೆ ತೆರಳಿರುವ ಸಚಿವಕಾಂಕ್ಷಿಗಳು ದೆಹಲಿಯಲ್ಲಿ ಲಾಬಿ ಆರಂಭಿಸಿದ್ದಾರೆ.

ಶಾಸಕರಾದ ಎಸ್.ಎನ್ ಸುಬ್ಬಾರೆಡ್ಡಿ, ಬಸವನಗೌಡ ಬಾದರ್ಲಿ, ಬಸನಗೌಡ ದದ್ದಲ್, ಎ.ಸಿ ಶ್ರೀನಿವಾಸ್, ಬೇಳೂರು ಗೋಪಾಲಕೃಷ್ಣ, ಎಚ್.ಕೆ ಪಾಟೀಲ್, ನಾರಾ ಭರತ್‌ರೆಡ್ಡಿ, ಕಂಪ್ಲಿ ಗಣೇಶ್ ಸೇರಿ ಹಲವು ಶಾಸಕರು ದೆಹಲಿಯಲ್ಲಿ ಠಿಕಾಣಿ ಹೂಡಿದ್ದು ಹೈಕಮಾಂಡ್ ನಾಯಕರ ಭೇಟಿ ಮಾಡುತ್ತಿದ್ದಾರೆ.

**ಬಳ್ಳಾರಿ ಜಿಲ್ಲೆಗೆ ಅವಕಾಶ ಕೊಡಿ:** ಸಚಿವ ಸಂಪುಟ ವಿಸ್ತರಣೆಯಲ್ಲಿ ಯುವಕರಿಗೆ ಆದ್ಯತೆ ನೀಡುವ ಬಗ್ಗೆ ಚರ್ಚೆ ಕೇಳಿಬಂದ ಬೆನ್ನಲ್ಲೇ ದೆಹಲಿಯಲ್ಲಿ ಸಂಪುಟ ಸೇರಲು ಯುವ ಶಾಸಕರು ಪ್ರಯತ್ನ ಮಾಡುತ್ತಿದ್ದಾರೆ. ಬಳ್ಳಾರಿಯ ನಾರಾ ಭರತ್ ರೆಡ್ಡಿ, ಗಣೇಶ್ ಹೈಕಮಾಂಡ್ ನಾಯಕರನ್ನು ಮತ್ತು ಸಿಎಂ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ. ಸಂಪುಟದಲ್ಲಿ ಬಳ್ಳಾರಿ ಜಿಲ್ಲೆಗೆ ಅವಕಾಶ ಕೊಡಬೇಕು, ಯುವಕರಿಗೆ ಆದ್ಯತೆ ನೀಡಿ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ ಜಿಲ್ಲೆಯಲ್ಲಿ ಯಾರಿಗೆ ಕೊಟ್ಟರೂ ಅಭ್ಯಂತರವಿಲ್ಲ ಆದರೆ ಬಳ್ಳಾರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ್ದೇವೆ ಎಂದು ನಾರಾ ಭರತ್ ರೆಡ್ಡಿ ಹೇಳಿದರು. ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ನಮಗೆ ಸಚಿವ ಸ್ಥಾನ ಕೊಡಿ ಎಂದು ನಾವು ಕೇಳುವುದಿಲ್ಲ ಆದರೆ ಬಳ್ಳಾರಿಯಲ್ಲಿ ಐವರು ಶಾಸಕರು ಇದ್ದಾರೆ ಹೀಗಾಗಿ ಸೂಕ್ತ ಅವಕಾಶ ಬಳ್ಳಾರಿಗೂ ಸಿಗಬೇಕು, ಯಾವುದೇ ಶಾಸಕರನ್ನು ಕ್ಯಾಬಿನೆಟ್ ತೆಗೆದುಕೊಂಡರು ನಮ್ಮ ಭಿನ್ನಾಭಿಪ್ರಾಯ ಇಲ್ಲ ಎಂದು ತಿಳಿಸಿದ್ದಾರೆ.

ಕಂಪ್ಲಿ ಗಣೇಶ ಮಾತನಾಡಿ, ಬಳ್ಳಾರಿಯಂತಹ ಜಿಲ್ಲೆಯಲ್ಲಿ ಗೆಲ್ಲುವುದು ಸುಲಭ ಮಾತಲ್ಲ ಜಿಲ್ಲೆಯಲ್ಲಿ ಐವರು ಶಾಸಕರಿದ್ದೇವೆ, ಯಾರಿಗಾದರೂ ಅವಕಾಶ ಕೊಡಬೇಕು ಎಂದು ಕೇಳಿದ್ದೇವೆ ಯಾವಾಗಲೂ ಮೊದಲ ಬೆಂಚ್ ಗೆ ಆದ್ಯತೆ ಕೊಟ್ಟರೆ ಹೇಗೆ? ಎರಡನೇ ಬೆಂಚ್ ನಾಯಕರಿಗೂ ಆದ್ಯತೆ ನೀಡಬೇಕು. ನಮಗೂ ಅವಕಾಶ ನೀಡದರೆ ನಾವು ಕಲಿತುಕೊಳ್ಳುತ್ತೇವೆ, ಭವಿಷ್ಯದ ರಾಜಕೀಯಕ್ಕೆ ಯುವ ನಾಯಕತ್ವಕ್ಕೆ ಆದ್ಯತೆ ನೀಡುವುದು ಮುಖ್ಯ. ಹೀಗಾಗಿ ನಾವು ಎಲ್ಲರನ್ನೂ ಭೇಟಿಯಾಗಿ ಅವಕಾಶ ಕೇಳಿದ್ದೇವೆ. ಬಳ್ಳಾರಿ ಜಿಲ್ಲೆಗೊಂದು ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

**ಹೊಸ ಮುಖಗಳಿಗೆ ಮಣೆ ಹಾಕಲು ಯುವ ಶಾಸಕರ ಒತ್ತಡ**

**ಜೂ.21ರ ನಂತರ ಸಂಪುಟ ವಿಸ್ತರಣೆ ಕಸರತ್ತು ಮತ್ತಷ್ಟು ಜೋರಾಗುವ ಸಾಧ್ಯತೆ**







### ಸಚಿವ ಸ್ಥಾನ ಆಕಾಂಕ್ಷಿಗಳು

ಸಿದ್ದರಾಮಯ್ಯ, ಡಿ.ಕೆ ಬಣದ ಹಲವು ಶಾಸಕರು ಸಂಪುಟ ಸೇರಲು ಬಯಸುತ್ತಿದ್ದಾರೆ. ಎಚ್.ಸಿ.ಮಹದೇವಪ್ಪ, ಆರ್ ಬಿ ತಿಮ್ಮಾಪುರ, ಜಮೀರ್ ಅಹಮದ್, ಎಚ್.ಕೆ. ಪಾಟೀಲ್, ಕೆ ವೆಂಕಟೇಶ್, ಸಂತೋಷ್ ಲಾಡ್, ಚಲುವರಾಯಸ್ವಾಮಿ, ಎಂ.ಸಿ. ಸುಧಾಕರ್, ದಿನೇಶ್ ಗುಂಡೂರಾವ್, ಎಸ್ ಎಸ್ ಮಲ್ಲಿಕಾರ್ಜುನ, ಶಿವರಾಜ್ ತಂಗಡಗಿ, ಲಕ್ಷ್ಮಿ ಹೆಬ್ಬಾಳ್ಕರ್, ಮಧು ಬಂಗಾರಪ್ಪ, ಶಿವಾನಂದ ಪಾಟೀಲ, ಶರಣಬಸಪ್ಪ ದರ್ಶನಾಪುರ, ಎನ್ ಎಸ್ ಬೋಸರಾಜು ಕೂಡಾ ಸಚಿವಕಾಂಕ್ಷಿಗಳಾಗಿದ್ದಾರೆ. ಸದ್ಯ ಡಿಕೆ ಶಿವಕುಮಾರ್ ಈ ಬಾರಿಯ ಪ್ರವಾಸದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿಯಾಗಿ ಈ ಬಗ್ಗೆ ಚರ್ಚೆ ನಡೆಸುವುದು ಅನುಮಾನ ಎನ್ನಲಾಗುತ್ತಿದೆ ಅದಾಗ್ಯೂ ಸಚಿವಕಾಂಕ್ಷಿಗಳ ಮಾತ್ರ ಎಲ್ಲಿಲ್ಲದ ಕಸರತ್ತು ನಡೆಸುತ್ತಿದ್ದಾರೆ. ಜೂನ್ 21 ನಂತರ ಸಂಪುಟ ವಿಸ್ತರಣೆ ಕಸರತ್ತು ಜೋರಾಗಬಹುದು ಎಂದು ಮೂಲಗಳು ತಿಳಿಸಿವೆ.

### ನಿತ್ಯ ಪಂಚಾಂಗ 12.06.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಬಹುಳ, ದ್ವಾದಶಿ, ಅಶ್ವಿನಿ ನಕ್ಷತ್ರ, ಪ್ರದೋಷ್

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04-6.33 | 12.00-1.30 | 3.00-4.00 |
| ಸೋಮ | ಬೆ.7.20-9.04 | 10.30-12.00 | 1.30-12.00 |
| ಮಂಗಳ | ಮ.3.25-4.59 | 9.00-10.30 | 12.00-1.30 |
| ಬುಧ | ಮ.12.16-1.50 | 7.30-9.00 | 10.30-12.00 |
| ಗುರು | ಮ.1.50-3.29 | 6.00-7.30 | 9.00-10.30 |
| ಶುಕ್ರ | ಬೆ.10.42-12.16 | 3.00-4.30 | 7.30-9.00 |
| ಶನಿ | ಬೆ.9.07-10.41 | 1.30-3.00 | 6.00-7.30 |

# ಗ್ಯಾರಂಟಿ ಹೆಸರಲ್ಲಿ ಮತ ಪಡೆದು, ಅನರ್ಹ ಎಂದು ಹಕ್ಕು ಕಸಿಯುವ ಯತ್ನ

**ಶಕ್ತಿ ಯೋಜನೆ ಫಲಾನುಭವಿಗಳಿಗೆ ಬಯೋಮೆಟ್ರಿಕ್ ಹೆಸರಲ್ಲಿ ಕಿರುಕುಳ: ಸರ್ಕಾರದ ವಿರುದ್ಧ ಅಶೋಕ್ ವಾಗ್ದಾಳಿ**

**ಬೆಂಗಳೂರು, ಜೂ.11:** ಗ್ಯಾರಂಟಿ ಎಂದು ಮತ ಪಡೆದು, ಅನರ್ಹ ಎಂದು ಹಕ್ಕು ಕಸಿಯುವ ಕಾಂಗ್ರೆಸ್ ಸರ್ಕಾರ ರಾಜ್ಯದ ತಾಯಂದಿರಿಗೆ ಉತ್ತರ ಕೊಡಲೇಬೇಕು ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.

ತಮ್ಮ ಎಕ್ಸ್ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದು, ತಕ್ಷಣವೇ ಈ ಅನ್ಯಾಯವನ್ನು ನಿಲ್ಲಿಸಿ, ಅರ್ಹ ಫಲಾನುಭವಿಗಳಿಗೆ ಯಾವುದೇ ಗೊಂದಲವಿಲ್ಲದೆ ಯೋಜನೆಯ ಹಣ ಬಿಡುಗಡೆ ಮಾಡಬೇಕು. ಇಲ್ಲದಿದ್ದರೆ ತಾಯಂದಿರ ಶಾಪಕ್ಕೆ ಈ ಸರ್ಕಾರ ಸುಟ್ಟು ಭಸ್ಮವಾಗುವುದು ಗ್ಯಾರಂಟಿ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ವೋಟ್ ಬ್ಯಾಂಕ್‌ಗಾಗಿ ಮಹಿಳೆಯರನ್ನು ಬಳಸಿಕೊಂಡು, ಅಧಿಕಾರ ಸಿಕ್ಕ ಬಳಿಕ ಅವರ ಹಕ್ಕುಗಳನ್ನು ಕಸಿದುಕೊಳ್ಳುವ ಕಾಂಗ್ರೆಸ್‌ನ ಈ ದ್ವಂದ್ವ ನೀತಿಯನ್ನು ಕರ್ನಾಟಕದ ಜನತೆ ಗಮನಿಸುತ್ತಿದ್ದಾರೆ. ಚುನಾವಣೆಗೂ ಮೊದಲು ಪ್ರತಿ ಮನೆಯ ಯಜಮಾನಿಗೂ 2,000 ರೂ. ಎಂದು ಭರವಸೆ, ಚುನಾವಣೆ ಬಳಿಕ ಅನರ್ಹರ ಪಟ್ಟಿ, ಈಗ ಬಯೋಮೆಟ್ರಿಕ್ ಹೆಸರಲ್ಲಿ ಹೊಸ ಕಿರುಕುಳ, ಇದೇನಾ ಕಾಂಗ್ರೆಸ್‌ನ ಮಹಿಳಾ ಸಬಲೀಕರಣ ಎಂದು ಸರ್ಕಾರವನ್ನು ಪ್ರಶ್ನಿಸಿದ್ದಾರೆ.




ಬೆಂಗಳೂರಿನ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಹುದ್ದೆಯಲ್ಲಿ 4399 ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಮಾಧ್ಯಮ ಸಂವಾದದಲ್ಲಿ ಪಾಲ್ಗೊಂಡರು. ಮಾಜಿ ಪ್ರಧಾನಿ ಪಂಡಿತ್ ಜವಾಹರ್ ಲಾಲ್ ನೆಹರು (4398 ದಿನಗಳು) ಅವರ ಹಿಂದಿನ ದಾಖಲೆಯನ್ನು ಮೋದಿ ಮೀರಿಸಿದ್ದಾರೆ ಎಂದು ವಿಜಯೇಂದ್ರ ಶ್ಲಾಘಿಸಿದರು. ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣ ಸ್ವಾಮಿ ಮತ್ತು ಸಂಸದರಾದ ಗೋವಿಂದ ಕಾರಜೋಳ ಮತ್ತು ಪಿ.ಸಿ.ಮೋಹನ್ ಹಾಗೂ ಇತರ ಮುಖಂಡರು ಉಪಸ್ಥಿತರಿದ್ದರು.

# ಕಳೆದ 3 ವರ್ಷದಲ್ಲಿ ರಾಜ್ಯದಲ್ಲಿ ಅಭಿವೃದ್ಧಿಕಾರ್ಯ ನಡೆದಿಲ್ಲ: ಬಿವೈವಿ

**ವೈಫಲ್ಯ ಮುಚ್ಚಿಕೊಳ್ಳಲು ಕೇಂದ್ರದ ವಿರುದ್ಧ ಬೊಟ್ಟು ಮಾಡುತ್ತಿದೆ ರಾಜ್ಯ ಸರ್ಕಾರ: ಬಿ.ವೈ. ವಿಜಯೇಂದ್ರ ಆಕ್ಷೇಪ**




**ಬೆಂಗಳೂರು, ಜೂ.11:** ರಾಜ್ಯದ ಕಾಂಗ್ರೆಸ್ ಸರಕಾರವು ತನ್ನ ವೈಫಲ್ಯ ಮುಚ್ಚಿ ಹಾಕುವ ಸಲುವಾಗಿ ಕೇಂದ್ರ ಸರಕಾರ ಮಲತಾಯಿ ಧೋರಣೆ ಮಾಡುತ್ತಿದೆ; ಅನ್ಯಾಯ ಮಾಡುತ್ತ ಇದೆ ಎಂದು ಪದೇಪದೇ ಪ್ರಸ್ತಾಪಿಸುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಆಕ್ಷೇಪಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಗುರುವಾರ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು. ವಾಸ್ತವಿಕ ಸತ್ಯ ಏನೆಂದರೆ, ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ; ಪರಿಶಿಷ್ಟ ಪಂಗಡಕ್ಕೆ ಮೀಸಲಿಟ್ಟ ಹಣವನ್ನೂ ತೆಲಂಗಾಣಕ್ಕೆ ತೆಗೆದುಕೊಂಡು ಹೋಗಿ ದುರ್ಬಳಕೆ ಮಾಡಿದ್ದು ರಾಜ್ಯದ ಜನರ ಮುಂದಿದೆ ಎಂದು ಗಮನ ಸೆಳೆದರು. ಅಭಿವೃದ್ಧಿ ಶೂನ್ಯ ಕಾಂಗ್ರೆಸ್ ಸರಕಾರವಿದ್ದು, ಇವರ ವೈಫಲ್ಯ ಮುಚ್ಚಿಹಾಕಲು ಕೇಂದ್ರ ಸರಕಾರ ದೂರುವ ಕೆಲಸ ಮಾಡುತ್ತಾರೆ ಎಂದು ಆರೋಪಿಸಿದರು.

ಮಾಜಿ ಉಪಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಪ್ರಶ್ನೆಗೆ ಉತ್ತರಿಸಿ, ನಳ್ಳಿಗಳಲ್ಲಿ ನೀರು ಬರಿಸುವ ಜವಾಬ್ದಾರಿ ರಾಜ್ಯ ಸರಕಾರದ್ದು ಎಂದು ತಿಳಿಸಿದರು. ರಾಜ್ಯ ಸರಕಾರಕ್ಕೆ ಜಲಜೀವನ್ ಯೋಜನೆಯಡಿ ಅನುದಾನ ನೀಡಲಾಗುತ್ತದೆ. ಆ ಹಣದ ಸದುಪಯೋಗ ಮಾಡಿ, ಸುರಕ್ಷಿತ, ಶುದ್ಧವಾದ ಕುಡಿಯುವ ನೀರನ್ನು ಪ್ರತಿ ಮನೆಗೂ ಕೊಡುವ ಜವಾಬ್ದಾರಿ ರಾಜ್ಯ ಸರಕಾರದ ಮೇಲಿದೆ ಎಂದು ತಿಳಿಸಿದರು.

ಸಮರ್ಪಕ ನೀರಿನ ಮೂಲವನ್ನು ಗುರುತಿಸದೇ ಇರುವುದು ರಾಜ್ಯ ಸರಕಾರದ ವೈಫಲ್ಯ. ಕೆರೆ, ಹೊಳೆ, ಹಳ್ಳ, ಡ್ಯಾಂಗಳಿಂದ ಕೊಡುವ ಕೆಲಸ ಮಾಡಿದರೆ ಅದು ಖಾಯಂ ಆಗಿರುತ್ತದೆ. ಕೇಂದ್ರ ಸರಕಾರದ ಹಣವನ್ನು ಬಳಸಿ ಸಮರ್ಪಕವಾಗಿ ಅನುಷ್ಠಾನ ಮಾಡುವುದು ರಾಜ್ಯ ಸರಕಾರದ ಕೆಲಸ. ಇದು ಒಕ್ಕೂಟ ವ್ಯವಸ್ಥೆ ಎಂದು ಅವರು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು.ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಪಿ.ಸಿ.ಮೋಹನ್, ರಾಜ್ಯ ಕಾರ್ಯದರ್ಶಿ ವಿನಯ್ ಬಿದರೆ ಅವರು ಉಪಸ್ಥಿತರಿದ್ದರು.

# ಗೃಹಲಕ್ಷ್ಮಿಗೆ ಹೊಸ ನಿಯಮ ಸರ್ಕಾರದ ವಿರುದ್ಧ ಜೆಡಿಎಸ್ ವಾಗ್ದಾಳಿ

**ಬೆಂಗಳೂರು, ಜೂ.11:** ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಗೆ ಹೊಸ ನಿಯಮಗಳನ್ನು ಜಾರಿಗೊಳಿಸುತ್ತಿರುವುದನ್ನು ವಿರೋಧಿಸಿ ವಿರೋಧ ಪಕ್ಷವಾದ ಜೆಡಿಎಸ್ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಈ ಕುರಿತು ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ರಾಜ್ಯ ಸರ್ಕಾರವು ಇಲ್ಲಸಲ್ಲದ ನೆಪಗಳನ್ನು ಹೇಳಿ ಬಡ ತಾಯಂದಿರ ಹೆಸರನ್ನು ಯೋಜನೆಯಿಂದ ಕೈಬಿಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ. ರಾಜ್ಯದಲ್ಲಿ ಸದ್ಯ 1.30 ಕೋಟಿ ಗೃಹಲಕ್ಷ್ಮಿ ಫಲಾನುಭವಿಗಳಿದ್ದು, ಇದರಲ್ಲಿ ಸುಮಾರು 1.48 ಲಕ್ಷ ಮೃತಪಟ್ಟ ಮಹಿಳೆಯರ ಖಾತೆಗಳಿಗೂ ಕಳೆದ ಐದು ತಿಂಗಳುಗಳಿಂದ ಹಣ ಸಂದಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ಅಕ್ರಮ ತಡೆಯಲು ಬಯೋಮೆಟ್ರಿಕ್ ದೃಢೀಕರಣ ಸೇರಿದಂತೆ ಕೆಲವು ಹೊಸ ನಿಯಮಗಳನ್ನು ಕಡ್ಡಾಯಗೊಳಿಸಲು ಸರ್ಕಾರ ನಿರ್ಧರಿಸಿದೆ.

# ತಿಪಟೂರು ಕಾಂಗ್ರೆಸ್ ಶಾಸಕ ಷಡಕ್ಷರಿ ಅವರ ಆರೋಗ್ಯದಲ್ಲಿ ಏರುಪೇರು

**ನವದೆಹಲಿ, ಜೂ.11:** ತಿಪಟೂರು ಕಾಂಗ್ರೆಸ್ ಶಾಸಕ ಷಡಕ್ಷರಿ ಅವರ ಆರೋಗ್ಯದಲ್ಲಿ ಏರುಪೇರು ಕಂಡು ಬಂದಿದ್ದು, ಆಸ್ಪತ್ರೆಗೆ ದಾಖಲಾಗಿದ್ದಾರೆಂದು ತಿಳಿದುಬಂದಿದೆ. ದೆಹಲಿಯ ಕರ್ನಾಟಕ ಭವನದಲ್ಲಿದ್ದ ವೇಳೆ ಅವರಿಗೆ ದಿಢೀರ್ ಆರೋಗ್ಯ ಸಮಸ್ಯೆ ಕಾಣಿಸಿಕೊಂಡಿದೆ. ತಕ್ಷಣವೇ ಅಲ್ಲಿದ್ದ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಅವರು ಷಡಕ್ಷರಿ ಅವರನ್ನು ಆಸ್ಪತ್ರೆಗೆ ಕರೆದೊಯ್ದು ದಾಖಲಿಸಿದ್ದಾರೆ ಎಂದು ತಿಳಿದುಬಂದಿದೆ. ಸಚಿವ ಸಂಪುಟ ವಿಸ್ತರಣೆಯ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕಾಗಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲು ಷಡಕ್ಷರಿ ಅವರು ದೆಹಲಿಗೆ ತೆರಳಿದ್ದರು. ಇದೇ ವೇಳೆ ಆರೋಗ್ಯದಲ್ಲಿ ಏರುಪೇರು ಕಂಡುಬಂದಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಗೃಹ ಸಚಿವ ಜಿ.ಪರಮೇಶ್ವರ್ ಕೂಡಾ ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು.

# ಶಾಸಕರಿಗೆ ಚಿಕಿತ್ಸೆ ಕೊಡಿಸಿದ ಡಿಸಿಎಂ ಪರಂ

**ನವದೆಹಲಿ, ಜೂ.11:** ದೆಹಲಿ ಪ್ರವಾಸದ ಸಂದರ್ಭದಲ್ಲಿ ಕರ್ನಾಟಕ ಭವನದಲ್ಲಿದ್ದ ತಿಪಟೂರು ಶಾಸಕ ಕೆ. ಷಡಕ್ಷರಿ ಅವರು ಗುರುವಾರ ಬೆಳಗ್ಗೆ ಅಸ್ವಸ್ಥಗೊಂಡಿದ್ದು, ಇದೀಗ ಚೇತರಿಸಿಕೊಳ್ಳುತ್ತಿದ್ದಾರೆ.

ಅಸ್ವಸ್ಥಗೊಂಡ ಷಡಕ್ಷರಿ ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಿ ಅಗತ್ಯ ಚಿಕಿತ್ಸೆಗೆ ವ್ಯವಸ್ಥೆ ಮಾಡಿದ್ದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಮಧ್ಯಾಹ್ನ ಕೂಡ ಆಸ್ಪತ್ರೆಗೆ ಭೇಟಿ ನೀಡಿ ಆರೋಗ್ಯವನ್ನು ವಿಚಾರಿಸಿದರು. ಈ ವೇಳೆ ವೈದ್ಯರಿಂದ ಷಡಕ್ಷರಿ ಅವರ ಆರೋಗ್ಯ ಸ್ಥಿತಿಯ ಕುರಿತು ಮಾಹಿತಿ ಪಡೆದು, ಅಗತ್ಯವಿರುವ ಎಲ್ಲ ರೀತಿಯ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿದ ಪರಮೇಶ್ವರ, ಶಾಸಕ ಷಡಕ್ಷರಿ ಅವರ ಆರೋಗ್ಯ ಸ್ಥಿರವಾಗಿದ್ದು, ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ಕೂಡ ಜತೆಗಿದ್ದರು.



ಶಾಸಕ ಷಡಕ್ಷರಿ ಅವರ ಆರೋಗ್ಯ ವಿಚಾರಿಸಲು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ದೆಹಲಿಯ ಮ್ಯಾಕ್ಸ್ ಆಸ್ಪತ್ರೆಗೆ ಭೇಟಿ ನೀಡಿದ್ದರು.



ಅಸ್ವಸ್ಥರಾಗಿ ದೆಹಲಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಾಂಗ್ರೆಸ್ ಶಾಸಕ ಕೆ ಷಡಕ್ಷರಿ ಅವರನ್ನು ಸಿಎಂ ಡಿ ಕೆ ಶಿವಕುಮಾರ್ ಅವರು ಗುರುವಾರ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.

# ಪರಿಷತ್ ಚುನಾವಣೆ: ಕೈ ಅಭ್ಯರ್ಥಿ ಮಳವಳ್ಳಿ ಶಿವಣ್ಣ ನಾಮಪತ್ರ ತಿರಸ್ಕರಿಸಲು ದೂರು

**ಕ್ರಿಮಿನಲ್ ಪ್ರಕರಣಗಳನ್ನು ಅಫಿಡವಿಟ್‌ನಲ್ಲಿ ಮುಚ್ಚಿಹಾಕಿದ್ದಾರೆ ಜೆಡಿಎಸ್ ಅಭ್ಯರ್ಥಿ ಆರೋಪ**

**ಬೆಂಗಳೂರು, ಜೂ.11:** ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯಲಿರುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮಳವಳ್ಳಿ ಶಿವಣ್ಣ ಕ್ರಿಮಿನಲ್ ಪ್ರಕರಣಗಳನ್ನು ಮುಚ್ಚಿ ಹಾಕಿದ್ದಾರೆ ಎಂದು ಜೆಡಿಎಸ್ ದೂರು ನೀಡಿದೆ.ತಮ್ಮ ಮೇಲೆ ದಾಖಲಾಗಿರುವ ಕ್ರಿಮಿನಲ್ ಪ್ರಕರಣಗಳನ್ನು ಅಫಿಡವಿಟ್‌ನಲ್ಲಿ ಶಿವಣ್ಣ ಮುಚ್ಚಿ ಹಾಕಿದ್ದು, ಅವರ ನಾಮಪತ್ರವನ್ನು ತಿರಸ್ಕರಿಸಬೇಕೆಂದು ಬಿಜೆಪಿ, ಜೆಡಿಎಸ್ ಬೆಂಬಲಿತ ಅಭ್ಯರ್ಥಿ ಗೋವಿಂದರಾಜು ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ದೂರು ನೀಡಿದ್ದಾರೆ.

# ಆರೋಪಕ್ಕೆ ಮಳವಳ್ಳಿ ಶಿವಣ್ಣ ಸ್ಪಷ್ಟನೆ



ವಿಧಾನಸೌಧದಲ್ಲಿ, ಕಾಂಗ್ರೆಸ್ ಪಕ್ಷದಿಂದ ವಿಧಾನ ಪರಿಷತ್ತಿಗೆ ನಾಮಪತ್ರ ಸಲ್ಲಿಸಿದ ಮಳವಳ್ಳಿ ಶಿವಣ್ಣ ಮತ್ತು ಅವರ ವಕೀಲ ಶತಭೀಷ್ ಶಿವಣ್ಣ ಅವರು ಇತರ ರಾಜಕೀಯ ಪಕ್ಷದ ನಾಯಕರು ಮಾಡಿದ ಆರೋಪಗಳ ಬಗ್ಗೆ ವಿವರಣೆ ಮತ್ತು ಸಮರ್ಥನೆಯನ್ನು ನೀಡಿದರು.

ತಮ್ಮ ವಿರುದ್ಧ ಆರೋಪ ಕೇಳಿಬರುತ್ತಿದ್ದಂತೆಯೇ ಕಾಂಗ್ರೆಸ್ ಅಭ್ಯರ್ಥಿ ಮಳವಳ್ಳಿ ಶಿವಣ್ಣ ಪ್ರತಿಕ್ರಿಯಿಸಿದ್ದು, ಸೋಲಿನ ಭೀತಿಯಿಂದ ಗೋವಿಂದರಾಜು ಹುನ್ನಾರ ಮಾಡುತ್ತಿದ್ದಾರೆ. ನನ್ನ ವಿರುದ್ಧ ಯಾವುದೇ ಕೇಸ್‌ಗಳು ಇಲ್ಲ. ನಾಲ್ಕು ಕೇಸ್‌ಗಳ ಬಗ್ಗೆ ನಾನು ದೂರು ಕೊಟ್ಟಿರುವುದು. ಎಂಎಲ್‌ಸಿ ಎಚ್.ವಿಶ್ವನಾಥ್ ವಿರುದ್ಧ ದೂರು ನೀಡಿದ್ದೆ. ವೋಟ್ ಚೋರಿ ಹೋಗಿ ಈಗ ಸೀಟ್ ಚೋರಿ ಮಾಡಲು ಹೋಗುತ್ತಿದ್ದಾರೆ ಎಂದು ತಿರುಗೇಟು ನೀಡಿದ್ದಾರೆ. ಎಂಎಲ್‌ಸಿ ಎಚ್.ವಿಶ್ವನಾಥ್ ನನ್ನ ವಿರುದ್ಧ ಹುನ್ನಾರ ಮಾಡಿದ್ದು, ಗೋವಿಂದರಾಜುಗೆ ಎಂಎಲ್‌ಸಿ ಎಚ್.ವಿಶ್ವನಾಥ್ ಹೇಳಿ ಕಳುಹಿಸಿದ್ದಾರೆ. ನನ್ನ ವಿರುದ್ಧ ಒಂದು ಎಫ್ಐಆರ್ ಸಹ ದಾಖಲಾಗಿಲ್ಲ. ಹುನ್ನಾರಕ್ಕೆ ಸೊಪ್ಪು ಹಾಕಲ್ಲ, ಪರಿಷತ್ ಚುನಾವಣೆಯಲ್ಲಿ ಗೆದ್ದೇ ಗೆಲ್ಲುತ್ತೇವೆ ಎಂದು ಸ್ಪಷ್ಟಪಡಿಸಿದರು.

# ಗೃಹಲಕ್ಷ್ಮಿ ಯೋಜನೆಯ ಪರಿಷ್ಕರಣೆಯೇ ಹೊರತು ಸ್ಥಗಿತ ಇಲ್ಲ ಮೃತ, ಅನರ್ಹರ ಪತ್ತೆಗಷ್ಟೇ ಕ್ರಮ: ದಿನೇಶ್ ಗೂಳಿಗೌಡ

- ಯೋಜನೆ ನಿಲ್ಲಿಸುವ ಉದ್ದೇಶ ಸರ್ಕಾರಕ್ಕಿಲ್ಲವೆಂದು ಸ್ಪಷ್ಟನೆ
- ಅರ್ಹ ಮಹಿಳಾ ಫಲಾನುಭವಿಗಳಿಗೆ ಯಾವುದೇ ನಷ್ಟವಿಲ್ಲ
- ದುರುಪಯೋಗ ತಡೆದು ಅರ್ಹರಿಗೆ ತಲುಪಿಸುವ ಉದ್ದೇಶ
- ಲಕ್ಷಾಂತರ ಮೃತ ಯಜಮಾನಿಯರ ಖಾತೆಗೆ ಹಣ ಸಂದಾಯ
- ಪ್ರತಿಪಕ್ಷಗಳಿಂದ ರಾಜಕೀಯ ಪ್ರೇರಿತ ಟೀಕೆ, ಅಪಪ್ರಚಾರ



**ಬೆಂಗಳೂರು, ಜೂ.11:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯನ್ನು ದುರುಪಯೋಗದಿಂದ ತಡೆದು, ಅರ್ಹರಿಗೆ ಮಾತ್ರ ತಲುಪಿಸುವ ನಿಟ್ಟಿನಲ್ಲಿ ಯೋಜನೆ ಪರಿಷ್ಕರಣೆಗೆ ಆಗ್ರಹಿಸಲಾಗಿದೆಯೇ ಹೊರತು, ಯೋಜನೆಯನ್ನು ನಿಲ್ಲಿಸುವ ಯಾವುದೇ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಹಾಗೂ ವಿಧಾನಪರಿಷತ್ ಶಾಸಕ ದಿನೇಶ್ ಗೂಳಿಗೌಡ ಅವರು ಸ್ಪಷ್ಟಪಡಿಸಿದ್ದಾರೆ.

ವಿರೋಧ ಪಕ್ಷದ ವರು ಗೃಹಲಕ್ಷ್ಮಿ ಯೋಜನೆ ಕುರಿತು ಇಲ್ಲದ ಅಪಪ್ರಚಾರಗಳನ್ನು ಮಾಡುತ್ತಿದ್ದು, ಸಾರ್ವಜನಿಕರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ.

ವಿರೋಧ ಪಕ್ಷದ ನಾಯಕರ ಆರೋಪಗಳಲ್ಲಿ ಯಾವುದೇ ಸತ್ಯಾಂಶವಿಲ್ಲ ಎಂದು ಅವರು ಜರೆದಿದ್ದಾರೆ.

ರಾಜ್ಯದಲ್ಲಿ ಇದುವರೆಗೆ 1 ಕೋಟಿ 24 ಲಕ್ಷಕ್ಕೂ ಅಧಿಕ ಮಹಿಳಾ ಯಜಮಾನಿಯರಿಗೆ ಪ್ರತಿ ತಿಂಗಳು ತಲಾ 2,000 ರೂ.ಗಳಂತೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪುತ್ತಿದೆ. ಇತ್ತೀಚಿನ ಅಂಕಿ-ಅಂಶಗಳ ಪ್ರಕಾರ, ಯೋಜನೆಯ ಫಲಾನುಭವಿಗಳಾಗಿದ್ದ ಸುಮಾರು 1 ಲಕ್ಷದ 95 ಸಾವಿರಕ್ಕೂ ಹೆಚ್ಚು ಕುಟುಂಬದ ಯಜಮಾನಿಯರು ಮರಣ ಹೊಂದಿದ್ದಾರೆ. ಆದಾಗ್ಯೂ, ತಾಂತ್ರಿಕ ಕಾರಣಗಳಿಂದಾಗಿ ಮೃತಪಟ್ಟವರ ಬ್ಯಾಂಕ್ ಖಾತೆಗಳಿಗೂ ಇನ್ನೂ ಹಣ ಸಂದಾಯವಾಗುತ್ತಿರುವುದು ಗಮನಕ್ಕೆ ಬಂದಿದೆ. ಈ ರೀತಿಯ ದುರುಪಯೋಗವನ್ನು ತಡೆಯುವ ಕೆಲಸವನ್ನು ಸರಕಾರದಿಂದ ಮಾಡಲಾಗುತ್ತಿದೆ ಎಂದು ಹೇಳಿದರು.

**ಮುಖ್ಯಮಂತ್ರಿಗೆ ಸಲ್ಲಿಸಿದ ಮನವಿ:**

"ಮೃತಪಟ್ಟವರ ಖಾತೆಗಳಿಗೆ ಸರ್ಕಾರದ ಹಣ ಪಾವತಿಯಾಗುತ್ತಿರುವುದನ್ನು ತಡೆಗಟ್ಟಲು ಮತ್ತು ಯೋಜನೆಯನ್ನು ಸದ್ವಿನಿಯೋಗಪಡಿಸಿಕೊಳ್ಳಲು ಹಿಂದಿನ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ ಅವರಿಗೆ ನಾನು ಈ ಹಿಂದೆ ಲಿಖಿತ ಮನವಿಯೊಂದನ್ನು ಸಲ್ಲಿಸಿ, ಫಲಾನುಭವಿಗಳಿಗೆ 'ಜೀವಿತ ಪ್ರಮಾಣಪತ್ರ' (Life Certificate) ಕಡ್ಡಾಯಗೊಳಿಸುವಂತೆ ಕೋರಿದ್ದೆ. ಅದೇ ರೀತಿ, ಪ್ರಸ್ತುತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೂ ಸಹ ಈ ಯೋಜನೆಯಲ್ಲಿನ ಲೋಪದೋಷಗಳನ್ನು ಸರಿಪಡಿಸಿ, ಮೃತಪಟ್ಟವರು ಹಾಗೂ ಅನರ್ಹರನ್ನು ಯೋಜನೆಯಿಂದ ಹೊರಗಿಡುವ ಮೂಲಕ ಗೃಹಲಕ್ಷ್ಮಿ ಯೋಜನೆಯನ್ನು ಸಂಪೂರ್ಣವಾಗಿ ಪರಿಷ್ಕರಣೆ (Auditing/ Verification) ಮಾಡಬೇಕೆಂದು ಮನವಿ ಮಾಡಿದ್ದೇನೆ ಎಂದು ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

**ಸರ್ಕಾರದ ಉದ್ದೇಶ ಸ್ಪಷ್ಟ:**

ಮುಖ್ಯಮಂತ್ರಿಗಳು ಈ ಮನವಿಯನ್ನು ಪುರಸ್ಕರಿಸಿ ಯೋಜನೆಯ ಪರಿಷ್ಕರಣೆಗೆ ಮುಂದಾಗಿದ್ದಾರೆ.

ಈ ಪ್ರಕ್ರಿಯೆಯ ಮೂಲ ಉದ್ದೇಶ ಮೃತಪಟ್ಟ ಹಾಗೂ ಅನರ್ಹ ಫಲಾನುಭವಿಗಳನ್ನು ಪತ್ತೆಹಚ್ಚಿ, ಸರ್ಕಾರದ ಹಣ ದುರುಪಯೋಗವಾಗುವುದನ್ನು ತಪ್ಪಿಸುವುದೇ ಆಗಿದೆ.

ಯಾವುದೇ ಕಾರಣಕ್ಕೂ ಪ್ರಸ್ತುತ ಸೌಲಭ್ಯ ಪಡೆಯುತ್ತಿರುವ ಯಾವುದೇ ಒಬ್ಬನೇ ಒಬ್ಬ ಅರ್ಹ ಫಲಾನುಭವಿಗೆ ಈ ಯೋಜನೆಯಿಂದ ಯಾವುದೇ ರೀತಿಯ ತೊಂದರೆಯಾಗಲಿ ಅಥವಾ ನಷ್ಟವಾಗಲಿ ಸಂಭವಿಸುವುದಿಲ್ಲ. ವಿರೋಧ ಪಕ್ಷದವರು ರಾಜಕೀಯ ಪ್ರೇರಿತ ಅಪಪ್ರಚಾರಗಳನ್ನು ನಂಬಬಾರದು ಎಂದು ದಿನೇಶ್ ಗೂಳಿಗೌಡ ಜನರಿಗೆ ಮನವಿ ಮಾಡಿದ್ದಾರೆ.



ಬೆಂಗಳೂರಿನ ವಿಧಾನಸೌಧದಲ್ಲಿ ಘೋಷಣೆ ಮಾಡಿದ ನಂತರ, ರಾಜ್ಯಸಭೆಗೆ ನೂತನ ಮತ್ತು ಸರ್ವಾನುಮತದಿಂದ ಆಯ್ಕೆಯಾದ ಬಿಜೆಪಿ ಅಭ್ಯರ್ಥಿ ಪ್ರೊಫೆಸರ್ ನಾಗರಾಜ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು.

# ಗೃಹಲಕ್ಷ್ಮೀ ಯೋಜನೆಗೆ ಆರಂಭದಲ್ಲಿ ಇಲ್ಲದ ಷರತ್ತು ಈಗೇಕೆ: ಸಿ.ಟಿ. ರವಿ ಪ್ರಶ್ನೆ

**ಬೆಂಗಳೂರು, ಜೂ.11:** ಗೃಹಲಕ್ಷ್ಮೀ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಯಿಂದ ಹೊರಗಿಡುವ ಪ್ರಕ್ರಿಯೆ ಆರಂಭವಾಗಿದ್ದು, ಈ ಬಗ್ಗೆ ಬಿಜೆಪಿ ನಾಯಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಗೃಹಲಕ್ಷ್ಮಿ ಯೋಜನೆಗೆ ಆಗ ಇಲ್ಲದ ಕಂಡಿಷನ್ ಈಗ ಯಾಕೆ ಎಂದು ಪ್ರಶ್ನಿಸಿರುವ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ, ಅಂದು 'ಕಾಕಾ ಪಾಟೀಲ್ ನಿಂಗೂ ಫ್ರೀ, ಜಮೀರ್ ಅಹ್ಮದ್ ನಿಂಗೂ ಫ್ರೀ, ಮಹದೇವಪ್ಪ ನಿಂಗೂ ಫ್ರೀ' ಎಂದು ಚುನಾವಣೆ ಪ್ರಚಾರದ ವೇಳೆ ಸಿದ್ದರಾಮಯ್ಯನವರು ಘೋಷಿಸಿದ್ದರು. ಈಗ ಏನಾಯ್ತು? 10 ಕೆಜಿ ಅಕ್ಕಿ ಕೊಟ್ಟಿದ್ದೀರಾ? ಮೋದಿಯವರು 5 ಕೆಜಿ ಅಕ್ಕಿ ಕೊಡದೇ ಇದ್ದರೆ, ನಿಮ್ಮನ್ನೇ ನಂಬಿದ್ದರೆ ಜನರು ಖಾಲಿಹೊಟ್ಟೆಯಲ್ಲಿ ನೀರು ಕುಡಿದು ಮಲಗಬೇಕಿತ್ತು ಎಂದು ಕಿಡಿಕಾರಿದರು.

ನಿಮ್ಮ ಷರತ್ತು ಯಾಕೆ, ಖಜಾನೆ ಖಾಲಿಯಾಗಿದೆ ಎಂಬುದು ಜನರಿಗೆ ಗೊತ್ತಿದೆ ಎಂದು ತಿಳಿಸಿದರು. ಫಲಾನುಭವಿ ಜನರನ್ನು ಕಡಿಮೆ ಮಾಡಲು ಕಂಡಿಷನ್ ಹಾಕುತ್ತೀರಿ. ನಿಮ್ಮ ಹಳೆ ಭಾಷಣವನ್ನು ಜನರು ಕೇಳಿಸಿಕೊಳ್ಳುತ್ತಾರೆ ಎಂದರು.ಇದಕ್ಕೆ ಸೂಕ್ತ ಸಮಯದಲ್ಲಿ ಜನರು ಉತ್ತರ ಕೊಡುತ್ತಾರೆ. ನಮಗೂ ಗ್ಯಾರಂಟಿ ಯೋಜನೆಗಳಿಗೂ ಸಂಬಂಧ ಇಲ್ಲ ಎಂದು ಡಿ.ಕೆ.ಶಿವಕುಮಾರ್ ಅವರು ಹೇಳಿದರೆ, ನಾವು ಪ್ರಶ್ನೆ ಮಾಡುವುದಿಲ್ಲ ಎಂದು ಸವಾಲು ಹಾಕಿದರು. ಗೃಹಲಕ್ಷ್ಮಿ ಕೊಡಬೇಕಾಗುತ್ತದೆ ಎಂದು ಹೊಸ ಬಿಪಿಎಲ್ ಕಾರ್ಡ್ ಕೊಡುವುದನ್ನೂ ನಿಲ್ಲಿಸಿದ್ದಾರೆ. ಇದರಿಂದಾಗಿ ಅರ್ಹ ಫಲಾನುಭವಿಗಳು ಬಿಪಿಎಲ್ ಕಾರ್ಡ್‌ನಿಂದಲೂ ವಂಚಿತರಾಗಿದ್ದಾರೆ. ಇದು ಸರಿಯಲ್ಲ ಎಂದು ಗುಡುಗಿದರು.

# 2ನೇ ಹಂತದ ಸಂಪುಟ ವಿಸ್ತರಣೆಯಲ್ಲೂ ಜಮೀರ್ ಖಾನ್‌ಗೆ ಸ್ಥಾನ ಅನುಮಾನ

**ಬೆಂಗಳೂರು, ಜೂ.11:** ಸಚಿವ ಸಂಪುಟದ ಎರಡನೇ ಹಂತದ ವಿಸ್ತರಣೆ ಹತ್ತಿರವಾಗುತ್ತಿದ್ದಂತೆಯೇ ರಾಜಕೀಯ ವಲಯದಲ್ಲಿ ಮಹತ್ವದ ಸುದ್ದಿಯೊಂದು ಹೊರಬಿದ್ದಿದೆ. ಮುಸ್ಲಿಂ ನಾಯಕ ಜಮೀರ್ ಅಹಮದ್ ಖಾನ್ ಅವರಿಗೆ ಈ ಬಾರಿ ಸಚಿವ ಸ್ಥಾನ ಸಿಗುವುದು ಬಹುತೇಕ ಅನುಮಾನ ಎಂದು ಹೇಳಲಾಗುತ್ತಿದೆ. ಇದು ಅವರ ಬೆಂಬಲಿಗರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಜಮೀರ್ ಅಹಮದ್ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಲೇಬೇಕು ಎಂದು ಪಟ್ಟು ಹಿಡಿದಿರುವ ಅವರ ನೂರಾರು ಅಭಿಮಾನಿಗಳು ಮತ್ತು ಬೆಂಬಲಿಗರು ರಸ್ತೆಗಿಳಿದು ಪ್ರತಿಭಟನೆ ನಡೆಸಿದ್ದಾರೆ. ಆದರೂ ಹೈಕಮಾಂಡ್ ಮಟ್ಟದ ಬೆಳವಣಿಗೆಗಳನ್ನು ಗಮನಿಸಿದರೆ ಜಮೀರ್ ಅವರಿಗೆ ಮಂತ್ರಿಗಿರಿ ಸಿಗುವುದು ಅನುಮಾನ ಎನ್ನಲಾಗುತ್ತಿದೆ.

ಕೆಲವು ಅಭಿಮಾನಿಗಳು, ಜಮೀರ್‌ಗೆ ಸಚಿವ ಸ್ಥಾನ ಕೊಡಿಸುವಂತೆ ಸಿದ್ದರಾಮಯ್ಯರಿಗೂ ದುಂಬಾಲು ಬಿದ್ದಿದ್ದಾರೆ. ಆದ್ರೆ ಸಿದ್ದರಾಮಯ್ಯ ಜಮೀರ್ ನನ್ನ ವಿರುದ್ಧವೇ ಕೆಲಸ ಮಾಡಿದ್ದಾನೆ ಅಂತಾ ಆಕ್ರೋಶ ಹೊರಹಾಕಿದ್ದಾರೆ. ಹೀಗಾಗಿಯೇ ಜಮೀರ್‌ಗೆ ಸಚಿವ ಸ್ಥಾನ ಸಿಗೋದು ಅನುಮಾನ ಎನ್ನಲಾಗುತ್ತಿದೆ.

ಹೈಕಮಾಂಡ್ ಮಟ್ಟದಲ್ಲಿ ಜಮೀರ್ ವಿರುದ್ಧ ಅಸಮಾಧಾನ ಇದೆ ಎನ್ನಲಾಗುತ್ತಿದೆ. ಇದಕ್ಕೆ ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಯೇ ಪ್ರಮುಖ ಕಾರಣ ಎನ್ನಲಾಗುತ್ತಿದೆ.

ದಾವಣಗೆರೆ ಉಪ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರ ವಿರುದ್ಧ ಜಮೀರ್ ಅಹಮದ್ ಅವರು ಸಂಚು ರೂಪಿಸಿ, ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಈಗಾಗಲೇ ಕಾಂಗ್ರೆಸ್ ಹೈಕಮಾಂಡ್ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಅವರನ್ನು ಕಾಂಗ್ರೆಸ್‌ನ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಿ ಆದೇಶ ಹೊರಡಿಸಲಾಗಿದೆ. ಇಷ್ಟೇ ಅಲ್ಲದೆ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಚಿವ ಜಮೀರ್ ಅಹಮದ್, ಪರಿಷತ್ ಸದಸ್ಯರಾದ ಅಬ್ದುಲ್ ಜಬ್ಬಾರ್ ಹಾಗೂ ನಸೀರ್ ಅಹಮದ್ ವಿರುದ್ಧ ಎರಡು ಪುಟಗಳ ಸಂಪೂರ್ಣ ತನಿಖಾ ವರದಿಯ ಸಮೇತ ಹೈಕಮಾಂಡ್‌ಗೆ ದೂರು ಸಲ್ಲಿಸಿದ್ದಾರೆ. ಜಮೀರ್ ಅಹಮದ್ ಅವರ ಹೆಸರನ್ನು ಎರಡನೇ ಸಚಿವರ ಪಟ್ಟಿಯಿಂದಲೂ ಕೊಕ್ ನೀಡಲು ಹೈಕಮಾಂಡ್ ನಿರ್ಧರಿಸಿದೆ ಎಂಬ ಮಾತುಗಳು ದಟ್ಟವಾಗಿವೆ.

ಇದರ ನಡುವೆ ಜಮೀರ್ ಅಹಮದ್ ಖಾನ್ ಅವರು, ಈ ಎಲ್ಲಾ ವಿವಾದಗಳು ಮತ್ತು ನಿಮಗೆ ಸಚಿವ ಸ್ಥಾನ ಸಿಗುತ್ತಾ ಎಂಬ ಮಾಧ್ಯಮಗಳ ಪ್ರಶ್ನೆಗಳಿಗೂ ಉತ್ತರಿಸದೆ ಮೌನಕ್ಕೆ ಶರಣಾಗಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕಲಬುರಗಿ ಜವಳಿಪಾರ್ಕ್ ಮೊದಲ ಹಂತದ ನೀಲನಕ್ಷೆ ಸಿದ್ಧ



**ಬೆಂಗಳೂರು, ಜೂ.11:** ಕಲಬುರಗಿಯಲ್ಲಿ ಸ್ಥಾಪನೆಯಾಗಲಿರುವ ಮಹತ್ವಾಕಾಂಕ್ಷಿ 'ಪಿಎಂ–ಮಿತ್ರ ಜವಳಿ ಪಾರ್ಕ್' ಯೋಜನೆಯನ್ನು ಅತ್ಯಂತ ವ್ಯವಸ್ಥಿತವಾಗಿ ಹಾಗೂ ವೇಗವಾಗಿ ಅನುಷ್ಠಾನಗೊಳಿಸಲು ಮೊದಲ ಹಂತದ ಮೂಲಸೌಕರ್ಯ ನೀಲಿನಕ್ಷೆ ಮತ್ತು ಆಡಳಿತಾತ್ಮಕ ಮಾರ್ಗಸೂಚಿ ಸಿದ್ಧಪಡಿಸಲಾಗಿದೆ ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಲಬುರಗಿ ಬಳಿ ಮೊದಲ ಹಂತದಲ್ಲಿ 1000 ಎಕರೆ ಪ್ರದೇಶದಲ್ಲಿ ರೂಪಿಸಲಾಗುತ್ತಿರುವ ಜವಳಿ ಪಾರ್ಕ್ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಲು ಸಚಿವರು ಇಂದು ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಮೊದಲ ಹಂತದಲ್ಲಿ 1,000 ಎಕರೆ ಪ್ರದೇಶದಲ್ಲಿ ಪಾರ್ಕ್ ನಿರ್ಮಾಣ ಕಾಮಗಾರಿಗಳು ಆರಂಭವಾಗಲಿದ್ದು, ಹೂಡಿಕೆ ಮಾಡುವ ಉದ್ಯಮಗಳಿಗೆ ತಕ್ಷಣವೇ ಉತ್ಪಾದನೆ ಆರಂಭಿಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಜಾಗತಿಕ ಮಟ್ಟದ ಮೂಲಸೌಕರ್ಯಗಳನ್ನು ಒಳಗೊಂಡ 'ಪ್ಲಗ್ ಅಂಡ್ ಪ್ಲೇ' ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಮೊದಲ ಹಂತದಲ್ಲಿ ಕೋರ್ ಮೂಲಸೌಕರ್ಯಗಳ ಕಾಮಗಾರಿಗಳು ಆರಂಭವಾಗಲಿದ್ದು, ಸಿವಿಲ್ ಮತ್ತು ಭೂ ಅಭಿವೃದ್ಧಿ, ಆಂತರಿಕ ರಸ್ತೆಗಳ ನಿರ್ಮಾಣ ಮತ್ತು ಮಳೆನೀರನ್ನು ಸುಲಭವಾಗಿ ಹೊರಹಾಕಲು ಸುಸಜ್ಜಿತ ಆರ್‌ಸಿಸಿ ಡ್ರೈನೇಜ್ ವ್ಯವಸ್ಥೆ ಕಲ್ಪಿಸಲಾಗುವುದು. ಇಡೀ ಪಾರ್ಕ್‌ನಲ್ಲಿ ಭೂಗತ ಹೈ–ಟೆನ್ಷನ್/ಲೋ–ಟೆನ್ಷನ್ ವಿದ್ಯುತ್ ವಿತರಣಾ ಮಾರ್ಗಗಳು ಮತ್ತು ಪರಿಸರ ಸ್ನೇಹಿ ಸೋಲಾರ್ ಬೀದಿ ದೀಪಗಳ ಅಳವಡಿಸುವ ಪ್ರಕ್ರಿಯೆಯೂ ನಡೆಯಲಿದೆ ಎಂದು ಸಚಿವರು ವಿವರಿಸಿದ್ದಾರೆ.

5 ಲಕ್ಷ ಲೀಟರ್ ಸಾಮರ್ಥ್ಯದ ನೆಲಮಟ್ಟದ ಜಲಸಂಗ್ರಹಾಗಾರ ಮೂಲಕ ಶುದ್ಧ ನೀರು ಸರಬರಾಜು ಜಾಲ ಮತ್ತು ಸಂಸ್ಕರಿಸಿದ ನೀರಿಗಾಗಿ 10 ಲಕ್ಷ ಲೀಟರ್ ಸಾಮರ್ಥ್ಯದ ಮೇಲ್ಮಟ್ಟದ ಜಲಸಂಗ್ರಹಾಗಾರ ನಿರ್ಮಾಣ. ಪರಿಸರ ಸಂರಕ್ಷಣೆಗಾಗಿ ಶೂನ್ಯ ದ್ರವ ವಿಸರ್ಜನೆ ತಂತ್ರಜ್ಞಾನ ಹೊಂದಿರುವ ಅತ್ಯಾಧುನಿಕ 2.5 ಎಂ.ಎಲ್.ಡಿ ಸಾಮರ್ಥ್ಯದ ಸಾಮಾನ್ಯ ಒಳಚರಂಡಿ ತ್ಯಾಜ್ಯ ಸಂಸ್ಕರಣಾ ಘಟಕ ಮತ್ತು ಅದಕ್ಕೆ ಪೂರಕವಾದ ಪೈಪ್‌ಲೈನ್ ಜಾಲದ ಸ್ಥಾಪನೆ ಕಾರ್ಯ ಆರಂಭಗೊಳ್ಳಲಿದೆ ಎಂದಿರುವ ಸಚಿವರು ಕಾಮಗಾರಿಗಳಲ್ಲಿ ಗುಣಮಟ್ಟ ಕಾಪಾಡಿಕೊಳ್ಳಲು ಕಟ್ಟುನಿಟ್ಟಿನ ಸೂಚನೆ ನಿಡಿದರು.

ಸಭೆಯಲ್ಲಿ ವಾಣಿಜ್ಯ ಹಾಗೂ ಕೈಗಾರಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಸೆಲ್ವಕುಮಾರ್ ಎಸ್, ಜವಳಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ ಹಾಗೂ ವಿಸಿ ಮೂಲಕ ಕಲಬುರಗಿ ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮುಲ್ಲಾ ಷರೀಫ್ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಣೆಗೆ ಚಾಲನೆ

### ಈಗಾಗಲೇ ಹಣ ನೀಡಿದ್ದರೆ ವಾಪಸ್: ಸಾರಿಗೆ ಸಚಿವ ಬೈರತಿ ಸುರೇಶ್ ಘೋಷಣೆ

ಬೆಂಗಳೂರು, ಜೂ.11: ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಿಸುವ ಐತಿಹಾಸಿಕ ಗ್ಯಾರಂಟಿ ಯೋಜನೆಗೆ ರಾಜ್ಯ ಸರ್ಕಾರ ಚಾಲನೆ ನೀಡಲಾಗಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಘೋಷಿಸಿದ್ದಾರೆ.

ಈಗಾಗಲೇ ಹಣ ಪಾವತಿ ಮಾಡಿ ಬಸ್ ಪಾಸ್ ಖರೀದಿಸಿರುವ ವಿದ್ಯಾರ್ಥಿಗಳಿಗೆ ಆ ಹಣವನ್ನು ವಾಪಸ್ ನೀಡಲಾಗುವುದು ಎಂದೂ ಅವರು ವಿದ್ಯಾರ್ಥಿ ಸಮೂಹಕ್ಕೆ ಸಿಹಿ ಸುದ್ದಿ ನೀಡಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿರುವ ಅವರು, ಇದುವರೆಗೆ ವಿದ್ಯಾರ್ಥಿನಿಯರಿಗೆ ಮಾತ್ರ ಉಚಿತ ಬಸ್ ಪಾಸ್ ವಿತರಣೆ ಮಾಡಲಾಗುತ್ತಿತ್ತು. ಇದೀಗ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಗಂಡುಮಕ್ಕಳಿಗೂ ಈ ಸೌಲಭ್ಯವನ್ನು ಕಲ್ಪಿಸುವ ಮಹತ್ವದ ನಿರ್ಧಾರ ಕೈಗೊಂಡಿದೆ ಎಂದರು.

ಉಚಿತ ಬಸ್ ಪಾಸ್ ವಿತರಣೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗಿದ್ದು, ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ಬಡವ ಶ್ರೀಮಂತ ಎನ್ನದೇ ಪ್ರತಿಯೊಬ್ಬ ಮಕ್ಕಳೂ ಆರ್ಥಿಕ ಹೊರೆ ಇಲ್ಲದೇ ತಮ್ಮ ವಿದ್ಯಾಭ್ಯಾಸ ಮಾಡಬೇಕೆಂಬುದು ನಮ್ಮ ಸರ್ಕಾರದ ಪ್ರಮುಖ ಉದ್ದೇಶವಾಗಿದೆ.

**ಪಾವತಿಸಿರುವ ಹಣ ವಾಪಸ್**

ಈಗಾಗಲೇ ಹಣ ಪಾವತಿ ಮಾಡಿ ಬಸ್ ಖರೀದಿಸಿರುವ ವಿದ್ಯಾರ್ಥಿಗಳಿಗೆ ಹಣವನ್ನು ವಾಪಸ್ ನೀಡಲಾಗುವುದು ಎಂದು ತಿಳಿಸಿದ ಬೈರತಿ ಸುರೇಶ್ ಅವರು, ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ಎಲ್ಲಾ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಅದರಂತೆ ನಮ್ಮ ಹಿರಿಯ ನಾಯಕರಾದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ದಿನವೇ ಈ ಉಚಿತ ಬಸ್ ಪಾಸ್ ಯೋಜನೆಯನ್ನು ಘೋಷಣೆ ಮಾಡಿದ್ದರು. ಅದನ್ನು ಸಾರಿಗೆ ಇಲಾಖೆ ಅನುಷ್ಠಾನಗೊಳಿಸುತ್ತಿದೆ ಎಂದರು.

**ಕರ್ನಾಟಕ ಒನ್, ಬೆಂಗಳೂರು ಒನ್‌ನಲ್ಲಿ ಅರ್ಜಿ:**

ವಿದ್ಯಾರ್ಥಿಗಳು ಒಂದೆರಡು ದಿನಗಳಲ್ಲಿ ಕರ್ನಾಟಕ ಒನ್, ಬೆಂಗಳೂರು ಒನ್ ಕಚೇರಿಗಳಲ್ಲಿ ಉಚಿತ ಬಸ್‌ಪಾಸ್‌ಗೆ ನಿಗದಿತ ಅರ್ಜಿಯನ್ನು ಸಲ್ಲಿಸಬೇಕು. ಇದನ್ನು ಪರಿಶೀಲನೆ ನಡೆಸಿದ ನಂತರ ಬಸ್‌ಪಾಸ್ ಉಚಿತವಾಗಿ ವಿತರಿಸುವ ಪ್ರಕ್ರಿಯೆ ಆರಂಭಿಸಲಾಗುತ್ತದೆ ಎಂದು ಸಚಿವ ಬೈರತಿ ಸುರೇಶ್ ಮಾಹಿತಿ ನೀಡಿದರು.

# ವಿಬಿ ಜಿ–ರಾಮ್ ಜಿ ವೇತನ ಅನುಪಾತ ಕನಿಷ್ಠ 80:20ಕ್ಕೆ ಹೆಚ್ಚಿಸಿ

### ಕೇಂದ್ರ ಸರ್ಕಾರಕ್ಕೆ ಸಚಿವ ಈಶ್ವರ ಖಂಡ್ರೆ ಒತ್ತಾಯ: 60:40ರ ಅನುಪಾತ ರಾಜ್ಯ ಸರ್ಕಾರಗಳಿಗೆ ಹೊರೆ



ಬೆಂಗಳೂರು, ಜೂ.11: ಗ್ರಾಮೀಣ ಜನರಿಗೆ ಉದ್ಯೋಗ ಖಾತ್ರಿ ಒದಗಿಸುವ ವಿಬಿಜಿ ರಾಮ್‌ಜಿ ಯೋಜನೆಯಡಿ ವೇತನ ಅನುಪಾತವನ್ನು ಕನಿಷ್ಠ 80:20ಕ್ಕೆ ಹೆಚ್ಚಿಸುವಂತೆ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಖಂಡ್ರೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯುಪಿಎ ಸರ್ಕಾರ 2006ರಲ್ಲಿ ಜಾರಿಮಾಡಿದ ಮನ್ರೇಗಾ ಅಡಿಯಲ್ಲಿ ಒದಗಿಸಲಾಗುವ ಉದ್ಯೋಗಕ್ಕೆ ನೀಡುವ ಕೂಲಿಯ 90ರಷ್ಟು ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿತ್ತು, ರಾಜ್ಯ ಸರ್ಕಾರಗಳು ಕೇವಲ 10ರಷ್ಟು ಭರಿಸುತ್ತಿದ್ದವು.

ಆದರೆ ಈಗ ಬಿಜೆಪಿ ನೇತೃತ್ವದ ಎನ್.ಡಿ.ಎ. ಸರ್ಕಾರ ಜುಲೈ 1ರಿಂದ ಜಾರಿ ಮಾಡುತ್ತಿರುವ ವಿಬಿ ಜಿ ರಾಮ್ ಜಿಯಲ್ಲಿ ಕೇಂದ್ರ ಸರ್ಕಾರ 60:40 ಅನುಪಾತದಡಿ ಹಣ ಒದಗಿಸುತ್ತಿದ್ದು ಇದು ರಾಜ್ಯ ಸರ್ಕಾರಗಳಿಗೆ ಹೆಚ್ಚಿನ ಹೊರೆಯಾಗುತ್ತದೆ. ಹೀಗಾಗಿ ಈ ಅನುಪಾತವನ್ನು ಹಿಂದೆ ಇದ್ದಂತೆ 90:10 ಮುಂದುವರಿಸಬೇಕು ಇಲ್ಲವೆ ಕನಿಷ್ಠ 80:20ಕ್ಕಾದರೂ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಇದರ ಜೊತೆಗೆ ವರ್ಷದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿಲುವು ಸರಿಯೂ ಅಲ್ಲ, ಸಮರ್ಥನೀಯವೂ ಅಲ್ಲ. ಆಧುನಿಕ ಯುಗದಲ್ಲಿ ಕೃಷಿ ಕಾರ್ಯಕ್ಕೆ ಯಂತ್ರೋಪಕರಣಗಳು ಬಂದಿದ್ದು, ಬಹುತೇಕ ಗ್ರಾಮೀಣ ಭೂರಹಿತ ಕೂಲಿ ಕಾರ್ಮಿಕರಿಗೆ ಉದ್ಯೋಗ ಸಿಗುತ್ತಿಲ್ಲ, ಹೀಗಾಗಿ ಅವರಿಗೆ ಆಸರೆಯಾಗಿರುವ ಉದ್ಯೋಗ ಖಾತ್ರಿಗೆ ರಜೆ ನೀಡುವ ಪ್ರಸ್ತಾಪ ಕೈಬಿಡಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು.

ಬರುವ 28 ಮತ್ತು 29ರಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅಧ್ಯಕ್ಷತೆಯಲ್ಲಿ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರ ಸಭೆ ನಡೆಯಲಿದ್ದು, ಈ ಸಭೆಯಲ್ಲಿ ತಾವು ವೇತನ ಅನುಪಾತ ಹೆಚ್ಚಿಸುವಂತೆ ಹಾಗೂ 60 ದಿನಗಳ ಬಿಡುವು ಪ್ರಸ್ತಾಪ ಕೈಬಿಡಬೇಕು. ವಿಬಿ ಜಿ ರಾಮ್ ಜಿ ಅಡಿಯಲ್ಲಿ ಕೇಂದ್ರ ಸರ್ಕಾರ ರಾಜ್ಯಗಳಿಗೆ ಇಂತಹ ಕೆಲಸ ಮಾತ್ರ ಮಾಡಬೇಕು ಎಂದು ನಿರ್ಬಂಧ ವಿಧಿಸುವುದು ಸರಿಯಲ್ಲ. ರಾಜ್ಯಗಳಿಗೆ ಉದ್ಯೋಗ ಆಯ್ಕೆ ಮಾಡಿಕೊಳ್ಳುವ ಸ್ವಾತಂತ್ರ್ಯ ಇರಬೇಕು ಎಂದು ಪ್ರತಿಪಾದಿಸಿದರು.

ಜೂನ್ 9ರಂದು ಕೇಂದ್ರ ಸಚಿವರೊಂದಿಗೆ ನಡೆದ ವರ್ಚುವಲ್ ಸಭೆಯಲ್ಲಿ ತಾವು ರಾಜ್ಯ ಸರ್ಕಾರ ಕನಿಷ್ಠ ವೇತನ ಹೆಚ್ಚಳ ಮಾಡುತ್ತಿದ್ದು, ಇದಕ್ಕೆ ಅನುಗುಣವಾಗಿ ವಿಬಿ ಜೀ ರಾಮ್ ಜೀ ವೇತನ ಪರಿಷ್ಕರಣೆ ಮಾಡುವಂತೆ ಆಗ್ರಹಿಸಿದ್ದು, ಕೇಂದ್ರ ಸಚಿವರು ಇದಕ್ಕಾಗಿಯೇ ಒಂದು ವೇತನ ಆಯೋಗ ರಚಿಸಲಾಗಿದ್ದು, ಶೀಘ್ರ ನಿರ್ಧಾರ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದರು.

# ಉಡಾನ್ ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಬೆಂಗಳೂರು–ಶಿವಮೊಗ್ಗ ವಿಮಾನಯಾನ ಸೇವೆ ಸೇರಿಸಿ

### ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡುಗೆ ಸಚಿವ ಎಂ.ಬಿ. ಪಾಟೀಲ್ ಆಗ್ರಹ



**ಬೆಂಗಳೂರು, ಜೂ.11:** ನಷ್ಟದ ಕಾರಣದಿಂದಾಗಿ ಸ್ಥಗಿತಗೊಂಡಿರುವ ಬೆಂಗಳೂರು–ಶಿವಮೊಗ್ಗ ವಿಮಾನ ಸೇವೆಯನ್ನು ಸದ್ಯದಲ್ಲೇ ನಡೆಯಲಿರುವ 'ಉಡಾನ್' ಬಿಡ್ಡಿಂಗ್ ಪ್ರಕ್ರಿಯೆಯಲ್ಲಿ ಸೇರಿಸಬೇಕು ಎಂದು ರಾಜ್ಯ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಮಾರ್ಗದಲ್ಲಿ ವಿಮಾನಸೇವೆಯ ಪುನಾರಂಭವು ಮಲೆನಾಡು ಮತ್ತು ಮಧ್ಯ ಕರ್ನಾಟಕದ ಒಟ್ಟಾರೆ ಪ್ರಗತಿಗೆ ಅತ್ಯಂತ ನಿರ್ಣಾಯಕವಾಗಿದೆ ಎಂದು ಪ್ರತಿಪಾದಿಸಿದ್ದಾರೆ. ಈ ಸಂಬಂಧವಾಗಿ ಸಚಿವ ಎಂ.ಬಿ. ಪಾಟೀಲ ಅವರು ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು ಅವರಿಗೆ ಪತ್ರ ಬರೆದು ಆಗ್ರಹ ಮಾಡಿದ್ದಾರೆ.

ಶಿವಮೊಗ್ಗದ ಕುವೆಂಪು ವಿಮಾನ ನಿಲ್ದಾಣವು 2023ರ ಫೆಬ್ರವರಿಯಲ್ಲಿ ಲೋಕಾರ್ಪಣೆಗೊಂಡು ಕಾರ್ಯಾರಂಭ ಮಾಡಿತ್ತು. ಇದಾದ ನಂತರ ಇಂಡಿಗೋ ವಿಮಾನಯಾನ ಸಂಸ್ಥೆಯು ಶಿವಮೊಗ್ಗ–ಬೆಂಗಳೂರು ನಡುವೆ ಯಶಸ್ವಿಯಾಗಿ ವಿಮಾನ ಕಾರ್ಯಾಚರಣೆ ನಡೆಸುತ್ತಿತ್ತು. ಆದರೆ, ಆರ್ಥಿಕ ನಷ್ಟದ ಕಾರಣವನ್ನು ನೀಡಿ ಕಳೆದ ಕೆಲವು ತಿಂಗಳುಗಳಿಂದ ಈ ಸೇವೆಯನ್ನು ಹಠಾತ್ತನೆ ಸ್ಥಗಿತಗೊಳಿಸಲಾಗಿದೆ.

ಇದರಿಂದಾಗಿ ಶಿವಮೊಗ್ಗ ಸೇರಿದಂತೆ ಚಿಕ್ಕಮಗಳೂರು, ಉತ್ತರ ಕನ್ನಡ, ದಾವಣಗೆರೆ, ಚಿತ್ರದುರ್ಗ ಮತ್ತು ಹಾವೇರಿ ಜಿಲ್ಲೆಗಳ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿದೆ. ಅಲ್ಲದೆ, ಈ ಭಾಗದ ಆರ್ಥಿಕ, ಕೃಷಿ, ಪ್ರವಾಸೋದ್ಯಮ ಹಾಗೂ ಕೈಗಾರಿಕಾ ಬೆಳವಣಿಗೆಗೆ ಇದು ದೊಡ್ಡ ಮಟ್ಟದ ಹಿನ್ನಡೆ ತಂದಿದೆ ಎಂದು ಸಚಿವರು ಪತ್ರದಲ್ಲಿ ವಿವರಿಸಿದ್ದಾರೆ.

ಶಿವಮೊಗ್ಗದಿಂದ ರಾಜಧಾನಿ ಬೆಂಗಳೂರಿಗೆ ನೇರ ವಿಮಾನ ಸಂಪರ್ಕ ಇಲ್ಲದೇ ಇರುವುದರಿಂದ ಮಲೆನಾಡು ಭಾಗದಿಂದ ದೇಶದ ಇತರೆ ಮಹಾನಗರಗಳಿಗೆ ಹಾಗೂ ವಿದೇಶಗಳಿಗೆ ಪ್ರಯಾಣಿಸುವ ಅಂತಾರಾಷ್ಟ್ರೀಯ ಪ್ರಯಾಣಿಕರಿಗೂ ಭಾರಿ ಸಮಸ್ಯೆಯಾಗುತ್ತಿದೆ. ಆದ್ದರಿಂದ, ವಿಜಿಟಿ ಫಂಡ್ ನೆರವಿನ ಮೂಲಕ ಮುಂಬರುವ ಉಡಾನ್ ಯೋಜನೆಯ ಬಿಡ್ಡಿಂಗ್‌ನಲ್ಲಿ ಬೆಂಗಳೂರು–ಶಿವಮೊಗ್ಗ ಮಾರ್ಗವನ್ನು ಸೇರ್ಪಡೆ ಮಾಡಲು ಕೇಂದ್ರ ಸಚಿವರು ತಕ್ಷಣ ಮಧ್ಯಪ್ರವೇಶಿಸಬೇಕು ಎಂದು ಎಂ.ಬಿ. ಪಾಟೀಲ್ ಕೋರಿದ್ದಾರೆ.

**ಭರದಿಂದ ಸಾಗಿದೆ ನೈಟ್‌ಲ್ಯಾಂಡಿಂಗ್ ಸೌಲಭ್ಯ**

ಶಿವಮೊಗ್ಗ ವಿಮಾನ ನಿಲ್ದಾಣದಲ್ಲಿ ರಾತ್ರಿ ವೇಳೆಯೂ ವಿಮಾನಗಳು ಇಳಿಯಲು ಅನುಕೂಲವಾಗುವಂತೆ 'ನೈಟ್ ಲ್ಯಾಂಡಿಂಗ್' ಸೌಲಭ್ಯ ಒದಗಿಸುವ ಕಾಮಗಾರಿ ಪ್ರಸ್ತುತ ಭರದಿಂದ ಸಾಗುತ್ತಿದೆ. ಇದನ್ನು ಹೊರತುಪಡಿಸಿ ವಿಮಾನ ನಿಲ್ದಾಣಕ್ಕೆ ಬೇಕಾದ ಉಳಿದೆಲ್ಲ ಅತ್ಯಾಧುನಿಕ ಮೂಲಸೌಕರ್ಯಗಳು ಈಗಾಗಲೇ ಲಭ್ಯ ಇವೆ. ಆದ್ದರಿಂದ ಮಲೆನಾಡು ಮತ್ತು ಮಧ್ಯ ಕರ್ನಾಟಕದ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರವು ಈ ಮನವಿಯನ್ನು ಗಂಭೀರವಾಗಿ ಪರಿಗಣಿಸಿ, ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಸಚಿವ ಎಂ.ಬಿ. ಪಾಟೀಲ್ ಪತ್ರದಲ್ಲಿ ವಿನಂತಿಸಿದ್ದಾರೆ.

# ಯೂರಿಯಾಗೆ ಇದ್ದ ಚೀನಾ ನಿರ್ಬಂಧ ತೆರವು

ನವದೆಹಲಿ, ಜೂ. 11: ಕೃಷಿ ಚಟುವಟಿಕೆಗಳಿಗೆ ಜೀವನಾಡಿಯಾಗಿರುವ ಯೂರಿಯಾ ರಸಗೊಬ್ಬರದ ವಿಚಾರದಲ್ಲಿ ಭಾರತೀಯ ರೈತರಿಗೆ ಹಾಗೂ ಕೇಂದ್ರ ಸರ್ಕಾರಕ್ಕೆ ಬಹುದೊಡ್ಡ ರಿಲೀಫ್ ಸಿಕ್ಕಿದೆ. ತನ್ನ ದೇಶೀಯ ಬೇಡಿಕೆಯನ್ನು ಪೂರೈಸುವ ನಿಟ್ಟಿನಲ್ಲಿ ಯೂರಿಯಾ ರಫ್ತಿನ ಮೇಲೆ ಹೇರಿದ್ದ ನಿರ್ಬಂಧಗಳನ್ನು ಚೀನಾ ಇದೀಗ ಸಡಿಲಿಸಿದೆ. ಇದರ ನೇರ ಪರಿಣಾಮವಾಗಿ ಜಾಗತಿಕ ಮಾರುಕಟ್ಟೆಯಲ್ಲಿ ಯೂರಿಯಾ ಆಮದು ದರಗಳು ಭಾರಿ ಪ್ರಮಾಣದಲ್ಲಿ ಕುಸಿತ ಕಂಡಿದ್ದು, ಮುಂಗಾರು ಹಂಗಾಮಿನ ಬಿತ್ತನೆ ಕಾರ್ಯದಲ್ಲಿ ತೊಡಗಿರುವ ಭಾರತದ ರೈತರಿಗೆ ಇದು ಅತ್ಯಂತ ಆಶಾದಾಯಕ ಹಾಗೂ ಸಕಾರಾತ್ಮಕ ಬೆಳವಣಿಗೆಯಾಗಿದೆ.

ಇತ್ತೀಚಿನ ಅಂಕಿಅಂಶಗಳ ಪ್ರಕಾರ, ಯೂರಿಯಾ ಆಮದು ಬೆಲೆಯಲ್ಲಿ ಸುಮಾರು ಶೇಕಡಾ 50ರಷ್ಟು ಭಾರಿ ಇಳಿಕೆಯಾಗಿದೆ. ಕೆಲವು ತಿಂಗಳ ಹಿಂದೆ ಇಂಡಿಯನ್ ಪೊಟ್ಯಾಶ್ ಲಿಮಿಟೆಡ್ (ಐಪಿಎಲ್) ಕರೆದಿದ್ದ ಟೆಂಡರ್‌ನಲ್ಲಿ ಪ್ರತಿ ಟನ್ ಯೂರಿಯಾಗೆ 935 ರಿಂದ 959 ಡಾಲರ್(91,728 ರೂ.) ಬೆಲೆ ನಿಗದಿಯಾಗಿತ್ತು. ಆದರೆ ಇದೀಗ, ನ್ಯಾಷನಲ್ ಫರ್ಟಿಲೈಸರ್ಸ್ ಲಿಮಿಟೆಡ್ (ಎನ್‌ಎಫ್‌ಎಲ್) ಕರೆದಿರುವ ಹೊಸ ಟೆಂಡರ್‌ನಲ್ಲಿ ಪ್ರತಿ ಟನ್ ಯೂರಿಯಾ ದರವು ಕೇವಲ 444.9 ರಿಂದ 449.3 ಡಾಲರ್‌ಗೆ (42,996) ಗಣನೀಯವಾಗಿ ಕುಸಿದಿದೆ. ಇದು ಭಾರತಕ್ಕೆ ಆರ್ಥಿಕವಾಗಿ ಅತಿದೊಡ್ಡ ಉಳಿತಾಯ ತಂದುಕೊಡಲಿದೆ.

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿದ್ದ ಯುದ್ಧದ ವಾತಾವರಣ, ಹಾರ್ಮುಜ್ ಜಲಸಂಧಿ ಮಾರ್ಗದಲ್ಲಿನ ಅಡಚಣೆಗಳು ಹಾಗೂ ಪೂರೈಕೆ ಸರಪಳಿಯಲ್ಲಾದ ವ್ಯತ್ಯಯಗಳಿಂದಾಗಿ ರಸಗೊಬ್ಬರಗಳ ಬೆಲೆ ಗಗನಕ್ಕೇರಿತ್ತು. ಇದೇ ವೇಳೆ, ಜಾಗತಿಕ ಮಾರುಕಟ್ಟೆಯಲ್ಲಿ ಪ್ರಮುಖ ರಫ್ತುದಾರ ರಾಷ್ಟ್ರವಾಗಿರುವ ಚೀನಾ, ತನ್ನ ದೇಶದ ರೈತರ ಹಿತದೃಷ್ಟಿಯಿಂದ ಮಾರ್ಚ್ ತಿಂಗಳಿನಲ್ಲಿ ಯೂರಿಯಾ ರಫ್ತಿಗೆ ತಡೆವೊಡ್ಡಿತ್ತು. ಇದರಿಂದಾಗಿ ಜಗತ್ತಿನಾದ್ಯಂತ ಯೂರಿಯಾ ಕೊರತೆ ಸೃಷ್ಟಿಯಾಗಿ, ದರಗಳು ಸಾರ್ವಕಾಲಿಕ ದಾಖಲೆ ಬರೆದಿದ್ದವು. ಇದೀಗ ಆ ಜಾಗತಿಕ ಬಿಕ್ಕಟ್ಟು ಶಮನವಾಗುತ್ತಿರುವುದು ರಸಗೊಬ್ಬರ ಮಾರುಕಟ್ಟೆಯಲ್ಲಿ ಬಹುದೊಡ್ಡ ನಿರಾಳತೆ ಮೂಡಿಸಿದೆ.

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ದರ ಎಷ್ಟೇ ಏರಿಕೆಯಾಗಿದ್ದರೂ, ಭಾರತ ಸರ್ಕಾರವು ರೈತರಿಗೆ ರಿಯಾಯಿತಿ ದರದಲ್ಲಿ (ಪ್ರತಿ ಚೀಲಕ್ಕೆ ಕೇವಲ 268 ರೂಪಾಯಿ) ಯೂರಿಯಾವನ್ನು ಒದಗಿಸುತ್ತಿದೆ. ಜಾಗತಿಕ ಬೆಲೆ ಏರಿಕೆಯಿಂದಾಗಿ ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರ್ಕಾರದ ರಸಗೊಬ್ಬರ ಸಬ್ಸಿಡಿ (ಸಹಾಯಧನ) ಹೊರೆ ದಾಖಲೆಯ 3.4 ಲಕ್ಷ ಕೋಟಿ ರೂಪಾಯಿಗಳನ್ನು ತಲುಪುವ ಆತಂಕ ಎದುರಾಗಿತ್ತು. ಆದರೆ, ಪ್ರಸ್ತುತ ಆಮದು ದರಗಳು ಅರ್ಧಕ್ಕರ್ಧ ಕುಸಿದಿರುವ ಕಾರಣ, ಸರ್ಕಾರದ ಬೊಕ್ಕಸದ ಮೇಲಿನ ಸಬ್ಸಿಡಿ ಹೊರೆ ಗಣನೀಯವಾಗಿ ತಗ್ಗಲಿದ್ದು, ದೇಶದ ಆರ್ಥಿಕತೆಗೆ ಭಾರಿ ಚೇತರಿಕೆ ಸಿಗಲಿದೆ.

## ಮೊದಲನೇ ಪುಟದಿಂದ-ರಾಜ್ಯದ ಸಮಗ್ರ ಅಭಿವೃದ್ಧಿಗೆ ಸಹಕರಿಸಿ

**12)ಹಂತ–2ರ ಪರಿಷ್ಕೃತ ಪೂರ್ಣಗೊಳ್ಳುವಿಕೆ ವೆಚ್ಚ:** ಹಂತ–2 ಯೋಜನೆಯನ್ನು ಭಾರತ ಸರ್ಕಾರವು 21/02/2014 ರಂದು 61 ನಿಲ್ದಾಣಗಳನ್ನು ಒಳಗೊಂಡ 72.095 ಕಿಮೀ ಮೆಟ್ರೋ ಮಾರ್ಗಕ್ಕಾಗಿ 26,405.14 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಅನುಮೋದಿಸಿತ್ತು. ಹಂತ–2 ರ ಪರಿಷ್ಕೃತ ವೆಚ್ಚವನ್ನು 40,425.02 ಕೋಟಿ ರೂ. ಎಂದು ಅಂದಾಜಿಸಲಾಗಿದ್ದು, ಭಾರತ ಸರ್ಕಾರ ಅನುಮೋದಿಸಿದ ವೆಚ್ಚಕ್ಕಿಂತ ಇದು 14,019.88 ಕೋಟಿ ರೂ. ಹೆಚ್ಚಾಗಿದೆ. ಆದಷ್ಟು ಬೇಗ ಇದಕ್ಕೆ ಅನುಮೋದಿಸಬೇಕು ಎಂದು ಮನವಿ.

**13)ಬಿಎಂಆರ್‌ಸಿಎಲ್ ಹಂತ–3ಎ ಯೋಜನೆಗೆ ಅನುಮೋದನೆ:** ಸರ್ಜಾಪುರದಿಂದ ಹೆಬ್ಬಾಳದವರೆಗಿನ 37.804 ಕಿ.ಮೀ ಸುರಂಗ ಮಾರ್ಗದ ವೆಚ್ಚವನ್ನು 25,999.00 ಕೋಟಿ ರೂ.ಗೆ ಪರಿಷ್ಕರಿಸಿದ ಡಿಪಿಆರ್ ಅನ್ನು 29.04.2026 ರಂದು ಮರುಸಲ್ಲಿಸಲಾಗಿದೆ. ಇದಕ್ಕೆ ಶೀಘ್ರವಾಗಿ ಅನುಮೋದನೆ ನೀಡಬೇಕಾಗಿ ವಿನಂತಿ.

**14) ಆರ್‌ಆರ್‌ಟಿಎಸ್ ಅನುಷ್ಠಾನಕ್ಕೆ ಅನುಮೋದನೆ:** ಆರ್‌ಆರ್‌ಟಿಎಸ್ ಮಾದರಿಯಲ್ಲಿ ಬೆಂಗಳೂರಿನಿಂದ ಮೈಸೂರು, ಬೆಂಗಳೂರಿನಿಂದ ಕನಕಪುರ, ಬೆಂಗಳೂರಿನಿಂದ ತುಮಕೂರು, ಬೆಂಗಳೂರಿನಿಂದ ಚಿಕ್ಕಬಳ್ಳಾಪುರ ಮತ್ತು ಬೆಂಗಳೂರಿನಿಂದ ಕೋಲಾರಕ್ಕೆ ಪ್ರಾದೇಶಿಕ ಕ್ಷಿಪ್ರ ರೈಲು ಸಾರಿಗೆ ವ್ಯವಸ್ಥೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಬೇಕಾಗಿ ವಿನಂತಿ.

**15)ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಮಂಜೂರಾತಿ ಮತ್ತು ಮೇಲ್ದರ್ಜೆಗೆ ಏರಿಸುವಿಕೆ:** ಬಾಕಿ ಉಳಿದಿರುವ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಮಂಜೂರಾತಿ ಮತ್ತು ಅನುಷ್ಠಾನಕ್ಕೆ ಕೇಂದ್ರವು ತುರ್ತಾಗಿ ಮಧ್ಯಸ್ಥಿಕೆ ವಹಿಸಬೇಕೆಂದು ಒತ್ತಾಯಿಸಲಾಗಿದೆ.

**16) ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆ (2000 ಮೆಗಾವ್ಯಾಟ್):** ಈ ಯೋಜನೆಗೆ ಅಗತ್ಯವಿರುವ ಅರಣ್ಯ, ಪರಿಸರ ಮತ್ತು ವನ್ಯಜೀವಿ ಅನುಮತಿಗಳನ್ನು ತ್ವರಿತಗೊಳಿಸಬೇಕು. ಈ ಯೋಜನೆಯು ಗ್ರಿಡ್ ಸ್ಥಿರತೆಯನ್ನು ಹೆಚ್ಚಿಸಲಿದೆ ಮತ್ತು ಭಾರತದ ನವೀಕರಿಸಬಹುದಾದ ಇಂಧನ ಗುರಿಗಳಿಗೆ ಬೆಂಬಲ ನೀಡಲಿದೆ.

**17) ಕಲ್ಯಾಣ ಕರ್ನಾಟಕಕ್ಕೆ 25,000 ಕೋಟಿ ಆರ್ಥಿಕ ನೆರವು:** ಸಂವಿಧಾನದ 371(ಜೆ) ವಿಧಿಯ ಆಶಯಕ್ಕೆ ಅನುಗುಣವಾಗಿ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ವಾರ್ಷಿಕವಾಗಿ 25,000 ಕೋಟಿ ರೂ. ಪ್ರತ್ಯೇಕ ಆರ್ಥಿಕ ನೆರವಿಗೆ ಒತ್ತಾಯ..

# ಹಣಕಾಸು ಸಚಿವರ ಜತೆ ಸಿಎಂ ಡಿಕೆಶಿ ಚರ್ಚೆ



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ದೆಹಲಿಯಲ್ಲಿ ಗುರುವಾರ ಭೇಟಿ ಮಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರು ಸೇರಿ ರಾಜ್ಯದ ನಗರ ಪ್ರದೇಶಗಳು ಹಾಗೂ ಗ್ರಾಮೀಣ ಭಾಗದ ಮೂಲಸೌಕರ್ಯ ಅಭಿವೃದ್ಧಿ ಹಾಗೂ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಜಾರಿಗೆ ಸೂಕ್ತ ಅನುದಾನ ಹಾಗೂ ಸಹಕಾರ ನೀಡುವಂತೆ ಮನವಿ ಮಾಡಿದರು. ಸಚಿವ ಕೃಷ್ಣಬೈರೇಗೌಡ ಉಪಸ್ಥಿತರಿದ್ದರು.

# ಡಿಕೆಶಿ ನೇತೃತ್ವದಲ್ಲಿ 2028ರಲ್ಲೂ ಪಕ್ಷ ಅಧಿಕಾರಕ್ಕೆ ಬಂದರೆ ಅವರೇ ಸಿಎಂ ಆದರೆ ತಪ್ಪಿಲ್ಲ: ಸತೀಶ್ ಜಾರಕಿಹೊಳಿ



**ಬೆಂಗಳೂರು, ಜೂ.11:** ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಮುಂದಿನ ವಿಧಾನಸಭೆ ಚುನಾವಣೆ ನಡೆದು ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ, ಡಿ.ಕೆ.ಶಿವಕುಮಾರ್ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುವುದರಲ್ಲಿ ತಪ್ಪಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲಸ ಮಾಡಿದವರಿಗೆ ಕೂಲಿ ಸಿಗಬೇಕು ಎಂಬುದಕ್ಕೆ ಸಹಮತ ಇದೆ. 2028ರ ವಿಧಾನಸಭೆ ಚುನಾವಣೆಗೆ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ತಯಾರಿ ನಡೆಸುವುದಾಗಿ ನಾವೆಲ್ಲರೂ ಈಗಾಗಲೇ ಹೇಳಿದ್ದೇವೆ. ಮುಂದಿನ ಚುನಾವಣೆಯಲ್ಲೇ ಮುಖ್ಯಮಂತ್ರಿಯಾಗಬೇಕೆಂಬ ಆತುರತೆ ತಮಗಿಲ್ಲ, ಇನ್ನೂ ವಯಸ್ಸು ಇದೆ. ಹೈಕಮಾಂಡ್ ಡಿ.ಕೆ.ಶಿವಕುಮಾರ್ ಅವರಿಗೆ ಅವಕಾಶ ನೀಡಿದೆ. ಅವರು ಯಶಸ್ವಿಯಾಗಲಿ ಎಂದು ಹೇಳಿದರು.

**ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಗದಿದ್ದಕ್ಕೆ ಬೇಸರವಿಲ್ಲ**

ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಗದೇ ಇರುವುದಕ್ಕೆ ತಮಗೆ ಯಾವುದೇ ಬೇಸರವಿಲ್ಲ. ಹರಿಪ್ರಸಾದ್ ಅವರಿಗೆ ಈಗಾಗಲೇ ಹೈಕಮಾಂಡ್ ಜವಾಬ್ದಾರಿ ನೀಡಿದೆ. ಅವರಿಗೆ ಸುದೀರ್ಘ ಪಕ್ಷ ಸಂಘಟನೆಯ ಅನುಭವ ಇದೆ.ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುವುದಾಗಿ ಹೇಳುತ್ತಿದ್ದಾರೆ, ಸಂತೋಷ. ಇದಕ್ಕೆ ನನ್ನ ಬೆಂಬಲವಿದೆ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ತಮಗೆ ಕ್ರೀಡಾ ಇಲಾಖೆ ಮೇಲೆ ಆಸಕ್ತಿಯಿತ್ತು. ಧರ್ಮಸಿಂಗ್ ಸಂಪುಟದಲ್ಲಿ ಕ್ರೀಡಾ ಇಲಾಖೆ ಖಾತೆ ಒಂದನ್ನೇ ಕೊಡುವಂತೆ ಮನವಿ ಮಾಡಿದ್ದೆ. ಆದರೆ ಅದು ಸಾಧ್ಯವಾಗಲಿಲ್ಲ. ಈಗಲೂ ಕ್ರೀಡಾ ಇಲಾಖೆಗಾಗಿ ಬೇಡಿಕೆ ಇಟ್ಟಿದ್ದಾಗಿ ತಿಳಿಸಿದರು. ಆದರೆ ಉಪ ಮುಖ್ಯಮಂತ್ರಿ ಪರಮೇಶ್ವರ್ ಅವರಿಗೆ ಕ್ರೀಡಾ ಇಲಾಖೆ ಖಾತೆ ಕೊಟ್ಟಿರುವುದರಿಂದ ಪದೇಪದೇ ಅದೇ ವಿಚಾರ ಕೆಣಕುವುದರಲ್ಲಿ ಅರ್ಥವಿಲ್ಲ ಎಂದಿದ್ದಾರೆ.

**ವಿಮಾನದಲ್ಲಿ ಪ್ರಯಾಣಿಸುವವರಿಗೆ ಗೃಹಲಕ್ಷ್ಮೀ ಸೌಲಭ್ಯ ಬೇಕಿಲ್ಲ**

ಹೊಸದಾಗಿ ಇಲಾಖೆಗಳು ಖಾತೆ ನಿರ್ವಹಣೆ ಮಾಡುವವರು ಟೇಕಾಫ್ ಆಗಲು 6 ತಿಂಗಳ ಸಮಯಬೇಕಿದೆ. ಗೃಹಲಕ್ಷ್ಮಿ ಯೋಜನೆಯಲ್ಲಿ ದುರುಪಯೋಗಕ್ಕೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಲಾಗುತ್ತಿದೆ. 3 ಲಕ್ಷ ರೂ. ಕೊಟ್ಟು ವಿಮಾನದಲ್ಲಿ ಪ್ರಯಾಣಿಸುವವರಿಗೆ ಗೃಹಲಕ್ಷ್ಮಿ ಸೌಲಭ್ಯ ಬೇಕಿಲ್ಲ, ಜಿಎಸ್‌ಟಿ ಮತ್ತು ಆದಾಯ ತೆರಿಗೆ ಪಾವತಿಸುವವರಿಗೂ ಸೌಲಭ್ಯ ದೊರೆಯುತ್ತಿದ್ದರೆ ಅದನ್ನು ಪರಿಷ್ಕರಣೆ ಮಾಡುವುದು ಅನಿವಾರ್ಯ ಎಂದರು. ಮೊದಲು ಪಕ್ಷ ಅಧಿಕಾರಕ್ಕೆ ಬರಬೇಕು. ನಂತರ ಮುಖ್ಯಮಂತ್ರಿ ಆಯ್ಕೆಯ ಬಗ್ಗೆ ಚರ್ಚೆಯಾಗಲಿ ಎಂದು ಹೇಳಿದರು.

# ಪರಿಷತ್ ಚುನಾವಣೆಯಲ್ಲಿ ಪಕ್ಷೇತರರು, ಅತೃಪ್ತ ಶಾಸಕರಿಗೆ ಭಾರಿ ಬೇಡಿಕೆ





**ಬೆಂಗಳೂರು, ಜೂ.11:** ಇದೇ ತಿಂಗಳ 18ರಂದು ವಿಧಾನಸಭೆಯಿಂದ ವಿಧಾನ ಪರಿಷತ್‌ನ 7 ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಪಕ್ಷೇತರ ಶಾಸಕರಿಗೆ ಭಾರಿ ಬೇಡಿಕೆ ಬಂದಿದೆ. ಜತೆಗೆ ಈ ಚುನಾವಣೆಯು ರಾಜಕೀಯ ವಲಯದಲ್ಲಿ ಸಾಕಷ್ಟು ಕುತೂಹಲ ಮೂಡಿಸಿದೆ. ಚುನಾವಣೆಯಲ್ಲಿ ಪಕ್ಷೇತರ ಶಾಸಕರು ಮತ್ತು ಅತೃಪ್ತ ಶಾಸಕರ ಪಾತ್ರ ನಿರ್ಣಾಯಕವಾಗಿದೆ. ಯಾವುದೇ ಒಂದು ರಾಜಕೀಯ ಪಕ್ಷದ ಅಧಿಕೃತ ಅಭ್ಯರ್ಥಿಗಳ ಸೋಲು ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಲಿರುವ ಪಕ್ಷೇತರ ಶಾಸಕರನ್ನು ಸೆಳೆಯಲು ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷ ಜೆಡಿಎಸ್ ನಡುವೆ ಭಾರೀ ಜಿದ್ದಾಜಿದ್ದಿನ ಸ್ಪರ್ಧೆ ಏರ್ಪಟ್ಟಿದೆ.

ಕಾಂಗ್ರೆಸ್ ಮತ್ತು ಜೆಡಿಎಸ್ ಎರಡೂ ಪಕ್ಷಗಳು ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ಶಾಸಕರನ್ನು ಒಗ್ಗೂಡಿಸುವ ಕಸರತ್ತು ನಡೆಸುತ್ತಿವೆ. ಬಿಜೆಪಿ ಬಂಡಾಯ ಶಾಸಕರು ಯಾರತ್ತ ವಾಲುತ್ತಾರೆ ಎಂಬುದು ಮತ್ತು ಜೆಡಿಎಸ್‌ನ ಹಿರಿಯ ನಾಯಕ ಜಿ.ಟಿ.ದೇವೇಗೌಡ ಅವರ ನಿಲುವು ಏನು ಎಂಬುದು ಈ ಚುನಾವಣೆಯ ಅತ್ಯಂತ ಕುತೂಹಲಕಾರಿ ಅಂಶಗಳಾಗಿವೆ.

ಬಿಜೆಪಿ 2 ಸ್ಥಾನಗಳನ್ನು ಸುಲಭವಾಗಿ ಗೆಲ್ಲುವ ಸ್ಥಿತಿಯಲ್ಲಿದೆ. ಆದರೆ, ಜೆಡಿಎಸ್ ನೊಂದಿಗೆ ಮೈತ್ರಿ ಮಾಡಿಕೊಂಡಿದ್ದರೂ, ಹೆಚ್ಚುವರಿ ಮತಗಳಿಗಾಗಿ ಬಿಜೆಪಿ ಬಂಡಾಯ ನಾಯಕರು ಮತ್ತು ಸ್ವತಂತ್ರರ ಮೊರೆ ಹೋಗುವ ಅನಿವಾರ್ಯತೆ ಇದೆ. ಬಿಜೆಪಿ ಮತ್ತು ಕಾಂಗ್ರೆಸ್‌ನಿಂದ ಹೊರಬಂದಿರುವ ಅಥವಾ ಬಂಡಾಯವೆದ್ದಿರುವ ಶಾಸಕರು (ಉದಾಹರಣೆಗೆ ಎಸ್.ಟಿ. ಸೋಮಶೇಖರ್, ಶಿವರಾಮ್ ಹೆಬ್ಬಾರ್, ಬಸನಗೌಡ ಪಾಟೀಲ್ ಯತ್ನಾಳ್) ಯಾರಿಗೆ ಬೆಂಬಲ ನೀಡುತ್ತಾರೆ ಎಂಬುದು ಈ ಚುನಾವಣೆಯ ಫಲಿತಾಂಶವನ್ನು ನಿರ್ಧರಿಸಲಿದೆ.

ಸಂಖ್ಯೆಗಳ ಲೆಕ್ಕಾಚಾರದಲ್ಲಿ ಯಾರೂ ಸಂಪೂರ್ಣ ಸುರಕ್ಷಿತವಾಗಿಲ್ಲದ ಕಾರಣ, ಶಾಸಕರನ್ನು ತಮತ್ತ ಸೆಳೆಯಲು ಪಕ್ಷಗಳು ಹರಸಾಹಸ ಪಡುತ್ತಿವೆ. ಇದೇ ಕಾರಣಕ್ಕೆ ಪಕ್ಷೇತರರು ಮತ್ತು ಅತೃಪ್ತ ಶಾಸಕರಿಗೆ ಈ ಚುನಾವಣೆಯಲ್ಲಿ ಹೆಚ್ಚಿನ ಬೇಸೃಷ್ಟಿಯಾಗಿದೆ. ಮೇಲ್ನೋಟಕ್ಕೆ ಇದೊಂದು ಮಾಮೂಲಿನ ಚುನಾವಣೆಯಂತೆ ಕಂಡುಬಂದರೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ನಡುವಿನ ಹೋರಾಟ ಎಂದೇ ರಾಜಕೀಯ ವಲಯದಲ್ಲಿ ಬಿಂಬಿತ ವಾಗಿದೆ. ಶತಾಯಗತಾಯ ತಮ ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಲು ತಮದೇ ಆದ ಕಾರ್ಯತಂತ್ರ ರೂಪಿಸುತ್ತಿರುವ ಡಿಕೆಶಿ ಮತ್ತು ಎಚ್‌ಡಿಕೆ ವಿಶೇಷವಾಗಿ ಪಕ್ಷೇತರ ಶಾಸಕರನ್ನು ಸೆಳೆಯಲು ಕಸರತ್ತು ಆರಂಭಿಸಿದ್ದಾರೆ.

ಹೀಗಾಗಿ ಬಿಜೆಪಿಯಿಂದ ಉಚ್ಚಾಟನೆಗೊಂಡಿರುವ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಬಿಜಾಪುರ, ಎಸ್.ಟಿ.ಸೋಮಶೇಖರ್, ಯಶವಂತಪುರ ಶಿವರಾಮ್ ಹೆಬ್ಬಾರ್ ಯಲ್ಲಾಪುರ ಹಾಗೂ ಪಕ್ಷೇತರ ಶಾಸಕರಾದ ಲತಾ ಮಲ್ಲಿಕಾರ್ಜುನ್ ಹರಪನಹಳ್ಳಿ ಪುಟ್ಟಸ್ವಾಮಿಗೌಡ ಗೌರಿಬಿದನೂರು ಮತ್ತು ದರ್ಶನ್ ಪುಟ್ಟಣ್ಣಯ್ಯ ಮೇಲುಕೋಟೆ ಅವರುಗಳಿಗೆ ಎಲ್ಲಿಲ್ಲದ ಬೇಡಿಕೆ ಬಂದಿದೆ. ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ನಡೆಯಲಿರುವ ಈ ದ್ವೈವಾರ್ಷಿಕ ಚುನಾವಣೆಯು ಸಂಖ್ಯಾಬಲದ ಆಟವಾಗಿದೆ.

**ಅಗತ್ಯವಿರುವ ಮತಗಳು :**

ಒಬ್ಬ ಅಭ್ಯರ್ಥಿಯ ಗೆಲುವಿಗೆ ಪ್ರಥಮ ಪ್ರಾಶಸ್ತ್ಯದ 28 ಮತಗಳ ಅಗತ್ಯವಿದೆ. 224 ಸದಸ್ಯ ಬಲದ ವಿಧಾನಸಭೆಯಲ್ಲಿ, ಪ್ರಸ್ತುತ 222 ಶಾಸಕರು ಮತ ಚಲಾಯಿಸಲಿದ್ದಾರೆ. (ಮಾಜಿ ಸಚಿವ ಡಿ ಸುಧಾಕರ್ ನಿಧನರಾಗಿರುವುದು ಹಾಗೂ ಮಾಜಿ ಸಚಿವ ವಿನಯ್ ಕುಲಕರ್ಣಿ ಅವರ ಶಾಸಕ ಸ್ಥಾನ ರದ್ದುಗೊಂಡಿರುವುದರಿಂದ ಎರಡು ಸ್ಥಾನಗಳು ಖಾಲಿ ಉಳಿದಿದೆ) ಕಾಂಗ್ರೆಸ್ ತನ್ನ 4 ಅಭ್ಯರ್ಥಿಗಳನ್ನು ಸುಲಭವಾಗಿ ಗೆಲ್ಲಿಸಬಲ್ಲದು. ಐದನೇ ಅಭ್ಯರ್ಥಿಯನ್ನು ಗೆಲ್ಲಿಸಿಕೊಳ್ಳಲು ಕಾಂಗ್ರೆಸ್‌ಗೆ ಹೆಚ್ಚುವರಿ ಮತಗಳ ಅಗತ್ಯವಿದೆ.

ಇತ್ತ ಬಿಜೆಪಿ–ಜೆಡಿಎಸ್ ಮೈತ್ರಿ ಕೂಟವು ತಮ್ಮ ಸಂಖ್ಯಾಬಲದೊಂದಿಗೆ 2 ಸ್ಥಾನಗಳನ್ನು ಗೆಲ್ಲಬಹುದಾದರೂ, ಮೂರನೇ ಅಭ್ಯರ್ಥಿಯ ಗೆಲುವಿಗೆ ಕೆಲವು ಮತಗಳ ಕೊರತೆ ಎದುರಿಸುತ್ತಿದೆ. ಈ ಚುನಾವಣೆಯಲ್ಲಿ ಪಕ್ಷೇತರ ಶಾಸಕರ ಮತಗಳು ನಿರ್ಣಾಯಕ ಪಾತ್ರ ವಹಿಸುತ್ತಿವೆ. ವಿಧಾನಸಭೆಯಲ್ಲಿನ ಗಣಿತದ ಪ್ರಕಾರ, ಕಾಂಗ್ರೆಸ್ ತನ್ನ ಐದನೇ ಅಭ್ಯರ್ಥಿಯನ್ನು (ವಿನಯ್ ಕಾರ್ತಿಕ್) ಗೆಲ್ಲಿಸಿಕೊಳ್ಳಲು ಪಕ್ಷೇತರ ಶಾಸಕರ ಬೆಂಬಲ ಹಾಗೂ ಬಿಜೆಪಿ ಪಕ್ಷದಿಂದ ಉಚ್ಚಾಟಿತರಾದ ಶಾಸಕರ ನೆರವನ್ನು ಅವಲಂಬಿಸಿದೆ. ಇದೇ ಕಾರಣಕ್ಕೆ ಆಡಳಿತಾರೂಢ ಕಾಂಗ್ರೆಸ್ ಹಾಗೂ ಬಿಜೆಪಿ–ಜೆಡಿಎಸ್ ಮೈತ್ರಿಕೂಟಗಳೆರಡೂ ಪಕ್ಷೇತರರನ್ನು ತಮತ್ತ ಸೆಳೆಯಲು ತೀವ್ರ ಪ್ರಯತ್ನ ನಡೆಸುತ್ತಿವೆ. ಬಿಜೆಪಿ ಉಚ್ಚಾಟಿತ ಶಾಸಕರು ಮತ್ತು ಸಣ್ಣಪುಟ್ಟ ಪ್ರಾದೇಶಿಕ ಪಕ್ಷಗಳ ಶಾಸಕರು ಈ ಚುನಾವಣೆಯಲ್ಲಿ ಕಿಂಗ್ ಮೇಕರ್‌ಗಳಾಗುವ ಸಾಧ್ಯತೆಯಿದೆ.

**ಅಡ್ಡ ಮತದಾನದ ಭೀತಿ :**

ಚುನಾವಣೆ ರಹಸ್ಯ ಮತದಾನ ಪದ್ಧತಿಯಲ್ಲಿ ನಡೆಯುವುದರಿಂದ, ಪಕ್ಷದ ಆಂತರಿಕ ಭಿನ್ನಮತ ಅಥವಾ ಅಡ್ಡ ಮತದಾನದ ಭಯ ಎಲ್ಲಾ ಪಕ್ಷಗಳನ್ನೂ ಕಾಡುತ್ತಿದೆ. ಇದೇ ಕಾರಣಕ್ಕೆ ಶಾಸಕರನ್ನು ಒಗ್ಗೂಡಿಸಿ ಇರಿಸುವ (ರೆಸಾರ್ಟ್ ಅಥವಾ ಕ್ಯಾಂಪ್ ರಾಜಕೀಯದ ಮಾದರಿಯಲ್ಲಿ) ತಂತ್ರಗಳಿಗೆ ಪಕ್ಷಗಳು ಮುಂದಾಗಿವೆ.

| | |
|---|---|
| ವಿಧಾನಸಭೆ ಒಟ್ಟು ಶಾಸಕರು– | 224 |
| ಖಾಲಿ ಸ್ಥಾನಗಳು | –2 |
| ಕಾಂಗ್ರೆಸ್ | –137 |
| ಬಿಜೆಪಿ– | 64 |
| ಜೆಡಿಎಸ್ | –18 |

# ಮಧ್ಯಪ್ರದೇಶ, ಗುಜರಾತ್: 7 ರಾಜ್ಯಸಭಾ ಸ್ಥಾನಗಳಲ್ಲಿ ಬಿಜೆಪಿ ಗೆಲುವು




**ನವದೆಹಲಿ, ಜೂ.11:** ಮಧ್ಯಪ್ರದೇಶ ಮತ್ತು ಗುಜರಾತ್‌ನಲ್ಲಿ ಖಾಲಿಯಾಗಿದ್ದ ಏಳು ಸ್ಥಾನಗಳನ್ನು ಭಾರತೀಯ ಜನತಾ ಪಕ್ಷ ಗುರುವಾರ ಪಡೆದುಕೊಂಡಿದ್ದು, ಎರಡೂ ರಾಜ್ಯಗಳಲ್ಲಿ ತನ್ನ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಮಧ್ಯಪ್ರದೇಶದಲ್ಲಿ, ಯಾವುದೇ ವಿರೋಧ ಪಕ್ಷದ ಅಭ್ಯರ್ಥಿಗಳು ಕಣದಲ್ಲಿ ಉಳಿಯದೆ ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಪ್ರಕ್ರಿಯೆ ಮುಗಿದ ನಂತರ ಬಿಜೆಪಿ ನಾಮನಿರ್ದೇಶಿತರಾದ ರಜನೀಶ್ ಅಗರ್ವಾಲ್, ತರುಣ್ ಚುಗ್ ಮತ್ತು ಮಹೇಶ್ ಕೆವಾಟ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಲಾಗಿದೆ. ಗುಜರಾತ್‌ನಲ್ಲಿಯೂ ಪಕ್ಷವು ಸಂಪೂರ್ಣ ಗೆಲುವು ಸಾಧಿಸಿದೆ, ಅಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಕಣಕ್ಕಿಳಿಸದಿರಲು ನಿರ್ಧರಿಸಿದ ನಂತರ ನಾಲ್ಕು ಖಾಲಿ ಹುದ್ದೆಗಳನ್ನು ಅವಿರೋಧವಾಗಿ ಗೆದ್ದಿದೆ. ಬಿಜೆಪಿ ನಾಮನಿರ್ದೇಶಿತರಾದ ರಾಜು ಶುಕ್ಲಾ, ಮಾನ್ಸಿನ್ಹ್ ಪರ್ಮಾರ್, ಮುಖೇಶ್ ರಥ್ವಾ ಮತ್ತು ಜಿತೇಂದ್ರ ಕಂಜರಿಯಾ ಅವರನ್ನು ಸ್ಪರ್ಧೆಯಿಲ್ಲದೆ ಆಯ್ಕೆ ಮಾಡಲಾಗಿದೆ ಎಂದು ಘೋಷಿಸಲಾಗಿದೆ. ಗುಜರಾತ್ ಫಲಿತಾಂಶವು ರಾಜ್ಯಸಭೆಯಲ್ಲಿ ಕಾಂಗ್ರೆಸ್ಗೆ ಪ್ರಾತಿನಿಧ್ಯವಿಲ್ಲದೆ ಉಳಿದಿರುವುದರಿಂದ ವ್ಯಾಪಕ ರಾಜಕೀಯ ಮಹತ್ವವನ್ನು ಹೊಂದಿದೆ. ಬೇರೆಡೆ, ರಾಜಸ್ಥಾನದಲ್ಲಿ ರಾಜ್ಯಸಭಾ ಚುನಾವಣೆಗಳು ಸಹ ಮತದಾನವಿಲ್ಲದೆ ಇತ್ಯರ್ಥವಾದವು. ಬಿಜೆಪಿ ನಾಯಕರಾದ ಸತೀಶ್ ಪೂನಿಯಾ ಮತ್ತು ಅಲ್ಕಾ ಗುರ್ಜರ್ ಮತ್ತು ಕಾಂಗ್ರೆಸ್ ಅಭ್ಯರ್ಥಿ ನೀರಜ್ ಡಾಂಗಿ ಅವರು ನಾಮಪತ್ರ ಹಿಂಪಡೆಯುವ ಅವಧಿ ಮುಗಿದ ನಂತರ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾ ಅಧಿಕಾರಿಗಳ ಪರಿಶೀಲನೆಯ ಸಮಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ಅವರ ನಾಮಪತ್ರ ತಿರಸ್ಕೃತಗೊಂಡ ನಂತರ ಅವರ ಗೆಲುವು ಸಾಧಿಸಲಾಯಿತು, ಈ ನಿರ್ಧಾರವು ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ನಡುವೆ ತೀವ್ರ ರಾಜಕೀಯ ಘರ್ಷಣೆಗೆ ಕಾರಣವಾಗಿದೆ. ರಾಜ್ಯಸಭಾ ಚುನಾವಣಾ ರಿಟರ್ನಿಂಗ್ ಅಧಿಕಾರಿ ಅರವಿಂದ್ ಶರ್ಮಾ ಹೊರಡಿಸಿದ ಆದೇಶದ ಪ್ರಕಾರ, ನಟರಾಜನ್ ಅವರ ನಾಮಪತ್ರ ಪರಿಶೀಲನೆಯಲ್ಲಿ ಫಾರ್ಮ್ 26 ರಲ್ಲಿ ಅವರ ಅಫಿಡವಿಟ್ ಅಪೂರ್ಣವಾಗಿದೆ ಎಂದು ಕಂಡುಬಂದ ನಂತರ ಅವರ ನಾಮಪತ್ರವನ್ನು ತಿರಸ್ಕರಿಸಲಾಯಿತು, ನ್ಯಾಯಾಲಯದ ದೂರಿಗೆ ಸಂಬಂಧಿಸಿದ ವಿವರಗಳನ್ನು ಬಹಿರಂಗಪಡಿಸಲಾಗಿಲ್ಲ.

ಈ ತೀರ್ಪು ಬಿಜೆಪಿ ಅಭ್ಯರ್ಥಿಗಳ ಏಕೈಕ ಸವಾಲನ್ನು ಪರಿಣಾಮಕಾರಿಯಾಗಿ ತೆಗೆದುಹಾಕಿತು ಮತ್ತು ಮೇಲ್ಮನೆಗೆ ಅವರ ಅವಿರೋಧ ಆಯ್ಕೆಗೆ ಖಾತರಿ ನೀಡಿತು. ಈ ನಿರ್ಧಾರವನ್ನು ಕಾಂಗ್ರೆಸ್ ಬಲವಾಗಿ ವಿರೋಧಿಸಿದೆ, ಇದು ನ್ಯಾಯಸಮ್ಮತವಲ್ಲ ಮತ್ತು ರಾಜಕೀಯವಾಗಿ ಮಹತ್ವದ್ದಾಗಿದೆ ಎಂದು ವಿವರಿಸಿದೆ.

ಕಾನೂನು ಹಸ್ತಕ್ಷೇಪ ಕೋರಿ, ನಟರಾಜನ್ ಗುರುವಾರ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಅವರ ನಾಮಪತ್ರ ತಿರಸ್ಕಾರವನ್ನು ಪ್ರಶ್ನಿಸಿ ಮತ್ತು ಜೂನ್ 18 ರ ಚುನಾವಣಾ ದಿನಾಂಕದ ಮೊದಲು ಪರಿಹಾರವನ್ನು ಕೋರಿದೆ. ಚುನಾವಣೆಗೆ ಹೋಗುವ ಎಲ್ಲಾ ರಾಜ್ಯಗಳಲ್ಲಿ, ಮಧ್ಯಪ್ರದೇಶವು ರಾಜಕೀಯ ಗಮನದ ಕೇಂದ್ರಬಿಂದುವಾಗಿದೆ.

# ಬೃಹತ್ ರ್‍ಯಾಲಿಗೆ ಮಾಯಾವತಿ ಸಜ್ಜು

**ಲಖನೌ,ಜೂ.11:** ಉತ್ತರ ಪ್ರದೇಶದಲ್ಲಿ 2027ರ ಆರಂಭದಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಈ ಚುನಾವಣೆಗೆ ಈಗಲೇ ಬಹುಜನ ಸಮಾಜ ಪಕ್ಷ ಸಜ್ಜಾಗುತ್ತಿದೆ. ಮಾಯಾವತಿಯವರು ಈಗಿನಿಂದಲೇ ಪಕ್ಷದ ಸಂಘಟನೆ ಮತ್ತು ಕಾರ್ಯಕರ್ತರನ್ನು ಒಟ್ಟುಗೂಡಿಸುತ್ತಿದ್ದು, ಪಕ್ಷದ ಕಾರ್ಯ ಚಟುವಟಿಕೆ ಚುರುಕುಗೊಳಿಸುತ್ತಿದ್ದಾರೆ. ಇದೇ ತಿಂಗಳು ಜೂನ್ 22ರಂದು ಬೃಹತ್ ರ್‍ಯಾಲಿ ನಡೆಸಲು ಮಾಯಾವತಿ ಸಿದ್ಧರಾಗಿದ್ದಾರೆ. ಈ ಬಾರಿ ಮಾಯಾವತಿಯವರು ತಮ್ಮ ಹಳೆಯ ಸೂತ್ರವಾದ ದಲಿತ, ಬ್ರಾಹ್ಮಣ ಮತ್ತು ಮುಸ್ಲಿಂ ಮತದಾರರನ್ನು ಒಟ್ಟುಗೂಡಿಸುವ ಕಡೆಗೆ ಮತ್ತೆ ಒಲವು ತೋರುತ್ತಿದ್ದಾರೆ. ಫೈಜಾಬಾದ್ ರ್‍ಯಾಲಿಯು ಈ ಸಮೀಕರಣವನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಂತೆ ಕಾಣುತ್ತಿದೆ. ಉತ್ತರ ಪ್ರದೇಶದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮತ್ತು ಎಸ್‌ಪಿ–ಕಾಂಗ್ರೆಸ್ ಇಂಡಿಯಾ ಮೈತ್ರಿಕೂಟದ ನಡುವೆ ನೇರ ಹಣಾಹಣಿ ಏರ್ಪಟ್ಟಿರುವಾಗ, ಬಿಎಸ್ಪಿ ಒಂಟಿಯಾಗಿ ಕಣಕ್ಕಿಳಿಯು ಸಾಧ್ಯತೆಯಿದೆ. ಇದರಿಂದಾಗಿ ಉತ್ತರ ಪ್ರದೇಶದಲ್ಲಿ ತ್ರಿಕೋನ ಸ್ಪರ್ಧೆ ಏರ್ಪಡಬಹುದು. ಇದು ಕೆಲವು ಕ್ಷೇತ್ರಗಳಲ್ಲಿ ಮತ ವಿಭಜನೆಯಾಗಿ ಬಿಎಸ್‌ಪಿಗೆ ಗೆಲುವಿನ ಅವಕಾಶ ತಂದುಕೊಡಬಹುದು ಎಂಬುದು ಮಾಯಾವತಿ ಲೆಕ್ಕಾಚಾರ. ಇನ್ನು ಲೋಕಸಭೆ ಚುನಾವಣೆಯ ನಂತರ ಕಾಂಗ್ರೆಸ್ ಮತ್ತು ಇತರ ಪಕ್ಷಗಳು ಬಿಎಸ್ಪಿಯೊಂದಿಗೆ ಮೈತ್ರಿಗಾಗಿ ತೆರೆಮರೆಯ ಪ್ರಯತ್ನ ನಡೆಸಿತ್ತು. ಆದರೆ ಮಾಯಾವತಿಯವರು ಮೈತ್ರಿ ನಿರಾಕರಿಸಿದ್ದರು. ಬಿಎಸ್‌ಪಿ ರಾಜ್ಯಾಧ್ಯಕ್ಷ ವಿಶ್ವನಾಥ್ ಪಾಲ್ ಅವರು ನಮ್ಮ ಮೈತ್ರಿ ಕೇವಲ ಸಾಮಾನ್ಯ ಜನರೊಂದಿಗೆ ಮಾತ್ರ ಎಂದು ಸ್ಪಷ್ಟಪಡಿಸಿದ್ದರು. 2014 ಮತ್ತು 2019ರಲ್ಲಿ ಬಿಎಸ್ಪಿ ಏಕಾಂಗಿಯಾಗಿ ಸ್ಪರ್ಧಿಸಿ ಯಾವುದೇ ಕ್ಷೇತ್ರದಲ್ಲಿ ಗೆದ್ದಿಲ್ಲ. 2015–2019ರಲ್ಲಿ ಎಸ್ಪಿ ಮೈತ್ರಿಯಲ್ಲಿ ಕಣಕ್ಕಿಳಿದಾಗ ಮಾತ್ರ ಬಿಎಸ್ಪಿ 10 ಕ್ಷೇತ್ರಗಳಲ್ಲಿ ಗೆಲುವು ಕಂಡಿತ್ತು. ಉತ್ತರ ಪ್ರದೇಶದಲ್ಲಿ ಬಿಎಸ್ಪಿಯ ಸಾಂಪ್ರದಾಯಿಕ ಮತ ಹಂಚಿಕೆ 2019ರಲ್ಲಿ ಶೇ. 19.3ರಷ್ಟಿತ್ತು. ಆದರೆ 2024ರ ವೇಳೆಗೆ ಅದು ಶೇ. 9.3ಕ್ಕೆ ಕುಸಿಯಿತು. ಅಂದರೆ ಅರ್ಧಕ್ಕಿಂತ ಹೆಚ್ಚು ಸಾಂಪ್ರದಾಯಿಕ ಮತಗಳು ಬೇರೆ ಪಕ್ಷಗಳಿಗೆ ವರ್ಗಾವಣೆಯಾದವು. ಆದ್ದರಿಂದ ಮಾಯಾವತಿ ಅವರಿಗೆ ಮುಂದಿನ ಚುನಾವಣೆ ತಮ್ಮ ಅಸ್ತಿತ್ವವನ್ನು ಉಳಿಸಿಕೊಳ್ಳುವ ಚುನಾವಣೆಯಾಗಲಿದೆ.




ನವದೆಹಲಿಯ ಇಂದಿರಾ ಭವನದಲ್ಲಿ ಗುರುವಾರ ನಡೆದ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳು, ಉಸ್ತುವಾರಿಗಳು ಮತ್ತು ಪಿಸಿಸಿ ಅಧ್ಯಕ್ಷರ ಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ನಾಯಕ ರಾಹುಲ್ ಗಾಂಧಿ ಪಾಲ್ಗೊಂಡಿದ್ದರು.

# ಬಿಹಾರದ 10 ವಿಧಾನ ಪರಿಷತ್ ಸ್ಥಾನಗಳಿಗೆ ಅವಿರೋಧ ಆಯ್ಕೆ

**ಪಟನಾ, ಜೂ.11:** ಬಿಹಾರದ 10 ವಿಧಾನ ಪರಿಷತ್ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಎಲ್ಲ ಹತ್ತು ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಬಿಜೆಪಿ ಮತ್ತು ಜೆಡಿಯು ತಲಾ ನಾಲ್ಕು ಸ್ಥಾನಗಳು ಮತ್ತು ಎಲ್‌ಜೆಪಿ ರಾಮ್ ವಿಲಾಸ್ ಗೆ ಒಂದು ಸ್ಥಾನ ಸೇರಿವೆ, ಬಾಕಿ ಒಂದು ಸ್ಥಾನವನ್ನು ಆರ್‌ಜೆಡಿ ಗೆದ್ದುಕೊಂಡಿದೆ. ಇಂದು ನಾಮಪತ್ರ ಹಿಂಪಡೆಯುವ ಗಡುವು ಮುಗಿದ ನಂತರ ಎಲ್ಲಾ ಅಭ್ಯರ್ಥಿಗಳನ್ನು ವಿಜಯಶಾಲಿಗಳೆಂದು ಘೋಷಿಸಲಾಯಿತು.ಹೊಸದಾಗಿ ಆಯ್ಕೆಯಾದ ಎಂಎಲ್ಸಿಗಳಲ್ಲಿ ಜೆಡಿಯು ನಿಂದ ನಿಶಾಂತ್‌ಕುಮಾರ್, ಭಾರತಿ ಮೆಹ್ತಾ, ಶಿವಾನಿದೇವಿ ಪ್ರಜಾಪತಿ ಮತ್ತು ಲಾಲನ್ ಪ್ರಸಾದ್ ಸೇರಿದ್ದಾರೆ; ಗಮನಾರ್ಹವಾಗಿ, ನಿತೀಶ್ ಕುಮಾರ್ ಅವರಿಂದ ತೆರವಾದ ಸ್ಥಾನಕ್ಕೆ ನಡೆದ ಉಪಚುನಾವಣೆಯಲ್ಲಿ ಲಾಲನ್ ಪ್ರಸಾದ್ ಆಯ್ಕೆಯಾದರು. ಬಿಜೆಪಿಯಿಂದ ಭೋಜ್ಪುರಿ ತಾರೆ ಪವನ್‌ಸಿಂಗ್, ಸಂಜಯ್ ಪ್ರಕಾಶ್ ಮಯೂಖ್, ಅನಿಲ್ ಠಾಕೂರ್ ಮತ್ತು ಶೀಲಾ ಪಂಡಿತ್ ಆಯ್ಕೆಯಾದರು. ಎಲ್‌ಜೆಪಿ (ರಾಮ್ ವಿಲಾಸ್) ನ ಅಶ್ರಫ್ ಅನ್ಸಾರಿ ಮತ್ತು ಆರ್‌ಜೆಡಿಯ ಸುನಿಲ್ ಸಿಂಗ್ ಕೂಡ ಎಂಎಲ್ಸಿ ಚುನಾವಣೆಯಲ್ಲಿ ಗೆದ್ದರು.ರಾಷ್ಟ್ರೀಯ ಲೋಕ ಮೋರ್ಚಾ ಮುಖ್ಯಸ್ಥ ಉಪೇಂದ್ರ ಕುಶ್ವಾಹ ಅವರ ಪುತ್ರ ದೀಪಕ್ ಪ್ರಕಾಶ್ ಅವರನ್ನು ಎನ್‌ಡಿಎ ಅಭ್ಯರ್ಥಿಯಾಗಿ ಕಣಕ್ಕಿಳಿಸದ ಕಾರಣ ಅವರಿಗೆ ಎಂಎಲ್ಸಿ ಆಗುವ ಅವಕಾಶ ತಪ್ಪಿಹೋಯಿತು. ಅವರ ಆರು ತಿಂಗಳ ಸಾಂವಿಧಾನಿಕ ಅವಧಿ ನವೆಂಬರ್‌ನಲ್ಲಿ ಮುಕ್ತಾಯಗೊಳ್ಳಲಿದ್ದು, ಸಚಿವರಾಗಿ ಅವರ ಮುಂದುವರಿಕೆ ಈಗ ಅಪಾಯದಲ್ಲಿದೆ. ಕುಶ್ವಾಹ ತಮ್ಮ ಪಕ್ಷವನ್ನು ಬಿಜೆಪಿಯೊಂದಿಗೆ ವಿಲೀನಗೊಳಿಸಲು ನಿರಾಕರಿಸಿದ ನಂತರ ದೀಪಕ್ ಅವರನ್ನು ನಾಮನಿರ್ದೇಶನ ಮಾಡಲಾಗಿಲ್ಲ.

# ಮೀನಾಕ್ಷಿ ನಟರಾಜನ್ ಅರ್ಜಿ ವಿಚಾರಣೆಗೆ ಸುಪ್ರೀಂ ಸಮ್ಮತಿ



**ನವದೆಹಲಿ, ಜೂ. 11:** ಮಧ್ಯಪ್ರದೇಶದ ರಾಜ್ಯಸಭೆ ಚುನಾವಣೆಗೆ ಸಲ್ಲಿಸಿದ್ದ ನಾಮಪತ್ರ ತಿರಸ್ಕೃತಗೊಂಡಿರುವುದನ್ನು ಪ್ರಶ್ನಿಸಿ ಕಾಂಗ್ರೆಸ್ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ಅವರು ಗುರುವಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ಅವರ ಅರ್ಜಿಯ ತುರ್ತು ವಿಚಾರಣೆಯನ್ನು ಶುಕ್ರವಾರ ನಡೆಸಲು ಸಮ್ಮತಿಸಿರುವ ಸುಪ್ರೀಂ ಕೋರ್ಟ್, ಚುನಾವಣಾ ಫಲಿತಾಂಶ ಪ್ರಕಟಣೆಗೆ ತಡೆಯಾಜ್ಞೆ ನೀಡಲು ನಿರಾಕರಿಸಿದೆ.

ಮೀನಾಕ್ಷಿ ನಟರಾಜನ್ ಪರ ವಾದ ಮಂಡಿಸಿದ ಹಿರಿಯ ವಕೀಲ ಎ.ಎಂ. ಸಿಂಘ್ವಿ, ತೆಲಂಗಾಣದಲ್ಲಿ ದಾಖಲಾಗಿರುವ ಖಾಸಗಿ ದೂರಿನ ಪ್ರಕರಣದಲ್ಲಿ ಅವರಿಗೆ ಕೇವಲ ನೋಟಿಸ್ ಮಾತ್ರ ಜಾರಿಯಾಗಿದೆ. ನ್ಯಾಯಾಲಯವು ಈ ಬಗ್ಗೆ ಇನ್ನೂ ವಿಚಾರಣೆ ಕೈಗೆತ್ತಿಕೊಂಡಿಲ್ಲ ಹಾಗೂ ಯಾವುದೇ ತನಿಖೆ ನಡೆದು ದೋಷಾರೋಪ ಪಟ್ಟಿಯೂ ಸಲ್ಲಿಕೆಯಾಗಿಲ್ಲ. ಚುನಾವಣಾ ನಿಯಮಗಳ ಪ್ರಕಾರ, ಇದು ಕ್ರಿಮಿನಲ್ ಪ್ರಕರಣದ ವ್ಯಾಪ್ತಿಗೆ ಬರುವುದಿಲ್ಲವಾದ್ದರಿಂದ ನಾಮಪತ್ರದಲ್ಲಿ ಈ ಬಗ್ಗೆ ಮಾಹಿತಿ ನೀಡುವ ಅಗತ್ಯವಿರಲಿಲ್ಲ ಎಂದು ವಾದಿಸಿದರು.

ತೆಲಂಗಾಣದಲ್ಲಿ ತಮ್ಮ ವಿರುದ್ಧವಿರುವ ಪ್ರಕರಣದ ಮಾಹಿತಿಯನ್ನು ಮೀನಾಕ್ಷಿ ನಟರಾಜನ್ ಅವರು ನಾಮಪತ್ರದಲ್ಲಿ ಉದ್ದೇಶಪೂರ್ವಕವಾಗಿ ಮುಚ್ಚಿಟ್ಟಿದ್ದಾರೆ ಎಂದು ಆರೋಪಿಸಿ ಬಿಜೆಪಿ ಅಭ್ಯರ್ಥಿ ಮಹೇಶ್ ಕೇವತ್ ಅವರು ಆಕ್ಷೇಪ ವ್ಯಕ್ತಪಡಿಸಿದ್ದರು. ಈ ಆಕ್ಷೇಪಣೆಯ ಹಿನ್ನೆಲೆಯಲ್ಲಿ ಮೀನಾಕ್ಷಿ ಅವರ ನಾಮಪತ್ರವನ್ನು ತಿರಸ್ಕರಿಸಲಾಗಿತ್ತು. ಸುಪ್ರೀಂ ಕೋರ್ಟ್ ಮಾರ್ಗಸೂಚಿಗಳ ಪ್ರಕಾರ, ನ್ಯಾಯಾಲಯದ ಪ್ರಕ್ರಿಯೆಯಲ್ಲಿ ನೋಟಿಸ್ ನೀಡುವ ಹಂತ ತಲುಪಿದಾಗ ಆ ಬಗ್ಗೆ ನಾಮಪತ್ರದಲ್ಲಿ ಮಾಹಿತಿ ನೀಡುವುದು ಕಡ್ಡಾಯ ಎಂದು ಬಿಜೆಪಿ ಪ್ರತಿನಿಧಿಗಳು ವಾದಿಸಿದ್ದಾರೆ. ಆದರೆ, ಅವರ ವಿರುದ್ಧ ಯಾವುದೇ ಅಧಿಕೃತ ಕ್ರಿಮಿನಲ್ ಪ್ರಕರಣ ಇಲ್ಲದಿರುವುದರಿಂದ ಮಾಹಿತಿ ನೀಡುವ ಅಗತ್ಯವಿಲ್ಲ ಎಂದು ಕಾಂಗ್ರೆಸ್ ನಾಯಕರು ಸಮರ್ಥಿಸಿಕೊಂಡಿದ್ದಾರೆ.


ಈ ಅನಿರೀಕ್ಷಿತ ಬೆಳವಣಿಗೆಯು ಮಧ್ಯಪ್ರದೇಶದ ರಾಜ್ಯಸಭಾ ಚುನಾವಣೆಯ ರಾಜಕೀಯ ಲೆಕ್ಕಾಚಾರಗಳನ್ನೇ ಬದಲಿಸಿದೆ. 230 ಸದಸ್ಯ ಬಲದ ವಿಧಾನಸಭೆಯಲ್ಲಿ ಬಹುಮತ ಹೊಂದಿರುವ ಬಿಜೆಪಿ, ಈಗಾಗಲೇ ಎರಡು ಸ್ಥಾನಗಳನ್ನು ಗೆಲ್ಲುವುದು ಬಹುತೇಕ ಖಚಿತವಾಗಿತ್ತು. ಇದೀಗ ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರ ತಿರಸ್ಕೃತಗೊಂಡಿರುವುದರಿಂದ ಮೂರನೇ ಸ್ಥಾನದ ಮೇಲೂ ಬಿಜೆಪಿ ಹಿಡಿತ ಸಾಧಿಸುವ ಸಾಧ್ಯತೆಯಿದೆ. ಒಂದು ಸ್ಥಾನವನ್ನು ಸುಲಭವಾಗಿ ಗೆಲ್ಲುವಷ್ಟು ಸಂಖ್ಯಾಬಲ ಹೊಂದಿದ್ದ ಕಾಂಗ್ರೆಸ್ ಪಕ್ಷಕ್ಕೆ ಕಾನೂನು ಹೋರಾಟದಲ್ಲಿ ಗೆಲುವು ಸಿಗದಿದ್ದರೆ ಭಾರಿ ಹಿನ್ನಡೆಯಾಗಲಿದೆ. ಈ ಘಟನೆಯನ್ನು ಕಾಂಗ್ರೆಸ್ ಸಾಂವಿಧಾನಿಕ ಪಿತೂರಿ ಎಂದು ಆರೋಪಿಸಿದೆ.

# ಪ್ರಕಾಶ್ ಚಿಕ್ ಬರೈಕ್ ರಾಜೀನಾಮೆ: ಟಿಎಂಸಿಗೆ ಹಿನ್ನಡೆ

**ಕೋಲ್ಕತ್ತಾ, ಜೂ.11:** ಪಕ್ಷದೊಳಗಿನ ರಾಜಕೀಯ ಗೊಂದಲಗಳ ನಡುವೆಯೇ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಗುರುವಾರ ರಾಜ್ಯಸಭೆಯಲ್ಲಿ ಮತ್ತೊಂದು ಹಿನ್ನಡೆ ಅನುಭವಿಸಿತು. ಪಕ್ಷದೊಳಗಿನ ರಾಜಕೀಯ ಗೊಂದಲಗಳ ನಡುವೆಯೇ ಪಕ್ಷದ ಸಂಸದ ಪ್ರಕಾಶ್ ಚಿಕ್ ಬರೈಕ್ ಮೇಲ್ಮನೆಗೆ ರಾಜೀನಾಮೆ ನೀಡಿದ್ದಾರೆ. ಬರೈಕ್ ಬೆಳಗ್ಗೆ 11 ಗಂಟೆ ಸುಮಾರಿಗೆ ಉಪಾಧ್ಯಕ್ಷ ಮತ್ತು ರಾಜ್ಯಸಭೆಯ ಅಧ್ಯಕ್ಷ ಸಿ ಪಿ ರಾಧಾಕೃಷ್ಣನ್ ಅವರಿಗೆ ಔಪಚಾರಿಕವಾಗಿ ತಮ್ಮ ರಾಜೀನಾಮೆಯನ್ನು ಸಲ್ಲಿಸಿದರು. ಅವರ ನಿರ್ಗಮನದೊಂದಿಗೆ, ರಾಜ್ಯಸಭೆಯಲ್ಲಿ ತೃಣಮೂಲ ಕಾಂಗ್ರೆಸ್ನ ಬಲ 10 ಕ್ಕೆ ಇಳಿದಿದೆ. ಟಿಎಂಸಿಯ ಇತರ ಇಬ್ಬರು ರಾಜ್ಯಸಭಾ ಸಂಸದರಾದ ಸುಖೇಂದು ಶೇಖರ್ ರಾಯ್ ಮತ್ತು ಸುಶ್ಮಿತಾ ದೇವ್ ಅವರು ಮೇಲ್ಮನೆಯಿಂದ ಕೆಳಗಿಳಿದ ಕೆಲವು ದಿನಗಳ ನಂತರ ಅವರ ರಾಜೀನಾಮೆ ಬಂದಿದ್ದು, ಈ ವಾರ ಸಂಸತ್ತಿಗೆ ರಾಜೀನಾಮೆ ನೀಡಿದ ಮೂರನೇ ತೃಣಮೂಲ ಸಂಸದ ಬಾರೈಕ್ ಆಗಿದ್ದಾರೆ. ಉತ್ತರ ಬಂಗಾಳದಲ್ಲಿ ಪಕ್ಷದ ಪ್ರಮುಖ ಯುವ ಮುಖಗಳಲ್ಲಿ ಒಬ್ಬರೆಂದು ಪರಿಗಣಿಸಲಾದ ಬಾರೈಕ್, ಟಿಎಂಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರ ಆಪ್ತರು ಎಂದು ರಾಜಕೀಯ ವಲಯಗಳಲ್ಲಿ ತಿಳಿದುಬಂದಿದೆ. ಪಕ್ಷವು 2023 ರಲ್ಲಿ ಅವರನ್ನು ರಾಜ್ಯಸಭೆಗೆ ನಾಮನಿರ್ದೇಶನ ಮಾಡಿತು ಮತ್ತು ನಂತರ 2024 ರ ಸಾರ್ವತ್ರಿಕ ಚುನಾವಣೆಯಲ್ಲಿ ಅಲಿಪುರ್ದೂರ್ ಲೋಕಸಭಾ ಕ್ಷೇತ್ರದಿಂದ ಅವರನ್ನು ಕಣಕ್ಕಿಳಿಸಿತು, ಆದರೆ ಅವರು ವಿಫಲರಾದರು. ಉತ್ತರ ಬಂಗಾಳದಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸುವ ಪ್ರಯತ್ನಗಳಲ್ಲಿ ತೃಣಮೂಲ ನಾಯಕತ್ವವು ಬರೈಕ್ ಅವರನ್ನು ಪ್ರಮುಖ ವ್ಯಕ್ತಿಯಾಗಿ ಬಿಂಬಿಸಿತ್ತು. ಈ ವರ್ಷದ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಅವರನ್ನು ಒಂದು ಪಾತ್ರಕ್ಕೆ ಪರಿಗಣಿಸಬಹುದು ಎಂಬ ವದಂತಿ ಪಕ್ಷದ ವಲಯಗಳಲ್ಲಿ ಇತ್ತು, ಆದರೆ ಅದು ಅಂತಿಮವಾಗಿ ಕಾರ್ಯರೂಪಕ್ಕೆ ಬರಲಿಲ್ಲ. ಅವರ ಹಠಾತ್ ರಾಜೀನಾಮೆಯ ಹಿಂದಿನ ಕಾರಣಗಳು ಸ್ಪಷ್ಟವಾಗಿಲ್ಲ. ರಾಜಕೀಯ ವೀಕ್ಷಕರು ಅವರ ನಿರ್ಧಾರಕ್ಕೆ ಕಾರಣವಾದ ಸಂದರ್ಭಗಳ ಬಗ್ಗೆ ಊಹಾಪೋಹಗಳನ್ನು ಪ್ರಾರಂಭಿಸಿದ್ದರೂ, ಬರೈಕ್ ಇಲ್ಲಿಯವರೆಗೆ ಯಾವುದೇ ಸಾರ್ವಜನಿಕ ಹೇಳಿಕೆಯನ್ನು ನೀಡಿಲ್ಲ. ಅವರ ರಾಜೀನಾಮೆ ಅವರು ರಾಜ್ಯಸಭಾ ಸದಸ್ಯ ಸ್ಥಾನದಿಂದ ಕೆಳಗಿಳಿದಿದ್ದಾರೆಯೇ ಅಥವಾ ಮುಂಬರುವ ದಿನಗಳಲ್ಲಿ ದೊಡ್ಡ ರಾಜಕೀಯ ನಡೆಯಿಗಾಗಿ ತಯಾರಿ ನಡೆಸುತ್ತಿದ್ದಾರೆಯೇ ಎಂಬ ಊಹಾಪೋಹಕ್ಕೂ ಕಾರಣವಾಗಿದೆ. ಆದಾಗ್ಯೂ, ಪಕ್ಷ ಅಥವಾ ಬರೈಕ್ ಈ ವಿಷಯದ ಬಗ್ಗೆ ಯಾವುದೇ ಅಧಿಕೃತ ಸ್ಪಷ್ಟೀಕರಣವನ್ನು ನೀಡಿಲ್ಲ. ಬರೈಕ್ ತಮ್ಮ ಮುಂದಿನ ಕ್ರಮವನ್ನು ಸಾರ್ವಜನಿಕವಾಗಿ ವಿವರಿಸಿದ ನಂತರವೇ ರಾಜೀನಾಮೆಯ ಹಿಂದಿನ ನಿಜವಾದ ಕಾರಣಗಳು ಸ್ಪಷ್ಟವಾಗುತ್ತವೆ ಎಂದು ರಾಜಕೀಯ ವಿಶ್ಲೇಷಕರು ಹೇಳಿದ್ದಾರೆ. ಅಲ್ಲಿಯವರೆಗೆ, ಅವರ ಮೌನವು ರಾಜಕೀಯ ವಲಯಗಳನ್ನು ಊಹಿಸುವಂತೆ ಮಾಡುವ ಸಾಧ್ಯತೆಯಿದೆ.

# ಬಾಂಬೇ ಜೂಡೋ ಅಸೋಸಿಯೇಶನ್‌ಗೆ ಮೂವರು ಕನ್ನಡಿಗರ ಆಯ್ಕೆ





**ಮುಂಬಯಿ, ಜೂ.11:** ಬಾಂಬೇ ಜೂಡೋ ಅಸೋಸಿಯೇಶನ್ ಇದರ 2026–2030ನೇ ಸಾಲಿನ ಕಾರ್ಯಕಾರಿ ಸಮಿತಿ ಸದಸ್ಯರ ಚುನಾವಣೆ ಮತ್ತು ನೂತನ ಪದಾಧಿಕಾರಿಗಳ ಆಯ್ಕೆಯು ಇತ್ತೀಚೆಗೆ ಮುಂಬಯಿಯಲ್ಲಿನ ಅಂಧೇರಿ ಪಶ್ಚಿಮದ ಅಂಧೇರಿ ರಿಕ್ರಿಯೇಶನ್ ಕ್ಲಬ್‌ನಲ್ಲಿ ನಡೆಸಲ್ಪಟ್ಟಿತು.

ಬಾಂಬೇ ಜೂಡೋ ಅಸೋಸಿಯೇಶನ್‌ನ ಚುನಾವಣಾಧಿಕಾರಿ ಅಡ್ವೋಕೇಟ್ ಗೋಪಾಲ್ ಹೆಗ್ಡೆ ಅವರು ಕಳೆದ ಜೂನ್. 07 ರಂದು ನಡೆಸಲ್ಪಟ್ಟ ಚುನಾವಣಾ ಪ್ರಕ್ರಿಯೆಗಳನ್ನು ನಡೆಸಿ ಫಲಿತಾಂಶವನ್ನು ಪ್ರಕಟಿಸಿದರು.

ಬಳಿಕ 2026–2030ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ನಡೆಸಲಾಯಿತು. ಕಾವಸ್ ಕೆ. ಬಿಲ್ಲಿಮೋರಿಯಾ (ಅಧ್ಯಕ್ಷರು), ಸೂರ್ಯ ನಾರಾಯಣ ಶರ್ಮಾ, ಮುಷ್ತಕ್ ಅಹ್ಮದ್, ಕೌಶಿಕ್ ಜೆ.ಉಮ್ರಾನಿಯಾ (3–ಉಪಾಧ್ಯಕ್ಷರು), ಪ್ರಮೋದ್ ಆನಂದ್ ಮೆಂಡನ್ (ಪ್ರಧಾನ ಕಾರ್ಯದರ್ಶಿ), ಸುನಿಲ್ ಭೌದ್ (ಜಂಟಿ ಕಾರ್ಯದರ್ಶಿ), ಧನೀಶ್ ಯತೀಶ್ ಬಂಗೇರ (ಖಜಾಂಚಿ), ರಾಜ್‌ಕುಮಾರ್ ಗುಪ್ತಾ (ಜಂಟಿ ಖಜಾಂಚಿ) ಸುರೇಶ್‌ಕುಮಾರ್ ನಾರಾಯಣ ಸಮೆಲ್ (ತಾಂತ್ರಿಕ ಸಲಹೆಗಾರ) ಹಾಗೂ ಪರಾಯೇಶ್ ಭೆಡ್ಡ, ಶಶಿಕಾಂತ್ ಶೆಟ್ಟಿ, ರಾಜೇಶ್ರಿ ಸಂಜಯ್ ಕೋಲಿ ಪ್ರಸಾದ್ ಶಿಂಧೆ (4–ಸಮಿತಿ ಸದಸ್ಯರು) ಇವರು ಆಯ್ಕೆಗೊಂಡರು.

**ಪ್ರಮೋದ್ ಆನಂದ್ ಮೆಂಡನ್:** ತುಳುಕನ್ನಡಿಗರಲ್ಲಿನ ಉಡುಪಿ ಜಿಲ್ಲೆಯ ಪಡುಬಿದ್ರಿ ಮೂಲತಃ ಪ್ರಮೋದ್ ಮೆಂಡನ್ ಪ್ರಧಾನ ಕಾರ್ಯದರ್ಶಿ ಆಗಿ ಚುನಾಯಿತರಾಗಿರುವರು. ಕಸ್ಟಮ್ಸ್ ಇಲಾಖೆಯ ನಿವೃತ್ತ ಸಹಾಯಕ ಆಯುಕ್ತರು ಆಗಿರುವ ಇವರು 1982ರಿಂದ ಸೆನ್‌ಸೈ ಎನ್.ಟಿ ಬಂಗೇರ ಅವರ ಮಾರ್ಗದರ್ಶನದಲ್ಲಿ ಜೂಡೋ ಅಭ್ಯಾಸದಲ್ಲಿದ್ದಾರೆ. ಪ್ರಸ್ತುತ ಜೆಎಫ್‌ಐ ಮಾನ್ಯತೆ ಪಡೆದ 6ನೇ ಡಾನ್ ಬ್ಲಾಕ್ ಬೆಲ್ಟ್ ಹೊಂದಿದ್ದಾರೆ. ಮರೈನ್ ಜೂಡೋ ಕ್ಲಬ್‌ನ ಮುಖ್ಯ ಕೋಚ್ ಆಗಿದ್ದು, ಭಾರತದ ಮುಂಚೂಣಿ ಜೂಡೋ ಸಂಸ್ಥೆಗಳಲ್ಲಿ ಒಂದಾದ ಬಾಂಬೇ ಜೂಡೋ ಕ್ಲಬ್‌ನ ನಿರ್ದೇಶಕರಾಗಿದ್ದಾರೆ.

**ಧನೀಶ್ ಯತೀಶ್ ಬಂಗೇರ:** ಭಾರತದ ಬೀಚ್ ಗೇಮ್ಸ್ ಫೆಡರೇಶನ್ (ಬಿಜಿಎಫ್‌ಐ) ಸಂಸ್ಥೆಯು ಹಿರಿಯ ಜುಡೋ ಆಡಳಿತಗಾರ ಹಾಗೂ ಬೋಂಬೆ ಜುಡೋ ಕ್ಲಬ್ ನಿರ್ದೇಶಕ ಹಾಗೂ ಯುವ ಮತ್ತು ಶಾಲಾ ಬೀಚ್ ಗೇಮ್ಸ್ ಅಭಿವೃದ್ಧಿ ವಿಭಾಗದ ಅಧ್ಯಕ್ಷ ಕಾಪು ಹೆಜಮಾಡಿಕೋಡಿ ತೋಫ ಹೌಸ್ ನಿವಾಸಿ ಯತೀಶ್ ನಾರಾಯಣ್ ಬಂಗೇರ ಅವರ ಸುಪುತ್ರ 2ನೇ ಡಿಗ್ರಿ ಬ್ಲ್ಯಾಕ್ ಬೆಲ್ಟ್ ಹೊಂದಿರುವ ಧನೀಶ್ ಬಂಗೇರ ಅವರು ಖಜಾಂಚಿ ಆಗಿ ಆಯ್ಕೆಯಾಗಿರುವರು.

**ಶಶಿಕಾಂತ್ ಶೆಟ್ಟಿ:** ಕಟೀಲು ಶಶಿಕಾಂತ್ ಶೆಟ್ಟಿ ಅವರು ಮೂಲತಃ 3ನೇ ಡಿಗ್ರಿ ಬ್ಲ್ಯಾಕ್ ಬೆಲ್ಟ್ ಹೊಂದಿದ್ದು, ಶಶಿ ಜೂಡೋ ಕ್ಲಬ್‌ನ ಕೋಚ್ ಆಗಿದ್ದಾರೆ. ಈ ಮೂಲಕ ಕರ್ನಾಟಕ ಕರಾವಳಿಯ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯ ಮೂವರು ಬೋಂಬೆ ಜೂಡೋ ಅಸೋಸಿಯೇಶನ್‌ನಲ್ಲಿ ನೂತನ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸುವಂತಾಗಿದೆ.

# ಸಮಾಜಸೇವಕ ಶೇಖರ ಜೆ.ಸಾಲಿಯಾನ್‌ಗೆ ಸಮಾಜ ಸೇವಾರತ್ನ ಪ್ರಶಸ್ತಿ ಪ್ರದಾನ



**ಮುಂಬಯಿ, ಜೂ.11:** ಸಾಂತಕ್ರೂಜ್ ಪೂರ್ವದಲ್ಲಿನ ಪ್ರಭಾತ್ ಕಾಲೋನಿ ಇಲ್ಲಿನ ಕಳೆದ ರವಿವಾರ ಕಲೀನಾ ಇಲ್ಲಿನ ವಿದ್ಯಾನಗರಿಯ ಮುಂಬಯಿ ಯುನಿವರ್ಸಿಟಿ ಕ್ರೀಡಾಂಗಣದಲ್ಲಿ ಪ್ರಭಾತ್ ಕಾಲೊನಿ ಪ್ರೀಮಿಯರ್ ಲೀಗ್–2026 ಕ್ರಿಕೆಟ್ ಟೂರ್ನಮೆಂಟ್ ಹಮ್ಮಿಕೊಂಡಿತ್ತು. ಈ ಸಂದರ್ಭದಲ್ಲಿ ಪ್ರಭಾತ್ ಕಾಲೊನಿಯಲ್ಲಿನ ಕಾಂಗ್ರೆಸ್‌ನ ಹಿರಿಯ ನೇತಾರ, ಸಮಾಜಸೇವಕರೂ ಆಗಿರುವ ಶೇಖರ ಜೆ.ಸಾಲಿಯಾನ್ ಇವರಿಗೆ ಸಮಾಜ ಸೇವಾ ರತ್ನ ಬಿರುದ ಪ್ರದಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಸ್ಥಾನೀಯ ಕಾರ್ಪೊರೇಟರ್ ಪೂಜಾ ವಿಶ್ವನಾಥ ಮಹಾಡೇಶ್ವರ ಉಪಸ್ಥಿತರಿದ್ದು ಶೇಖರ್ ಸಾಲಿಯಾನ್ ಅವರಿಗೆ ಶಾಲು ಹೊದಿಸಿ ಪುಷ್ಪಗುಚ್ಛ, ಬಿರುದಾವಲಿ ಪ್ರದಾನಿಸಿ ಗೌರವಿಸಿ ಅಭಿನಂದಿಸಿದರು.

ಶೇಖರ ಸಾಲಿಯಾನ್ ಅವರ ವಿಶೇಷ ಪ್ರಯತ್ನದಿಂದ ಸಂತಾಕ್ರೂಜ್ ಪೂರ್ವದಲ್ಲಿ ರೈಲ್ವೇ ರಿಸರ್ವೇಶನ್ ಆಫೀಸ್ ಮತ್ತು ಎಲ್ಲಾ ರೈಲ್ವೇ ಪ್ರವಾಸಿಗರಿಗೆ ಸೌಕರ್ಯ ಒದಗುವಂತೆ ಎರಡು ಲಿಫ್ಟ್‌ಗಳನ್ನು ತೆರೆಯಲಾಗಿದೆ.

2010ರಲ್ಲಿ ವಿ.ಎನ್ ದೇಸಾಯಿ ಆಸ್ಪತ್ರೆಗೆ 20 ಪೇಶೆಂಟ್ ಬೆಡ್‌ಸೆಟ್ ಹಾಗೂ 2011ರಲ್ಲಿ ಮಹಿಳಾ ಪ್ರಸೂತಿಗೃಹ?ಕ್ಕೆ ಸಮವಸ್ತ್ರಗಳನ್ನು ನೀಡಿ ಸೇವೆ ಸಲ್ಲಿಸಿದ್ದು, ಪ್ರಭಾತ್ ಕಾಲೋನಿ ಪರಿಸರದ ಎಲ್ಲರಿಗೂ ಮಹಾನಗರ ಗ್ಯಾಸ್ ಪೈಪ್‌ಲೈನ್ ಸಂಪರ್ಕ ಸೌಕರ್ಯವನ್ನು ಒದಗಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದನ್ನು ಸಂಘಟಕರು ನೆನಪಿಸಿಕೊಂಡರು.

ಅದರಂತೆ ಅನೇಕ ವರ್ಷಗಳಿಂದ ಇವರು ಆರೋಗ್ಯ ಶಿಬಿರಗಳನ್ನು ಆಯೋಜಿಸುತ್ತಾ ಬರುತ್ತಿದ್ದಾರೆ. ನೇತ್ರ ಚಿಕಿತ್ಸಾ ಶಿಬಿರ ನಡೆದ ಎಲ್ಲಾ ಸಂದರ್ಭದಲ್ಲಿ ಉಚಿತ ಕನ್ನಡಕಗಳನ್ನು ಅನೇಕರಿಗೆ ವಿತರಿಸಿದ್ದರು.

2021ರಲ್ಲಿ ಅನೇಕ ಮಹಾಜನರಿಗೆ ಕೋವಿಡ್ ಲಸಿಕೆಗಳನ್ನೂ ನೀಡಲಾಗಿತ್ತು. ಇಂತಹ ಹತ್ತು ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ಶ್ರೀ ಪೇಜಾವರ ಮಠದಲ್ಲಿ ಆಯೋಜಿಸಿದ್ದರು. ಅಂತೆಯೇ ಪರ್ಯಾವರಣ ವಿಭಾಗಕ್ಕೆ ಸಹಕಾರಿಯಾಗುವಂತೆ ನೆಹರೂ ರಸ್ತೆ, ಬಿಲ್ಲವ ಭವನದಿಂದ ಸಂಪೂರ್ಣ ಪ್ರಭಾತ್ ಕಾಲನಿ ಪರಿಸರದಲ್ಲಿ 400ಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು ವೃಕ್ಷಾರೋಪಣ ಕಾರ್ಯಕ್ರಮ ಹಾಗೂ ಸದಾ ಅಹರ್ನಿಶಿ ಶ್ರಮಿಸಿ ವಿಧದ ಅನುಕೂಲ ಕಲ್ಪಿಸಿಕೊಡಲು ಅನೇಕ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದನ್ನು ಸ್ಮರಿಸಿಕೊಳ್ಳಲಾಯಿತು.

ಪ್ರಭಾತ್ ಕಾಲೋನಿ ಸಂಸ್ಥೆಯು ಸಂಘಟಕರಾದ ಸಂದೀಪ್ ಗೌಡ, ದೇವದಾಸ್ ಶಾಂತಿ ಮತ್ತು ರಾಜು ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು. ಸಂದೀಪ್ ಗೌಡ ಸ್ವಾಗತಿಸಿ ಶೇಖರ ಸಾಲಿಯಾನ್ ಮತ್ತು ಅತಿಥಿಗಳನ್ನು ಪರಿಚಯಿಸಿದರು. ದೇವದಾಸ್ ಶಾಂತಿ ಕಾರ್ಯ ನಿರೂಪಿಸಿ ವಂದಿಸಿದರು.

## ಜು.2: ಶ್ರೀವಿಷ್ಣುಮೂರ್ತಿ ದೇವಸ್ಥಾನ ಮೂಡುಶೆಡ್ಡೆ ದೇವಸ್ಥಾನದ ಶಿಲಾನ್ಯಾಸ ಕಾರ್ಯಕ್ರಮ

# ಸಂಸದ ಡಾ.ಶ್ರೀಕಾಂತ್ ಏಕನಾಥ ಶಿಂಧೆ ಅವರಿಗೆ ಆಹ್ವಾನ



**ಮುಂಬಯಿ, ಜೂ.11:** ಮಂಗಳೂರು ಅಲ್ಲಿನ ಮೂಡುಶೆಡ್ಡೆಯ ಶೆಡ್ಡೆ ಶ್ರೀ ವಿಷ್ಣುಮೂರ್ತಿ ದೇವಸ್ಥಾನದ ನೂತನ ದೇವಸ್ಥಾನ ನಿರ್ಮಾಣದ ಶಿಲಾನ್ಯಾಸ ಕಾರ್ಯಕ್ರಮವು ಇದೇ ಬರುವ ಜು. 2ರ ಗುರುವಾರ ಭಕ್ತಿಭಾವದಿಂದ ನೆರವೇರಲಿದ್ದು, ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರದ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಆ ಪ್ರಯುಕ್ತ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿರುವ ಮಹಾರಾಷ್ಟ್ರ ರಾಜ್ಯದ ಕಲ್ಯಾಣ್ ಲೋಕಸಭಾ ಸಂಸದ ಡಾ। ಶ್ರೀಕಾಂತ್ ಏಕನಾಥ ಶಿಂಧೆ ಇವರಿಗೆ ಆಮಂತ್ರಣಪತ್ರವನ್ನಿತ್ತು ಆಹ್ವಾನಿಸಲಾಯಿತು.

ಮೂಡುಶೆಡ್ಡೆ ಅಲ್ಲಿನ ಹೊಸಲಕ್ಕೆ ದುರ್ಗಾ ಪರಮೇಶ್ವರಿ ಕೃಪಾ ನಿವಾಸಿ, ಶೆಡ್ಡೆ ವಿಷ್ಣುಮೂರ್ತಿ ದೇವಸ್ಥಾನ ಮೂಡುಶೆಡ್ಡೆ ಇದರ ಮುಂಬಯಿ ಸಮಿತಿ ಅಧ್ಯಕ್ಷ ಮೂಡುಶೆಡ್ಡೆ ವಿಶ್ವನಾಥ ಎಸ್.ಶೆಟ್ಟಿ ಮುಂದಾಳುತ್ವದಲ್ಲಿ ಇಂದಿಲ್ಲಿ ಗುರುವಾರ ಮಧ್ಯಾಹ್ನ ಮಲಬಾರ್ ಹಿಲ್ ಅಲ್ಲಿನ ಮೌಂಟ್ ಪ್ಲೆಸೆಂಟ್ ರೋಡ್‌ನಲ್ಲಿನ ಮಹಾರಾಷ್ಟ್ರ ಸರ್ಕಾರದ ಉಪಮುಖ್ಯಮಂತ್ರಿ ಅವರ ಸರ್ಕಾರಿ ನಿವಾಸ ನಂದನವನ ಇಲ್ಲಿ ಡಾ। ಶ್ರೀಕಾಂತ್ ಶಿಂಧೆ ಅವರನ್ನು ಭೇಟಿಗೈದು ವೈಯಕ್ತಿಕವಾಗಿ ಆಮಂತ್ರಣ ನೀಡಲಾಯಿತು. ಈ ಸಂದರ್ಭದಲ್ಲಿ ಅನುಪಮ ಶೆಟ್ಟಿ, ದಿವಾಕರ್ ರೈ, ಶರ್ಮಿಳಾ ಡಿ.ರೈ, ಸುಭಾಷ್ ಶೆಟ್ಟಿ ಇನ್ನಂಜೆ ಉಪಸ್ಥಿತರಿದ್ದರು.

ಥಾಣೆ ಭಿವಂಡಿಯಲ್ಲಿನ ಹೆಸರಾಂತ ಹೊಟೇಲು ಉದ್ಯಮಿ, ಬಂಟರ ಸಂಘ ಮುಂಬಯಿ ಇದರ ಭಿವಂಡಿ ಪ್ರಾದೇಶಿಕ ಸಮಿತಿಯ ಮಾಜಿ ಕಾರ್ಯಧ್ಯಕ್ಷ, ಥಾಣೆ ಕಲ್ಯಾಣ್ ಇಲ್ಲಿನ ಶಹಾಡ್ ಪೂರ್ವದ ಶ್ರೀ ನಿತ್ಯಾನಂದ ಮಿತ್ರ ಭಜನಾ ಮಂಡಳಿ ಸಂಚಾಲಕತ್ವದ ಶ್ರೀ ಮೂಕಾಂಬಿಕ ದೇವಿ ದೇವಸ್ಥಾನದ ಜೀರ್ಣೋದ್ಧಾರ ಸಮಿತಿಯ ಕಾರ್ಯಾಧ್ಯಕ್ಷ (ಟ್ರಸ್ಟಿ) ಮೂಡುಶೆಡ್ಡೆ ವಿಶ್ವನಾಥ ಶೆಟ್ಟಿ ಅವರು ನೂತನ ದೇವಸ್ಥಾನದ ಶಿಲಾನ್ಯಾಸ ಕಾರ್ಯಕ್ರಮಕ್ಕೆ ಬೃಹನ್ಮುಂಬಯಿಯಲ್ಲಿನ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಂತೆ ದೇವಸ್ಥಾನದ ಆಡಳಿತ ಮಂಡಳಿ ಪರವಾಗಿ ಈ ಮೂಲಕ ಮನವಿ ಮಾಡಿದ್ದಾರೆ.

ಸ್ಪಾ, ಮಸಾಜ್ ಕೇಂದ್ರಗಳು, ಬ್ಯೂಟಿ ಪಾರ್ಲರ್ ನಿಯಂತ್ರಣಕ್ಕೆ ಕಾನೂನು ತಿದ್ದುಪಡಿ

# ಸರ್ಕಾರಕ್ಕೆ ಕಾನೂನು ಆಯೋಗ ಶಿಫಾರಸು, ಅಕ್ರಮ ಲೈಂಗಿಕ ಚಟುವಟಿಕೆಗೆ ಕಡಿವಾಣ ಹಾಕಲು ಕ್ರಮ

**ಬೆಂಗಳೂರು, ಜೂ.11:** ರಾಜ್ಯದಲ್ಲಿನ ಸ್ಪಾ, ಯುನಿಸೆಕ್ಸ್ ಸಲೂನ್‌ಗಳು, ಬ್ಯೂಟಿ ಪಾರ್ಲರ್‌ಗಳು, ಜಿಮ್ನಾಶಿಯಂಗಳು ಮತ್ತು ಮಸಾಜ್ ಕೇಂದ್ರಗಳ ನಿಯಂತ್ರಣ ಹಾಗೂ ಮೇಲ್ವಿಚಾರಣೆಯನ್ನು ಬಲಪಡಿಸುವ ಉದ್ದೇಶದಿಂದ ಕರ್ನಾಟಕ ಕಾನೂನು ಆಯೋಗ ರಾಜ್ಯ ಸರ್ಕಾರಕ್ಕೆ ಕಾನೂನು ತಿದ್ದುಪಡಿ ಮತ್ತು ಮಾದರಿ ಉಪನಿಯಮಗಳನ್ನು ರೂಪಿಸುವಂತೆ ಶಿಫಾರಸು ಮಾಡಿದೆ.

ಪರವಾನಗಿ ಪಡೆಯಲು ಹಲವು ಕಠಿಣ ಷರತ್ತುಗಳನ್ನು ವಿಧಿಸಲಾಗಿದೆ. ಸ್ಪಾ ಅಥವಾ ಮಸಾಜ್ ಕೇಂದ್ರದ ಆವರಣದಲ್ಲಿ ಯಾವುದೇ ರೀತಿಯ ಲೈಂಗಿಕ ಚಟುವಟಿಕೆ ಸಂಪೂರ್ಣ ನಿಷೇಧಿಸಬೇಕು. ಪುರುಷರು ಮತ್ತು ಮಹಿಳೆಯರ ಸ್ಪಾ, ಮಸಾಜ್ ವಿಭಾಗಗಳು ಪ್ರತ್ಯೇಕವಾಗಿರಬೇಕು ಎಂದು ಹೇಳಿದೆ.ಇಂತಹ ಕೇಂದ್ರಗಳಿಗೆ ಪ್ರತ್ಯೇಕ ಪ್ರವೇಶ ದ್ವಾರ ಇರಬೇಕು ಹಾಗೂ ಪರಸ್ಪರ ಸಂಪರ್ಕ ಇರಬಾರದು. ಸ್ಪಾ ಸೇವೆಗಳನ್ನು ಬೀಗ ಹಾಕಿದ ಕೊಠಡಿಗಳಲ್ಲಿ ನೀಡುವಂತಿಲ್ಲ. ಕೊಠಡಿಗಳ ಒಳಭಾಗದಲ್ಲಿ ಲ್ಯಾಚ್ ಅಥವಾ ಬೋಲ್ಟ್ ವ್ಯವಸ್ಥೆ ಇರಬಾರದು.

ಸ್ವಯಂ ಮುಚ್ಚುವ ಬಾಗಿಲುಗಳ ವ್ಯವಸ್ಥೆ ಕಡ್ಡಾಯವಾಗಿದೆ. ಮುಖ್ಯ ಹಾಗೂ ಹೊರಗಿನ ಬಾಗಿಲುಗಳು ಪಾರದರ್ಶಕವಾಗಿರಬೇಕು ಅಥವಾ ಕಾರ್ಯಾವಧಿಯಲ್ಲಿ ತೆರೆದಿರಬೇಕು. ಎಲ್ಲಾ ಗ್ರಾಹಕರ ಗುರುತಿನ ಚೀಟಿ ಪರಿಶೀಲನೆ ಕಡ್ಡಾಯ. ಗ್ರಾಹಕರ ದೂರವಾಣಿ ಸಂಖ್ಯೆ, ವಿಳಾಸ ಮತ್ತು ಗುರುತಿನ ದಾಖಲಾತಿ ಒಳಗೊಂಡ ನೋಂದಣಿ ಪುಸ್ತಕ ನಿರ್ವಹಿಸಬೇಕು. ಇವು ಬೆಳಿಗ್ಗೆ 9 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ಮಾತ್ರ ಕಾರ್ಯ ನಿರ್ವಹಿಸಲು ಅನುಮತಿ. ಪ್ರತಿಯೊಂದು ಕೊಠಡಿಯಲ್ಲೂ ಸಮರ್ಪಕ ಬೆಳಕಿನ ವ್ಯವಸ್ಥೆ ಇರಬೇಕು ಎಂದು ಷರತ್ತು ವಿಧಿಸುವಂತೆ ಸಲಹೆ ಮಾಡಿದೆ.

ಕರ್ನಾಟಕ ಕಾನೂನು ಆಯೋಗದ 67ನೇ ವರದಿಯ ಪ್ರಕಾರ, ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ, 2024ರ ಸೆಕ್ಷನ್ 303ರಲ್ಲಿ ವಿವಿಧ ವಾಣಿಜ್ಯ ಚಟುವಟಿಕೆಗಳಿಗೆ ಪರವಾನಗಿ ನೀಡುವ ಕುರಿತು ಉಲ್ಲೇಖವಿದ್ದರೂ, ಆಯುರ್ವೇದ ಆರೋಗ್ಯ ಕೇಂದ್ರಗಳು, ಸ್ಪಾಗಳು, ಯುನಿಸೆಕ್ಸ್ ಸಲೂನ್‌ಗಳು, ಬ್ಯೂಟಿ ಪಾರ್ಲರ್‌ಗಳು ಹಾಗೂ ಜಿಮ್ನಾಶಿಯಂಗಳಿಗೆ ಪರವಾನಗಿ ನೀಡುವ ಬಗ್ಗೆ ಸ್ಪಷ್ಟವಾದ ಕಾನೂನು ನಿಯಮಗಳಿಲ್ಲ. ಆದ್ದರಿಂದ, ಈ ಸಂಸ್ಥೆಗಳ ಸ್ಥಾಪನೆ ಮತ್ತು ನಿರ್ವಹಣೆಯನ್ನು ಸೆಕ್ಷನ್ 303(ಎಸ್) ಅಡಿಯಲ್ಲಿ ಸೇರಿಸುವ ಮೂಲಕ ಕಾನೂನು ತಿದ್ದುಪಡಿ ಮಾಡಬೇಕೆಂದು ಆಯೋಗ ಶಿಫಾರಸು ಮಾಡಿದೆ. ಪ್ರಸ್ತುತ ಕಾಯ್ದೆಯಲ್ಲಿ ಪರವಾನಗಿ ಷರತ್ತುಗಳನ್ನು ಉಲ್ಲಂಘಿಸಿದರೆ ಪರವಾನಗಿಯನ್ನು ರದ್ದುಪಡಿಸುವ ಬಗ್ಗೆ ಸ್ಪಷ್ಟ ನಿಯಮಗಳಿಲ್ಲದಿರುವುದನ್ನು ಕಾನೂನು ಆಯೋಗ ಗಮನಿಸಿದೆ. ಈ ಹಿನ್ನೆಲೆಯಲ್ಲಿ ಸೆಕ್ಷನ್ 306(2) ಮತ್ತು 306(3) ಅನ್ನು ಹೊಸದಾಗಿ ಸೇರಿಸುವಂತೆ ಶಿಫಾರಸು ಮಾಡಿದೆ.




## ಷರತ್ತು ಉಲ್ಲಂಘಿಸಿದರೆ ದಂಡ ಇಲ್ಲವೇ ಪರವಾನಗಿ ರದ್ದು

ಸೆಕ್ಷನ್ 306(2)ರಡಿ ಪರವಾನಗಿದಾರರು ಪರವಾನಗಿಯ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, ಆಯುಕ್ತರು ನೋಟಿಸ್ ನೀಡಿ ನಿಗದಿತ ಅವಧಿಯಲ್ಲಿ ನಿಯಮ ಪಾಲನೆಗೆ ಸೂಚಿಸಬಹುದು. ಜೊತೆಗೆ 10,000 ರೂ.ವರೆಗೆ ದಂಡ ವಿಧಿಸಬಹುದು. ನೋಟಿಸ್ ಬಳಿಕವೂ ನಿಯಮ ಪಾಲಿಸದಿದ್ದರೆ ಪರವಾನಗಿಯನ್ನು ರದ್ದುಪಡಿಸುವ ಅಧಿಕಾರ ಆಯುಕ್ತರಿಗೆ ಇರಲಿದೆ. ಸೆಕ್ಷನ್ 306(3)ರಡಿ ಪರವಾನಗಿ ರದ್ದಾದ ನಂತರ, ನೋಟಿಸ್‌ನಲ್ಲಿ ಉಲ್ಲೇಖಿಸಿರುವ ಎಲ್ಲಾ ಷರತ್ತುಗಳನ್ನು ಪಾಲಿಸಿದ ಬಳಿಕ ಮಾತ್ರ ಹೊಸ ಪರವಾನಗಿಗಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುತ್ತದೆ. ಪರವಾನಗಿಗಾಗಿ ಅರ್ಜಿ ಸಲ್ಲಿಸುವ ವ್ಯಕ್ತಿಯು ನೈತಿಕ ಅಧಃಪತನ ಸಂಬಂಧಿತ ಯಾವುದೇ ಅಪರಾಧದಲ್ಲಿ ಶಿಕ್ಷೆಗೆ ಒಳಗಾಗಿರಬಾರದು. ಅರ್ಜಿದಾರ ಅಥವಾ ಅವರ ಸಿಬ್ಬಂದಿಯ ವಿರುದ್ಧ ಪೋಸ್ಕೋ, ಅಕ್ರಮ ಬಂಧನ ಅಥವಾ ಯಾವುದೇ ಲೈಂಗಿಕ ಅಪರಾಧ ಪ್ರಕರಣದಲ್ಲಿ ಭಾಗಿಯಾಗಿರಬಾರದು. ಪ್ರಕರಣ ಬಾಕಿ ಇದ್ದರೆ, ಅವರ ಪರವಾನಗಿ ಅರ್ಜಿಯನ್ನು ನೇರವಾಗಿ ತಿರಸ್ಕರಿಸಬೇಕು ಎಂದು ಆಯೋಗ ಶಿಫಾರಸು ಮಾಡಿದೆ.

## ತಿದ್ದುಪಡಿಯಿಂದ ಸ್ಥಳೀಯ ಸಂಸ್ಥೆಗಳಿಗೆ ಹೆಚ್ಚುವರಿ ಆದಾಯ

ಅನಗತ್ಯ ಮತ್ತು ಹಳೆಯ ಕಾನೂನುಗಳನ್ನು ರದ್ದುಪಡಿಸುವುದು ಹಾಗೂ ಅಗತ್ಯ ತಿದ್ದುಪಡಿಗಳನ್ನು ಶಿಫಾರಸು ಮಾಡುವುದು ಕಾನೂನು ಆಯೋಗದ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಈ ತಿದ್ದುಪಡಿಗಳು ಸ್ಥಳೀಯ ಸಂಸ್ಥೆಗಳಿಗೆ ಹೆಚ್ಚುವರಿ ಆದಾಯ ತಂದುಕೊಡುವ ಜೊತೆಗೆ ಸ್ಪಾ, ಮಸಾಜ್ ಕೇಂದ್ರಗಳು ಮತ್ತು ಜಿಮ್ನಾಶಿಯಂಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಹಕಾರಿಯಾಗಲಿವೆ. ಇದುವರೆಗೆ ಈ ಕ್ಷೇತ್ರಗಳನ್ನು ನಿಯಂತ್ರಿಸಲು ಯಾವುದೇ ಸ್ಪಷ್ಟ ಕಾನೂನು ಇರಲಿಲ್ಲ ಎಂದು ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷ, ನಿವೃತ್ತ ನ್ಯಾಯಮೂರ್ತಿ ಅಶೋಕ್ ಬಿ. ಹಿಂಚಿಗೇರಿ ಹೇಳಿದ್ದಾರೆ.

ಮಂಗಳೂರು ಮೂಲದ ವಕೀಲ ಮನೋರಾಜ್ ರಾಜೀವ ಮಾತನಾಡಿ, ಆಯುರ್ವೇದ ಆರೋಗ್ಯ ಕೇಂದ್ರಗಳು, ಸ್ಪಾ, ಮಸಾಜ್ ಕೇಂದ್ರಗಳು, ಯುನಿಸೆಕ್ಸ್ ಸಲೂನ್‌ಗಳು ಮತ್ತು ಬ್ಯೂಟಿ ಪಾರ್ಲರ್‌ಗಳಿಗೆ ಪರವಾನಗಿ ವ್ಯವಸ್ಥೆ ರೂಪಿಸಲು ಹೊಸ ಕಾನೂನು ತರಬೇಕೆಂದು ಮನವಿ ಸಲ್ಲಿಸಿದ್ದನ್ನು ನ್ಯಾಯಮೂರ್ತಿ ಹಿಂಚಿಗೇರಿ ಉಲ್ಲೇಖಿಸಿದ್ದಾರೆ.



ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಟೆಂಡರ್‌ನಲ್ಲಿ ನಡೆದ 39,437 ಕೋಟಿ ಬೃಹತ್ ಹಗರಣದ ಬಗ್ಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಮತ್ತು ಇತರ ಬಿಜೆಪಿ ನಾಯಕರು ಗುರುವಾರ ಬೆಂಗಳೂರಿನಲ್ಲಿ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದರು..

# ಯೋಗೇಶ್ ಹತ್ಯೆ ಪ್ರಕರಣ: ಶಿಕ್ಷೆ ತಡೆ, ಜಾಮೀನು ಕೋರಿದ್ದ ವಿನಯ್ ಕುಲಕರ್ಣಿ ಅರ್ಜಿ ವಿಚಾರಣೆ ಜೂ.18ಕ್ಕೆ ನಿಗದಿ

**ಬೆಂಗಳೂರು, ಜೂ.11:** ಧಾರವಾಡದ ಜಿಲ್ಲಾ ಪಂಚಾಯತ್ ಸದಸ್ಯ ಹಾಗೂ ಬಿಜೆಪಿ ಮುಖಂಡ ಯೋಗೇಶ್ ಗೌಡ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿರುವ ಕಾನೂನು ಹೋರಾಟ ಮುಂದುವರಿದಿದೆ. ಪ್ರಕರಣದ ಪ್ರಮುಖ ಆರೋಪಿಯಾಗಿರುವ ಕಾಂಗ್ರೆಸ್ ನಾಯಕ, ಮಾಜಿ ಸಚಿವ ವಿನಯ್ ಕುಲಕರ್ಣಿ ಅವರು ಸಲ್ಲಿಸಿರುವ ಜಾಮೀನು ಮತ್ತು ಶಿಕ್ಷೆಗೆ ತಡೆ ಕೋರಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ವಿಭಾಗೀಯ ಪೀಠವು ಜೂನ್ 18ಕ್ಕೆ ನಿಗದಿಪಡಿಸಿದೆ.

ಬೆಂಗಳೂರಿನ ಉನ್ನತ ನ್ಯಾಯಾಲಯದಲ್ಲಿ ಈ ಅರ್ಜಿಯ ಪ್ರಸ್ತಾಪವಾದಾಗ, ವಿನಯ್ ಕುಲಕರ್ಣಿ ಅವರ ಪರ ವಕೀಲರು ನ್ಯಾಯಪೀಠಕ್ಕೆ ವಿಶೇಷ ಮನವಿ ಸಲ್ಲಿಸಿದರು. ಪ್ರಕರಣದ ಇತರ ಅಪರಾಧಿಗಳು ಸದ್ಯ ಜೈಲಿನಲ್ಲಿ ಇರುವುದರಿಂದ ಮತ್ತು ಕಾನೂನಾತ್ಮಕ ಪ್ರಕ್ರಿಯೆಗಳು ವಿಳಂಬವಾಗುತ್ತಿರುವುದರಿಂದ, ಈ ಅರ್ಜಿಯನ್ನು ಅತ್ಯಂತ ತುರ್ತಾಗಿ ಪರಿಗಣಿಸಿ ವಿಚಾರಣೆ ನಡೆಸಬೇಕು ಎಂದು ಅವರು ಕೋರಿದರು. ಅರ್ಜಿದಾರರ ಪರ ವಕೀಲರ ವಾದ ಹಾಗೂ ಪ್ರಕರಣದ ಗಂಭೀರತೆಯನ್ನು ಆಲಿಸಿದ ಹೈಕೋರ್ಟ್‌ನ ವಿಭಾಗೀಯ ಪೀಠವು, ತಕ್ಷಣವೇ ಯಾವುದೇ ಆದೇಶ ನೀಡದೆ ವಿಚಾರಣೆಗೆ ದಿನಾಂಕವನ್ನು ನಿಗದಿಪಡಿಸಿತು.ಮುಂದಿನ ವಾರ, ಅಂದರೆ ಜೂ.18ರಂದು ಪ್ರಕರಣದ ಸಂಪೂರ್ಣ ವಿವರಗಳನ್ನು ಪರಿಶೀಲಿಸಲು ದಿನಾಂಕ ನಿಗದಿಪಡಿಸಿ ವಿಚಾರಣೆಯನ್ನು ಮುಂದೂಡಿತು.

2016ರ ಜೂನ್ ತಿಂಗಳಿನಲ್ಲಿ ಧಾರವಾಡದ ಸಪ್ತಾಪುರದಲ್ಲಿರುವ ತಮ್ಮದೇ ಜಿಮ್‌ನಲ್ಲಿ ಬಿಜೆಪಿ ಮುಖಂಡ ಯೋಗೇಶ್ ಗೌಡ ಅವರನ್ನು ಭೀಕರವಾಗಿ ಹತ್ಯೆ ಮಾಡಲಾಗಿತ್ತು. ಆರಂಭದಲ್ಲಿ ಸ್ಥಳೀಯ ಪೊಲೀಸರು ತನಿಖೆ ನಡೆಸಿದ್ದ ಈ ಪ್ರಕರಣ, ತದನಂತರ ರಾಜಕೀಯ ತಿರುವು ಪಡೆದುಕೊಂಡು ಕೇಂದ್ರೀಯ ತನಿಖಾ ದಳದ ಕೈಸೇರಿತ್ತು. ಸಿಬಿಐ ತನಿಖೆಯ ವೇಳೆ ಮಾಜಿ ಸಚಿವ ವಿನಯ್ ಕುಲಕರ್ಣಿ ಅವರ ಪಾತ್ರವಿರುವುದು ಬೆಳಕಿಗೆ ಬಂದು, ಅವರನ್ನು ಬಂಧಿಸಲಾಗಿತ್ತು. ಕೆಲವು ತಿಂಗಳುಗಳ ಕಾಲ ಜೈಲು ವಾಸ ಅನುಭವಿಸಿದ್ದ ವಿನಯ್ ಕುಲಕರ್ಣಿ ಅವರಿಗೆ ಸುಪ್ರೀಂ ಕೋರ್ಟ್ ಈ ಹಿಂದೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಆದರೆ, ಪ್ರಸ್ತುತ ಪ್ರಕರಣದ ಅಪರಾಧಿಗಳು ಜೈಲಿನಲ್ಲಿರುವ ಹಿನ್ನೆಲೆಯಲ್ಲಿ ಹಾಗೂ ಶಿಕ್ಷೆಗೆ ತಡೆ ಕೋರಿ ಅವರು ಸಲ್ಲಿಸಿರುವ ಈ ಹೊಸ ಅರ್ಜಿ ಅತ್ಯಂತ ಮಹತ್ವದ್ದಾಗಿದೆ. ಜೂನ್ 18ರಂದು ನಡೆಯಲಿರುವ ಹೈಕೋರ್ಟ್ ವಿಚಾರಣೆಯು ವಿನಯ್ ಕುಲಕರ್ಣಿ ಅವರ ಮುಂದಿನ ರಾಜಕೀಯ ಮತ್ತು ಕಾನೂನಾತ್ಮಕ ಭವಿಷ್ಯವನ್ನು ನಿರ್ಧರಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ.



# ಎಚ್.ಸಿ. ಮಹದೇವಪ್ಪಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ

**ಬೆಂಗಳೂರು, ಜೂ.11:** ದಲಿತ ಸಮುದಾಯದ ಹಿರಿಯ ಶಾಸಕರಾದ ಡಾ.ಎಚ್.ಸಿ.ಮಹದೇವಪ್ಪರಿಗೆ ಸಚಿವ ಸ್ಥಾನ ನೀಡಲು ಆಗ್ರಹಿಸಿ ಫ್ರೀಡಂ ಪಾರ್ಕ್‌ನಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘಟನೆಗಳ ಒಕ್ಕೂಟದಿಂದ ಬೃಹತ್ ಧರಣಿ ಸತ್ಯಾಗ್ರಹ ನಡೆಸಲಾಯಿತು.




ಕಾಂಗ್ರೆಸ್ ಪಕ್ಷವು, ದಲಿತ ಸಮುದಾಯದ ಮುಖಂಡರಾದ ಬಿ.ಬಸವಲಿಂಗಪ್ಪ, ಕೆ.ಎಚ್.ರಂಗನಾಥ್, ಬಿ.ರಾಚಯ್ಯ, ಎನ್. ರಾಚಯ್ಯ, ಶ್ರೀನಿವಾಸ್ ಪ್ರಸಾದ್ ಸೇರಿದಂತೆ ಹಲವು ನಾಯಕರನ್ನು ಕಡೆಗಣಿಸಿತ್ತು.ಇದೀಗ ಅದೇ ರೀತಿಯಲ್ಲಿ ಮಲ್ಲಿ ಕಾರ್ಜುನ ಖರ್ಗೆ, ಡಾ.ಜಿ.ಪರಮೇಶ್ವರ್, ಡಾ.ಮಹದೇವಪ್ಪ, ಕೆ.ಎಚ್.ಮುನಿ ಯಪ್ಪ ಸೇರಿದಂತೆ ಸಮುದಾಯದ ಹಿರಿಯರನ್ನು ಮುಖ್ಯಮಂತ್ರಿ ಸ್ಥಾನಕ್ಕೆ ಪರಿಗಣಿಸದೆ ಅನ್ಯಾಯ ಮಾಡಿದೆ ಎಂದು ಮುಖಂಡರು ದೂರಿದರು.

ಡಾ.ಮಹದೇವಪ್ಪ ಅವರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳದಿರುವುದು ನಾಡಿನ ದಲಿತ ಸಮುದಾಯಕ್ಕೆ ಮಾಡಿದ ಅನ್ಯಾಯ. ಕೂಡಲೇ ಅವರಿಗೆ ಸಚಿವ ಸ್ಥಾನವನ್ನು ನೀಡದಿದ್ದರೆ ಮುಂಬರಲಿರುವ ಜಿಬಿಎ, ಜಿಲ್ಲಾ, ತಾಲೂಕು ಪಂಚಾಯತ್ ಸೇರಿದಂತೆ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ಮಾದಕವಸ್ತು ಹಾವಳಿ ತಡೆಗೆ ನೀಲನಕ್ಷೆ ರೂಪಿಸಿ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ

**ವ್ಯಸನಮುಕ್ತ ಕರ್ನಾಟಕ ಮಾತಿನಲ್ಲಿ ಸಾಧ್ಯವಿಲ್ಲ, ಎಲ್ಲರ ಸಹಕಾರ ಅಗತ್ಯ: ಗೃಹ ಸಚಿವ ಪ್ರಿಯಾಂಕ್ ಖರ್ಗೆ**



**ಬೆಂಗಳೂರು, ಜೂ.11:** ಮಾದಕವಸ್ತು ಹಾವಳಿಯನ್ನು ಬೇರು ಸಮೇತ ಕಿತ್ತುಹಾಕಲು 8–10 ದಿನಗಳಲ್ಲಿ ನೀಲನಕ್ಷೆ ರೂಪಿಸಿ, ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ, ಮಾದಕ ವ್ಯಸನಮುಕ್ತ ಕರ್ನಾಟಕ ಮಾಡುತ್ತೇವೆ ಎಂದು ಬಾಯಿ ಮಾತಿನಲ್ಲಿ ಮಾಧ್ಯಮಗಳ ಮುಂದೆ ಹೇಳಿದರೆ ಸಾಧ್ಯವಾಗುವುದಿಲ್ಲ, ಇದು ಸೂಕ್ಷ್ಮ ವಿಚಾರ. ನೀಲಿನಕ್ಷೆಯೊಂದಿಗೆ ಕೆಲಸ ಮಾಡಬೇಕಿದೆ. ಮಾದಕ ವಸ್ತುಗಳು ಎಲ್ಲಿಂದ, ಹೇಗೆ ಬರುತ್ತಿವೆ, ಅವುಗಳ ಹಿಂದಿರುವ ಹಣಕಾಸಿನ ವ್ಯವಹಾರಗಳು, ಡ್ರಗ್ ಪೆಡ್ಲರ್‌ಗಳು, ಅಂತಾರಾಷ್ಟ್ರೀಯ ವಿದ್ಯಮಾನಗಳು, ರಾಷ್ಟ್ರ–ಅಂತಾರಾಷ್ಟ್ರದ ಜೊತೆಗೆ ರಾಜ್ಯದಲ್ಲಿ ಎಲ್ಲೆಲ್ಲಿ ಮಾದಕವಸ್ತು ಹಾವಳಿ ಇದೆ ಎಂಬುದನ್ನು ಪರಿಶೀಲಿಸಬೇಕಿದೆ ಎಂದರು.

ಬೆಂಗಳೂರಿಗೆ ಸೀಮಿತವಾಗಿ ಡ್ರಗ್ಸ್ ವ್ಯವಹಾರ ನಡೆಯುವುದಿಲ್ಲ. ಹುಬ್ಬಳ್ಳಿ, ಬೆಳಗಾವಿ, ಕಲಬುರಗಿ ಜಿಲ್ಲೆಗಳಲ್ಲೂ ನೆಟ್‌ವರ್ಕ್‌ಗಳಿವೆ. ಅಂತಾರಾಷ್ಟ್ರೀಯ ಮೂಲದಿಂದ ಸರಬರಾಜು ಆಗುತ್ತಿದೆ. ಇದನ್ನೆಲ್ಲಾ ತಿಳಿದುಕೊಂಡು ಬೇರು ಸಹಿತ ಕಿತ್ತುಹಾಕಲು ಒಗ್ಗಟ್ಟಿನಿಂದ ಕೆಲಸ ಮಾಡಬೇಕಿದೆ. ಗೃಹ ಇಲಾಖೆಯೊಂದರಿಂದಲೇ ಇದು ಸಾಧ್ಯವಾಗುವುದಿಲ್ಲ, ಸಾರ್ವಜನಿಕರು, ಸಂಘ ಸಂಸ್ಥೆಗಳು ಮಾಹಿತಿ ನೀಡಬೇಕು. ಎನ್‌ಜಿಓಗಳು ಕೈಜೋಡಿಸಬೇಕು ಇದು ನಿರಂತರವಾದ ಪ್ರಕ್ರಿಯೆ ಎಂದರು.

**ಮುಂದ್ರಾ ಪೋರ್ಟ್‌ನಿಂದಲೇ ಹೆಚ್ಚು ಸಾಗಣೆ:** ಡ್ರಗ್ಸ್ ಮುಂದ್ರಾ ಪೋರ್ಟ್‌ನಿಂದ ಹೆಚ್ಚಾಗಿ ಕಳ್ಳ ಮಾರ್ಗದ ಮೂಲಕ ಸಾಗಣೆ ಆಗುತ್ತಿರುವುದು ಗೊತ್ತಿದೆ. ಆ ಬಂದರು ಯಾರಿಗೆ ಸೇರಿದ್ದು. ಕೇಂದ್ರ ಗೃಹಸಚಿವರಿಗೆ ಇದೆಲ್ಲಾ ಗೊತ್ತಿಲ್ಲವೇ. ಮಾದಕ ವಸ್ತುಗಳ ಕಳ್ಳ ಸಾಗಾಣಿಕೆ ವಿರುದ್ಧ ಜಂಟಿಯಾಗಿ ಕಾರ್ಯಾಚರಣೆ ಕೈಗೊಂಡರೆ ಯಶಸ್ಸು ಸಾಧಿಸಲು ಸಾಧ್ಯ. ಈ ವಿಷಯವಾಗಿ ಎಲ್ಲರೂ ಕೈಜೋಡಿಸ ಬೇಕು ಎಂದು ಹೇಳಿದರು.

**ಕಸ ಟೆಂಡರ್ ಅವ್ಯವಹಾರ:**

**ಅಶೋಕ್ ಸ್ಪಷ್ಟ ಮಾಹಿತಿ ನೀಡಬೇಕು**

ವಿರೋಧ ಪಕ್ಷದ ನಾಯಕರು ಕಸ ವಿಲೇವಾರಿ ಟೆಂಡರ್‌ನಲ್ಲಿ 10 ಸಾವಿರ ಕೋಟಿ ರೂ. ಅವ್ಯವಹಾರವಾಗಿದೆ ಎಂದು ಆರೋಪಿಸಿದ್ದಾರೆ. ಜನರಿಗೆ ಈ ಬಗ್ಗೆ ಸ್ಪಷ್ಟ ಮಾಹಿತಿ ನೀಡಬೇಕು. ಮುಖ್ಯಮಂತ್ರಿಯವರು ಯಾವುದೇ ರೀತಿಯ ತನಿಖೆಗಾದರೂ ಸಿದ್ಧ ಎಂದು ಹೇಳಿದ್ದಾರೆ. ಅಶೋಕ್ ಅವರು ಸೂಕ್ತ ದಾಖಲೆ ಇದ್ದರೆ, ಮಾಧ್ಯಮಗಳ ಮೂಲಕ ಸ್ಪಷ್ಟವಾಗಿ ಹೇಳಬಹುದಿತ್ತು. ಕಸದ ಮಾಫಿಯಾವನ್ನು ಉಳಿಸಿ, ಬೆಳೆಸಿದ್ದು, ಬಿಜೆಪಿಯವರು. ಇನ್ನೂ ಟೆಂಡರ್ ಆಗಿಲ್ಲ, ಆಗಲೇ ಆರೋಪ ಮಾಡುತ್ತಿದ್ದಾರೆ. ಅಶೋಕ್ ಅವರು ಬೆಂಗಳೂರು ಉಸ್ತುವಾರಿಯಾಗಿದ್ದಾಗ ಏನು ಮಾಡಿದ್ದರು. ಅವರು ಮಾಡಿದ ಗಂಟುಗಳನ್ನು ಬಿಚ್ಚುತ್ತಾ ಹೋದರೆ ಎಲ್ಲವೂ ಹೊರಗೆ ಬರುತ್ತದೆ ಎಂದು ಎಚ್ಚರಿಸಿದರು.ಬಿಡದಿ ಪ್ರಕರಣದಲ್ಲಿ ರೈತರ ವಿರುದ್ಧ ತಪ್ಪಾಗಿ ಎಫ್‌ಐಆರ್ ದಾಖಲಿಸಿದ್ದರೆ, ಅದನ್ನು ಹಿಂಪಡೆಯಲು ನಮ್ಮ ಸರ್ಕಾರ ಸಿದ್ಧವಿದೆ. ಬಿಡದಿ ಬಳಿ ರೈತರ ಇಚ್ಛೆಗೆ ವಿರುದ್ಧವಾಗಿ ಭೂ ಸ್ವಾಧೀನ ಮಾಡಿಕೊಳ್ಳುತ್ತಿಲ್ಲ ಎಂದು ಸ್ಪಷ್ಟಪಡಿಸಿದರು. ನಮ ಸರ್ಕಾರ ಎಲ್ಲಾ ಸಮುದಾಯಗಳಿಗೂ ಸಮಾನ ಅವಕಾಶಗಳನ್ನು ನೀಡುತ್ತದೆ. ಒಂದು ವೇಳೆ ತಾರತಮ್ಯವಾಗಿದ್ದರೆ ಅದನ್ನು ಸರಿಪಡಿಸುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

## ತಿರುಪತಿ ಐಐಟಿ ನಿರ್ದೇಶಕ ಡಾ. ಕೆ.ಎನ್.ಸತ್ಯನಾರಾಯಣ

# ಕಠಿಣವಾಗುತ್ತಿದೆ ಎಐ ಪಠ್ಯಕ್ರಮ, ಕೌಶಲ್ಯ ಪಡೆದರೆ ಅವಕಾಶಗಳ ಹೆಬ್ಬಾಗಿಲು ತೆರೆಯಲಿದೆ



**ಬೆಂಗಳೂರು, ಜೂ.11:** ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಎಐ ತಂತ್ರಜ್ಞಾನ ಪಠ್ಯ ಕ್ರಮ ಮತ್ತಷ್ಟು ಕಠಿಣವಾಗಲಿದ್ದು, ಇದಕ್ಕೆ ಅನುಗುಣವಾಗಿ ಶಿಕ್ಷಣ ಕೌಶಲ್ಯ ಪಡೆದುಕೊಂಡರೆ ಅವಕಾಶಗಳ ಹೆಬ್ಬಾಗಿಲು ತೆರೆಯಲಿದೆ ಎಂದು ತಿರುಪತಿ ಐಐಟಿ ನಿರ್ದೇಶಕರಾದ ಡಾ. ಕೆ. ಎನ್. ಸತ್ಯನಾರಾಯಣ ಕರೆ ನೀಡಿದ್ದಾರೆ.

ಶ್ರೀ ಕೃಷ್ಣದೇವರಾಯ ಎಜುಕೇಷನಲ್ ಟ್ರಸ್ಟ್ ಆಶ್ರಯದಲ್ಲಿರುವ ಸರ್ ಎಂ. ವಿಶ್ವೇಶ್ವರಯ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಹಾಗೂ ಸರ್ ಎಂ. ವಿ. ಸ್ಕೂಲ್ ಆಫ್ ಆರ್ಕಿಟೆಕ್ಚರ್ ಸಂಸ್ಥೆಗಳಿಂದ ಸರ್ ಎಂವಿಐಟಿ ಆವರಣದಲ್ಲಿ ಪದವಿ ಪ್ರದಾನ ಹಾಗೂ ಬೀಳ್ಕೊಡುಗೆ ಸಮಾರಂಭದಲ್ಲಿ ಒಟ್ಟು 1,036 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ. ಕೆ. ಎನ್. ಸತ್ಯನಾರಾಯಣ, ನಾವೀನ್ಯತೆ, ಹೊಂದಾಣಿಕೆ ಸಾಮರ್ಥ್ಯ ಹಾಗೂ ಶ್ರೇಷ್ಠ ಬದ್ಧತೆಯ ಮೂಲಕ ಭವಿಷ್ಯವನ್ನು ಉಜ್ವಲ ಮತ್ತು ಅರ್ಥಪೂರ್ಣವಾಗಿಸಬೇಕು. ವೇಗದ ತಂತ್ರಜ್ಞಾನ ಯುಗದಲ್ಲಿ ಬಾಹ್ಯ ಅವಕಾಶಗಳು ಮತ್ತು ಸವಾಲುಗಳಿಗೆ ವಿದ್ಯಾರ್ಥಿಗಳು ಸಜ್ಜಾಗಬೇಕು. ದೇಶದಲ್ಲಿ ವಿಶೇಷ ಕೌಶಲ್ಯ ಹೊಂದಿದ ಪ್ರತಿಭೆಗಳ ಕೊರತೆ ಎಂದಿಗೂ ಎದುರಾಗಬಾರದು. ಕಲಿಕೆಗೆ ಹಲವಾರು ವೇದಿಕೆಗಳಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಇದೀಗ ತಂತ್ರಜ್ಞಾನ ಕ್ರಾಂತಿ ಶುರುವಾಗುತ್ತಿದ್ದು, ನಿರಂತರವಾಗಿ ತಾಂತ್ರಿಕ ಪರಿಣತಿ ಪಡೆದು ಸಂವಹನ ಕೌಶಲ್ಯಗಳನ್ನು ಬಲಪಡಿಸಿಕೊಳ್ಳುವ ಜೊತೆಗೆ ವಿವಿಧ ವೃತ್ತಿ ಅವಕಾಶಗಳಿಗೆ ಸಜ್ಜಾಗುವುದು ಇಂದಿನ ಅಗತ್ಯ ಎಂದರು. ಕೆಇಟಿಯ ಅಧ್ಯಕ್ಷರಾದ ವಿ. ಶ್ರೀನಿವಾಸ ರಾಜು ಮಾತನಾಡಿ, ಪದವೀಧರರು ದೊಡ್ಡ ಕನಸುಗಳನ್ನು ಕಾಣಬೇಕು ಹಾಗೂ ಆ ಕನಸುಗಳನ್ನು ಸಾಕಾರಗೊಳಿಸಲು ಒಗ್ಗಟ್ಟಿನಿಂದ ಶ್ರಮಿಸಬೇಕು. ಪರಸ್ಪರ ಸಂವಾದದ ಮೂಲಕ ತಮ್ಮ ಕೌಶಲ್ಯ ಮತ್ತು ಬುದ್ಧಿಶಕ್ತಿಯನ್ನು ವೃದ್ಧಿಸಿಕೊಳ್ಳಬೇಕು ಎಂದರು.

## ಈ ವರ್ಷ ಸಿಡಿಲಿಗೆ ಬಲಿಯಾದವರ ಸಂಖ್ಯೆ 44
## 2020-24ರ ಅವಧಿಯಲ್ಲಿ ಮೃತಪಟ್ಟವರು 429

# ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ಮಾಹಿತಿ

**ಬೆಂಗಳೂರು, ಜೂ.11:** ರಾಜ್ಯದಲ್ಲಿ ಸಿಡಿಲಿಗೆ ಈ ವರ್ಷ ಈವರೆಗೆ 44 ಮಂದಿ ಮೃತಪಟ್ಟಿರುವುದಾಗಿ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ತಿಳಿಸಿದೆ.




ಬೀದರ್, ಕಲಬುರಗಿಯಲ್ಲಿ ತಲಾ 6 ಮಂದಿ, ಕೊಪ್ಪಳ, ಮೈಸೂರಿನಲ್ಲಿ ತಲಾ 4 ಮಂದಿ, ರಾಯಚೂರಿನಲ್ಲಿ 3, ಬಾಗಲಕೋಟೆ, ಬಳ್ಳಾರಿ, ಚಿಕ್ಕಬಳ್ಳಾಪುರ, ಗದಗ, ಹಾಸನ, ಉಡುಪಿ, ಯಾದಗಿರಿ, ವಿಜಯನಗರಗಳಲ್ಲಿ ತಲಾ ಇಬ್ಬರು ಮೃತಪಟ್ಟಿದ್ದಾರೆ. ಚಿತ್ರದುರ್ಗ, ದಾವಣಗೆರೆ, ಧಾರವಾಡ, ಹಾವೇರಿ ಜಿಲ್ಲೆಗಳಲ್ಲಿ ತಲಾ ಒಬ್ಬರು ಸಿಡಿಲು ಬಡಿದು ಅಸುನೀಗಿದ್ದಾರೆ ಎಂದು ಕೇಂದ್ರದ ಅಂಕಿ ಅಂಶಗಳು ಹೇಳುತ್ತವೆ.

**5 ವರ್ಷಗಳಲ್ಲಿ 429 ಮಂದಿ ಸಾವು:**

ಕರ್ನಾಟಕ ರಾಜ್ಯ ಸಿಡಿಲು ಮತ್ತು ಮಿಂಚು ಕ್ರಿಯಾ ಯೋಜನೆ–2025–26ರ ಅಂಕಿ–ಅಂಶಗಳ ಪ್ರಕಾರ, 2020ರಿಂದ 2024ರವರೆಗೆ ರಾಜ್ಯದಲ್ಲಿ ಸಿಡಿಲು ಬಡಿದು 429 ಮಂದಿ ಮೃತಪಟ್ಟಿದ್ದಾರೆ. ಆದರೆ, ಈ ಕ್ರಿಯಾಯೋಜನೆಯಲ್ಲಿ 2025ರ ಅಂಕಿ ಅಂಶಗಳನ್ನು ಉಲ್ಲೇಖಿಸಿಲ್ಲ.

ರಾಜ್ಯದಲ್ಲಿ 2011ರಿಂದ 2024ರ ಅವಧಿಯಲ್ಲಿ ಒಟ್ಟು 1,026 ಮಂದಿ ಸಿಡಿಲಿಗೆ ಬಲಿಯಾಗಿದ್ದಾರೆ. ಸಿಡಿಲಿಗೆ ಸಿಲುಕುವವರಲ್ಲಿ ರೈತರು, ಕೃಷಿ ಕಾರ್ಮಿಕರು, ಮೀನುಗಾರರು ಹಾಗೂ ಮಕ್ಕಳೇ ಹೆಚ್ಚು. ತೆರೆದ ಪ್ರದೇಶಗಳಲ್ಲಿ ಕೆಲಸ ಮಾಡುವ ವೇಳೆ ಹೆಚ್ಚಿನ ದುರಂತಗಳು ಸಂಭವಿಸಿವೆ. ಮಹಿಳೆಯರಿಗಿಂತ ಪುರುಷರ ಸಾವಿನ ಪ್ರಮಾಣ ಹೆಚ್ಚಿದೆ ಎಂದು ಉಲ್ಲೇಖಿಸಿದೆ.

ಸಿಡಿಲಿನಿಂದ ಮೃತಪಡುವ ಪ್ರಕರಣ ಗಳು ಹೆಚ್ಚಾಗುತ್ತಿರುವುದಕ್ಕೆ ಹವಾಮಾನ ಬದಲಾವಣೆ ಪ್ರಮುಖ ಕಾರಣ ಎಂಬ ಉಲ್ಲೇಖ ಕ್ರಿಯಾ ಯೋಜನೆಯಲ್ಲಿದೆ. ಜಾಗತಿಕ ತಾಪಮಾನ ಏರಿಕೆ, ಅರಣ್ಯ ನಾಶ, ಜಲಮೂಲಗಳ ಅಳಿವು ಹಾಗೂ ಪರಿಸರ ಹಾನಿಯಿಂದ ಹವಾಮಾನ ವೈಪರೀತ್ಯ ಉಂಟಾಗುತ್ತಿದೆ. ಇದು ಸಿಡಿಲಿನ ಪ್ರಮಾಣ ಮತ್ತು ತೀವ್ರತೆ ಹೆಚ್ಚಲು ಕಾರಣವಾಗಿದೆ ಎಂದು ವರದಿಯಲ್ಲಿ ಹೇಳಲಾಗಿದೆ.

'ಜೀವಹಾನಿ ತಗ್ಗಿಸಲು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) 11 ಸಿಡಿಲು ಪತ್ತೆ ಕೇಂದ್ರಗಳ ಜಾಲವನ್ನು ಸ್ಥಾಪಿಸಿದ್ದು, ಗ್ರಾಮ ಪಂಚಾಯಿತಿ ಮಟ್ಟದ ಮುನ್ನೆಚ್ಚರಿಕೆ ವ್ಯವಸ್ಥೆಯನ್ನು ಜಾರಿಗೊಳಿಸಿದೆ. ಸುಧಾರಿತ ಆಯಪ್‌ಗಳ ಮೂಲಕ ಸಿಡಿಲು ಎಚ್ಚರಿಕೆ ಸಂದೇಶಗಳನ್ನುರವಾನಿಸಲಾ ಗುತ್ತಿದೆ ಎಂದು ಮೂಲಗಳು ತಿಳಿಸಿವೆ.

# ಘನತ್ಯಾಜ್ಯ ನಿರ್ವಹಣೆ: ಸುರಕ್ಷಿತ ಕಾರ್ಯನಿರ್ವಹಣೆಗೆ ಪೌರಕಾರ್ಮಿಕರಿಗೆ ತರಬೇತಿ- ಸಚಿವ ಈಶ್ವರ ಖಂಡ್ರೆ

**ಬೆಂಗಳೂರು, ಜೂ.11:** ಘನ ತ್ಯಾಜ್ಯ ನಿರ್ವಹಣೆ ಮಾಡುವ ಪೌರ ಕಾರ್ಮಿಕರಿಗೆ ಸುರಕ್ಷಿತವಾಗಿ ಹೇಗೆ ಕಾರ್ಯ ನಿರ್ವಹಿಸಬೇಕು ಎಂಬ ಬಗ್ಗೆ ವೈಜ್ಞಾನಿಕ ತರಬೇತಿ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.



ಜಕ್ಕೂರು ಬಳಿ ಇರುವ ಮಹಾತ್ಮಾ ಗಾಂಧೀ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಭೇಟಿ ನೀಡಿ ವಿವಿಧ ಕಾರ್ಯಕ್ರಮಗಳನ್ನು ಪರಾ ಮರ್ಶೆ ನಡೆಸಿದ ಅವರು, ಘನತ್ಯಾಜ್ಯ ನಿರ್ವಹಣೆಯಲ್ಲಿನ ಉತ್ತಮ ರೂಢಿ ಗಳನ್ನು ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳೊಂದಿಗೆ ಹಂಚಿ ಕೊಳ್ಳುವಂತೆ ಮತ್ತು ಪೌರಕಾರ್ಮಿಕರಿಗೆ ಸುರಕ್ಷಿತವಾಗಿ ಹೇಗೆ ತ್ಯಾಜ್ಯ ವಿಲೇವಾರಿ ಮಾಡಬೇಕು ಎಂಬ ಬಗ್ಗೆ ತರಬೇತಿ ನೀಡುವಂತೆ ತಿಳಿಸಿದರು.

ಜೈವಿಕ ಇಂಧನ ಭವಿಷ್ಯದ ಇಂಧನವಾಗಿದ್ದು, ಈ ಬಗ್ಗೆ ಮುಂದಿನ ಪೀಳಿಗೆಗೆ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ. ಈ ಸಂಸ್ಥೆಯಲ್ಲಿ ನಡೆಯುವ ತರಬೇತಿ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಪ್ರದೇಶದ ಶಾಲಾ ಮತ್ತು ಕಾಲೇಜು ಮಕ್ಕಳನ್ನು ತೊಡಗಿಸಿಕೊಳ್ಳುವಂತೆ ತಿಳಿಸಿದರು. ವಾರ್ಷಿಕವಾಗಿ 150 ಐಐಟಿ ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಸಂಸ್ಥೆಯಲ್ಲಿ ಒಂದು ತಿಂಗಳ ತರಬೇತಿ ನೀಡಲಾಗುತ್ತಿದೆ ಎಂಬ ಮಾಹಿತಿ ಪಡೆದ ಅವರು, ವಿದ್ಯಾರ್ಥಿ ಗಳ ಸಂಖ್ಯೆಯನ್ನು ವಾರ್ಷಿಕ 300ಕ್ಕೆ ಹೆಚ್ಚಿಸಲು ಮತ್ತು ಕನ್ನಡ ಮಾಧ್ಯಮದಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಅವಕಾಶ ನೀಡಲು ಮತ್ತು ಅವರಿಗೆ ಇಂಗ್ಲಿಷ್ ಮಾತನಾಡುವ (ಸ್ಪೋಕನ್ ಇಂಗ್ಲಿಷ್) ತರಬೇತಿಯನ್ನೂ ನೀಡಲು ಸೂಚಿಸಿದರು.

# ಸ್ಮಾರ್ಟ್ ಕಿಚನ್ ತಂತ್ರಜ್ಞಾನ, ಡಿಜಿಟಲ್ ಸೇವೆಗಳ ಪ್ರದರ್ಶನ, ಆತಿಥ್ಯ ವಲಯಕ್ಕೆ ಹೊಸ ಅವಕಾಶ: ಪಿ.ಸಿ.ರಾವ್

**ಬಿಐಇಸಿಯಲ್ಲಿ ಮೂರುದಿನಗಳ ಮೆಗಾ ಫುಡ್ ಎಕ್ಸ್‌ಪೋ ಆರಂಭ**

**ಬೆಂಗಳೂರು, ಜೂ.11:** ಆಹಾರ, ಆತಿಥ್ಯ, ಕೋಳಿ ಸಾಕಣೆ, ಹೈನುಗಾರಿಕೆ ಸೇರಿ ಐದು ಪ್ರಮುಖ ವಲಯಗಳ ಮೂರು ದಿನಗಳ ಮೆಗಾ ಫುಡ್ ಎಕ್ಸ್‌ಪೋ 2026 ನಗರದ ಅಂತಾ ರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರ [ಬಿಐಇಸಿ]ದಲ್ಲಿ ಗುರುವಾರದಿಂದ ಆರಂಭವಾಗಿದ್ದು, 90ಕ್ಕೂ ಹೆಚ್ಚು ಕಂಪೆನಿಗಳು ಪಾಲ್ಗೊಂಡಿವೆ. ರೈತರು, ಉದ್ಯಮಿಗಳು, ಹೂಡಿಕೆದಾರರು, ಸಂಶೋಧಕರು ಮತ್ತು ಗ್ರಾಹಕರ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿವೆ. ಆಹಾರ ಉತ್ಪಾದನೆಯಿಂದ ಹಿಡಿದು ಸಂಸ್ಕರಣೆ, ಪ್ಯಾಕೇಜಿಂಗ್, ಸಂಗ್ರಹಣೆ, ಸಾಗಣೆ ಮತ್ತು ಮಾರುಕಟ್ಟೆವರೆಗೆ ಸಂಪೂರ್ಣ ಮೌಲ್ಯ ಸರಪಳಿಯನ್ನು ಈ ಮೇಳ ಒಳಗೊಂಡಿರುವುದು ವಿಶೇಷವಾಗಿದೆ. ಬೆಂಗಳೂರು ಹೋಟೆಲ್ ಆಡಳಿತ ಮಂಡಳಿ ಗೌರವಾಧ್ಯಕ್ಷ ಪಿ.ಸಿ. ರಾವ್ ಮೇಳಕ್ಕೆ ಚಾಲನೆ ನೀಡಿ ಮಾತನಾಡಿ, ಮಸಾಲೆ ಪದಾರ್ಥಗಳು, ಹಣ್ಣು–ತರಕಾರಿ ಸಂಸ್ಕರಣಾ ತಂತ್ರಜ್ಞಾನಗಳು ಹಾಗೂ ರಫ್ತು ಸಾಧ್ಯತೆಗಳ ಕುರಿತು ವಿಶೇಷ ಮಳಿಗೆಗಳನ್ನು ತೆರೆಯಲಾಗಿದೆ. ದೇಶೀಯ ಹಾಗೂ ಅಂತರರಾಷ್ಟ್ರೀಯ ಕಂಪನಿಗಳು ತಮ್ಮ ಅತ್ಯಾಧುನಿಕ ಉತ್ಪನ್ನಗಳನ್ನು ಪ್ರದರ್ಶಿಸುತ್ತಿವೆ. ಆಹಾರೋದ್ಯಮ ಬೆಳವಣಿಗೆ ಈ ಮೇಳ ಪೂರಕವಾಗಿದೆ. ಹೋಟೆಲ್, ಆಹಾರ ಸರಬರಾಜು ಮತ್ತು ಪ್ರವಾಸೋದ್ಯಮ ವಲಯಕ್ಕೆ ಅಗತ್ಯವಿರುವ ಅಡುಗೆ ಸಲಕರಣೆಗಳು, ಶೀತಲೀಕರಣ ವ್ಯವಸ್ಥೆಗಳು, ಸ್ಮಾರ್ಟ್ ಕಿಚನ್ ತಂತ್ರಜ್ಞಾನಗಳು ಹಾಗೂ ಡಿಜಿಟಲ್ ಸೇವೆಗಳ ಪ್ರದರ್ಶನ ಆತಿಥ್ಯ ವಲಯಕ್ಕೆ ಹೊಸ ವ್ಯವಹಾರ ಅವಕಾಶಗಳನ್ನು ತೆರೆದಿಡುತ್ತಿದೆ ಎಂದರು.




ಮೀಡಿಯಾ ಡೇ ಮಾರ್ಕೆಟಿಂಗ್ ಸಂಸ್ಥೆಯ ವ್ಯವಸ್ಥಾಪಕ ಮೊಹಮ್ಮದ್ ಮುದಸ್ಸರ್ ಮಾತನಾಡಿ, ಮೂರು ದಿನಗಳ ಈ ಪ್ರದರ್ಶನ ದಲ್ಲಿ ವ್ಯಾಪಾರ ಸಭೆಗಳು, ಖರೀದಿದಾರ–ಮಾರಾಟಗಾರರ ಸಂವಾದಗಳು, ಹೂಡಿಕೆದಾರರ ಸಮಾವೇಶಗಳು ಹಾಗೂ ತಾಂತ್ರಿಕ ಕಾರ್ಯಾಗಾರಗಳು ನಡೆಯುತ್ತಿವೆ. ಇದರಿಂದ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಹೊಸ ಮಾರುಕಟ್ಟೆ ಹಾಗೂ ಸಹಭಾಗಿತ್ವದ ಅವಕಾಶಗಳು

ಲಭಿಸುತ್ತಿವೆ. ಕೃಷಿ ಮತ್ತು ಆಹಾರ ಸಂಸ್ಕರಣೆಯಲ್ಲಿ ಪ್ರಮುಖ ಸ್ಥಾನ ಹೊಂದಿರುವ ಕರ್ನಾಟಕಕ್ಕೆ ಹೊಸ ಹೂಡಿಕೆ, ಉದ್ಯೋಗ ಸೃಷ್ಟಿ ಹಾಗೂ ರಫ್ತು ವೃದ್ಧಿಗೆ ಸಹಕಾರಿಯಾಗಿವೆ ಎಂದರು.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಗುರುವಾರ ನಡೆದ ಪ್ರತಿಭಟನಾ ಸಭೆಯಲ್ಲಿ ಕಲ್ಯಾಣಸಿರಿ ಭಂತೇಜಿ, ಸಿದ್ಧರಾಮ ಶಿವಯೋಗಿ, ಡಿಎಸ್‌ಎಸ್ ನಾಯಕರಾದ ವೆಂಕಟಸ್ವಾಮಿ, ಎನ್.ಮೂರ್ತಿ ಮತ್ತು ಕರ್ನಾಟಕ ರಾಜ್ಯ ದಲಿತ ಸಂಘಗಳ ಒಕ್ಕೂಟದ ಸದಸ್ಯರು ರಾಜ್ಯ ಸಚಿವ ಸಂಪುಟದಲ್ಲಿ ಹಿಂದುಳಿದ ವರ್ಗಗಳ ನಾಯಕರಿಗೆ ಸ್ಥಾನ ನೀಡುವಂತೆ ಒತ್ತಾಯಿಸಿದರು.

# ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

**ರಾಯಚೂರು, ಜೂ. 11:** ಅಗತ್ಯ ವಸ್ತು ಹಾಗೂ ಅಡುಗೆ ಅನಿಲ ಬೆಲೆ ಏರಿಕೆ ವಿರೋಧಿಸಿ ಕಾಂಗ್ರೆಸ್ ಕಾರ್ಯಕರ್ತರು ನಗರದ ಡಾ.ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಪೆಟ್ರೋಲ್, ಗ್ಯಾಸ್, ರಸಗೊಬ್ಬರಗಳ ಬೆಲೆ ಏರಿಕೆ ಮಾಡಿ, ಬಡ, ಮಧ್ಯಮ ವರ್ಗ ಹಾಗೂ ರೈತರ ಹಿತದ ವಿರುದ್ಧ ಕೆಲಸ ಮಾಡುತ್ತಿದೆ ಎಂದು ಆಕ್ರೋಶ ಹೊರಹಾಕಿದರು. ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಮಾತನಾಡಿ, 'ಕೇಂದ್ರ ಸರ್ಕಾರವು ರೈತರು, ಕಾರ್ಮಿಕರು, ಯುವಕರು ಹಾಗೂ ಬಡಜನರ ಅಭಿವೃದ್ಧಿಯ ಹೆಸರಿನಲ್ಲಿ ಹಲವು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದಿದ್ದರೂ, 12 ವರ್ಷಗಳಲ್ಲಿ ಪ್ರಮುಖ ಭರವಸೆಗಳು ಈಡೇರಿಲ್ಲ. ಜನರ ವಿಶ್ವಾಸ ಗಳಿಸಲು ನೀಡಿದ್ದ ಭರವಸೆಗಳು ಕೇವಲ ಘೋಷಣೆಗಳಾಗಿಯೇ ಉಳಿದಿವೆ ಎಂದು ಆರೋಪಿಸಿದರು.



ರಾಯಚೂರು ನಗರದ ಅಂಬೇಡಕರ್ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಮುಖಂಡರು ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರೋಧಿಸಿ ಪ್ರತಿಭಟನೆ ನಡೆಸಿದರು.

ಚುನಾವಣೆ ಸಂದರ್ಭದಲ್ಲಿ ವಿದೇಶಗಳಲ್ಲಿರುವ ಕಪ್ಪು ಹಣ ದೇಶಕ್ಕೆ ತಂದು ಬ್ಯಾಂಕ್ ಖಾತೆಗೆ 15 ಲಕ್ಷ ಜಮಾ ಮಾಡಲಾಗುವುದು ಎಂದು ಘೋಷಿಸಲಾಗಿತ್ತು. ಆದರೆ ಈವರೆಗೆ ಆ ಭರವಸೆ ಈಡೇರಿಲ್ಲ. ಇದೇ ರೀತಿ ವರ್ಷಕ್ಕೆ 2 ಕೋಟಿ ಉದ್ಯೋಗಗಳ ಭರವಸೆ ಈಡೇರಿಲ್ಲ. ಆದರೆ ದೇಶದಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚುತ್ತಿದ್ದು, ಲಕ್ಷಾಂತರ ಯುವಕರು ಉದ್ಯೋಗಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ರೈತರಿಗೆ ಉತ್ಪಾದನಾ ವೆಚ್ಚಕ್ಕೆ ಅನುಗುಣವಾಗಿ ನ್ಯಾಯಯುತ ಬೆಂಬಲ ಬೆಲೆ ನೀಡುವುದಾಗಿ ಸರ್ಕಾರ ಭರವಸೆ ನೀಡಿತ್ತು. ಆದರೆ ಕೃಷಿ ಉತ್ಪನ್ನಗಳಿಗೆ ಸೂಕ್ತ ಬೆಲೆ ದೊರೆಯದ ಕಾರಣ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಹಾಗೂ ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರ ಬದುಕು ದುಸ್ತರವಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರವು ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಬೆಲೆ ಏರಿಕೆ ನಿಯಂತ್ರಿಸುವ ಜೊತೆಗೆ ಚುನಾವಣಾ ಸಂದರ್ಭದಲ್ಲಿ ನೀಡಿದ್ದ ಭರವಸೆಗಳನ್ನು ಶೀಘ್ರವಾಗಿ ಈಡೇರಿಸಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ರಾಜ್ಯ ಮಾಧ್ಯಮ ವಕ್ತಾರ ಡಾ.ರಝಾಕ್ ಉಸ್ತಾದ್ ಮಾತನಾಡಿ, ಅಂತರರಾಷ್ಟ್ರೀಯ ಮಟ್ಟದಲ್ಲಿ ಕಚ್ಚಾ ತೈಲ ಬೆಲೆ ಪ್ರತಿ ಬ್ಯಾರೆಲ್‌ಗೆ ಕಡಿಮೆ ಇದ್ದರೂ ಪೆಟ್ರೋಲ್ ಡಿಸೇಲ್ ಬೆಲೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ವಾರಕ್ಕೊಮ್ಮೆ ಹೆಚ್ಚು ಮಾಡುತ್ತಾ ಹೋಗುತ್ತಿದೆ. ಪ್ರಧಾನಿ ಮೋದಿ ಹಾಗೂ ಬಿಜೆಪಿ ಸರ್ಕಾರ ಆಡಳಿತ ನಡೆಸಲು ವಿಫಲವಾಗಿದೆ. ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

### ಬೀದರ್-ಬೆಂಗಳೂರು ವಿಮಾನಯಾನ

## ವೇಳಾಪಟ್ಟಿ ಬದಲಾವಣೆಗೆ ಆಕ್ಷೇಪ ಸಿಎಂಗೆ ಪತ್ರ ಬರೆದ ಸಚಿವ ಖಂಡ್ರೆ

**ಬೀದರ್, ಜೂ. 11:** ಬೀದರ–ಬೆಂಗಳೂರು ನಡುವೆ ಜೂನ್ ಒಂದನೇ ತಾರೀಖಿನಂದು ಪುನರಾರಂಭವಾಗಿದ್ದ ವಿಮಾನಯಾನ ಸಮಯವನ್ನು ಯಾರದೇ ಅಭಿಪ್ರಾಯವನ್ನು ಪಡೆಯದೇ, ಪರಿಷ್ಕರಿಸಿರುವುದಕ್ಕೆ ಸಾರ್ವಜನಿಕ ವಲಯದಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗಿದೆ. ಈ ಸಂಬಂಧ ಸಿಎಂ ಡಿಕೆ ಶಿವಕುಮಾರ್ ಅವರಿಗೆ ಸಚಿವ ಈಶ್ವರ್ ಖಂಡ್ರೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ.







ಜೂನ್ ಮೊದಲ ವಾರದಿಂದ ಕಾರ್ಯಾರಂಭ ಮಾಡಿದ್ದ ಸ್ಟಾರ್ ಏರ್ ಸಂಸ್ಥೆಯು, ಮೊದಲು ನಿಗದಿಪಡಿಸಿದ್ದ ಬೆಳಗಿನ ಅವಧಿಯನ್ನು ದಿಢೀರ್ ಬದಲಾಯಿಸಿ ಮಧ್ಯಾಹ್ನದ ವೇಳಾಪಟ್ಟಿಯನ್ನು ಪ್ರಕಟಿಸಿದೆ. ಈ ನೂತನ ಬದಲಾವಣೆ ಪ್ರಯಾಣಿಕರ ದೈನಂದಿನ ಯೋಜನೆಗಳಿಗೆ ಅಡ್ಡಿಯುಂಟುಮಾಡಲಿದ್ದು, ಇದರಿಂದ ವಿಮಾನ ಪ್ರಯಾಣವನ್ನು ಆಶ್ರಯಿಸುವವರ ಸಂಖ್ಯೆ ಗಣನೀಯವಾಗಿ ಕ್ಷೀಣಿಸುವ ಆತಂಕ ಮೂಡಿದೆ. ಮುಂಜಾನೆಯ ಸಂಚಾರ ವಿಶೇಷವಾಗಿ ಗಡಿಭಾಗದ ಉದ್ಯಮಿಗಳಿಗೆ ಹಾಗೂ ತುರ್ತು ಕೆಲಸಗಳಿಗಾಗಿ ರಾಜಧಾನಿಗೆ ಬಂದು ಹೋಗುವ ಜನರಿಗೆ ಒಂದೇ ದಿನದಲ್ಲಿ ತಮ್ಮ ಕಾರ್ಯ ಗಳನ್ನು ಮುಗಿಸಲು ಅತ್ಯಂತ ಸಹಕಾರಿಯಾಗಿತ್ತು. ಆದರೆ ಮಧ್ಯಾಹ್ನದ ಹಾರರಾಟದ ಈ ಹೊಸ ಸಮಯದಿಂದಾಗಿ ವಾಯು ಸೇವೆಯ ಮೂಲ ಉದ್ದೇಶವೇ ವ್ಯರ್ಥವಾಗುವ ಸಾಧ್ಯತೆಯಿದೆ.

ಈ ಸೂಕ್ಷ್ಮ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಸಚಿವ ಈಶ್ವರ್ ಖಂಡ್ರೆ ಅವರು, ತಕ್ಷಣವೇ ಮಧ್ಯಪ್ರವೇಶಿಸುವಂತೆ ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ಜವಾಬ್ದಾರಿ ಹೊತ್ತಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ವಿಶೇಷ ಪತ್ರ ಬರೆದಿದ್ದಾರೆ. ಸಂಬಂಧಪಟ್ಟ ಖಾಸಗಿ ವಿಮಾನಯಾನ ಸಂಸ್ಥೆಯ ಉನ್ನತಾಧಿಕಾರಿಗಳೊಂದಿಗೆ ಸರ್ಕಾರದ ಮಟ್ಟದಲ್ಲಿ ತುರ್ತು ಸಭೆ ನಡೆಸಿ, ಸಾರ್ವಜನಿಕರ ಅನುಕೂಲಕ್ಕಾಗಿ ಮೊದಲಿನ ಮುಂಜಾನೆಯ ವೇಳಾಪಟ್ಟಿಯನ್ನೇ ಪುನಃ ಜಾರಿಗೆ ತರಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅವರು ಪತ್ರದ ಮೂಲಕ ಬಲವಾಗಿ ಒತ್ತಾಯಿಸಿದ್ದಾರೆ.

## ಸಿಎಂ ಡಿ.ಕೆ.ಶಿವಕುಮಾರ್‌ಗೆ ಯಾವುದೇ ಕಂಟಕವಿಲ್ಲ: ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಭವಿಷ್ಯ

**ತುಮಕೂರು, ಜೂ.11:** ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಯಾವುದೇ ಕಂಟಕವಿಲ್ಲ ಎಂದು ನೊಣವಿನಕೆರೆ ಶ್ರೀ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಭವಿಷ್ಯ ನುಡಿದಿದ್ದಾರೆ.





ತುಮಕೂರಿನಲ್ಲಿ ಕಾಂಗ್ರೆಸ್ ಮುಖಂಡರೊಬ್ಬರ ಮನೆಗೆ ಪಾದ ಪೂಜೆಗೆ ಆಗಮಿಸಿದ್ದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸ್ವಾಮೀಜಿ, ಡಿ.ಕೆ.ಶಿವಕುಮಾರ್ ಗುರುವಿನ ಆಶೀರ್ವಾದ ಪಡೆದಿದ್ದಾರೆ. ನಿರಂತರವಾಗಿ ಶ್ರೀಮಠದ ಮಗನಾಗಿ ಸೇವೆ ಸಲ್ಲಿಸಿದ್ದಾರೆ. ಹಾಗಾಗಿ ಗುರುವಿನ ಆಶೀರ್ವಾದ ಅವರಿಗೆ ರಕ್ಷಾಕವಚವಾಗಲಿದೆ ಎಂದು ತಿಳಿಸಿದರು.

ಯಾವುದೇ ಕಂಟಕ ಬಂದರೂ ಅವರು ಜಯಶೀಲರಾಗುತ್ತಾರೆ. ಒಂಭತ್ತು ತಿಂಗಳ ಕಂಟಕದ ಬಗ್ಗೆ ಚಿಂತೆ ಬೇಡ. ಗುರುವಿನ ರಕ್ಷಣೆಯಿಂದ ಎಲ್ಲಾ ಸಂಕಷ್ಟಗಳು ನಿವಾರಣೆಯಾಗಲಿವೆ ಎಂದು ತಿಳಿಸಿದ್ದಾರೆ.

ಡಿ.ಕೆ.ಶಿವಕುಮಾರ್ ಅವರು, ರೈತರು, ಬಡವರು, ಸೈನಿಕರು, ವರ್ತಕರು ಹಾಗೂ ಯುವಕರಿಗಾಗಿ ಕಂಕಣಬದ್ಧವಾಗಿ ಸೇವೆ ಸಲ್ಲಿಸಿದ್ದಾರೆ. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮ ದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಮಂತ್ರದೊಂದಿಗೆ ಶ್ರೀಮಠದಿಂದ ಅವರಿಗೆ ಧರ್ಮದ ದಂಡವನ್ನು ಹಸ್ತಾಂತರಿಸಲಾಗಿದೆ ಎಂದರು.

ಡಿ.ಕೆ.ಶಿವಕುಮಾರ್ ಅವರು ಸಮಾಜದ ಸೇವೆಯಲ್ಲಿ ತಮ್ಮ ಬದುಕನ್ನು ರೂಪಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

### ಜೂ.15ರಿಂದ ಜಾರಿ: ಡಿಸಿ ಆದೇಶ: ಪರ್ಯಾಯ ಮಾರ್ಗದಲ್ಲಿ ಸಂಚರಿಸಲು ಸೂಚನೆ

## ಮಳೆಗಾಲ ಮುಗಿಯುವವರೆಗೆ ಆಗುಂಬೆ ಘಾಟಿಯಲ್ಲಿ ಭಾರಿ ವಾಹನ ಸಂಚಾರ ನಿಷೇಧ

**ಶಿವಮೊಗ್ಗ, ಜೂ.11:** ರಾಷ್ಟ್ರೀಯ ಹೆದ್ದಾರಿ 169ಎ ಆಗುಂಬೆ ಘಾಟಿಯಲ್ಲಿ ಭಾರಿ ವಾಹನಗಳ (ಜಲ್ಲಿ ಮತ್ತು ಸರಕು ಸಾಗಾಣೆ ತುಂಬಿದ ವಾಹನಗಳ) ಸಂಚಾರವನ್ನು ಜೂನ್ 15ರಿಂದ ಮಳೆಗಾಲ ಮುಗಿಯುವವರೆಗೂ ನಿಷೇಧಿಸಿ ಪರ್ಯಾಯ ಮಾರ್ಗದಲ್ಲಿ ಸಂಚರಿಸಲು ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಆದೇಶಿಸಿದ್ದಾರೆ.



ಶಿವಮೊಗ್ಗದಿಂದ ಹೊಸನಗರ–ಮಾಸ್ತಿಕಟ್ಟೆ ಮಾರ್ಗವಾಗಿ ಕುಂದಾಪುರ ಮತ್ತು ಉಡುಪಿಗೆ ಸಂಪರ್ಕ ಕಲ್ಪಿಸುವ ಹುಲಿಕಲ್ ಘಾಟಿಯಲ್ಲಿ ಭೂಕುಸಿತ ಸಂಭವಿಸಿದ ನಂತರ ತಾತ್ಕಾಲಿಕ ರಕ್ಷಣಾತ್ಮಕ ಕಾಮಗಾರಿ ಪೂರ್ಣಗೊಳ್ಳದಿರುವುದರಿಂದ ರಾಷ್ಟ್ರೀಯ ಹೆದ್ದಾರಿ 169ಎ ತೀರ್ಥಹಳ್ಳಿ–ಮಲ್ಪೆ–ಉಡುಪಿ ರಸ್ತೆಯ ಆಗುಂಬೆ ಘಾಟಿಯಲ್ಲಿ ಭಾರಿ ವಾಹನಗಳ ಹೆಚ್ಚಿನ ಓಡಾಟವಿದ್ದು, ಮುಂದಿನ ದಿನಗಳಲ್ಲಿಯೂ ಇದು ಮುಂದುವರಿದಲ್ಲಿ ಅಲ್ಲಲ್ಲಿ ರಸ್ತೆಯ ಬದಿಯ ಭೂಕುಸಿತ ಆಗುವ, ಅಪಘಾತವಾಗುವ ಮತ್ತು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುವ ಸಂಭವವಿದೆ. ಅರೋಗ್ಯ ಸಮಸ್ಯೆಯ ಕುರಿತು ಮಣಿಪಾಲ್, ಉಡುಪಿ, ಮಂಗಳೂರಿಗೆ ಹೋಗುವ ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ ಮತ್ತು ಹಾವೇರಿ ಜಿಲ್ಲೆಯ ನಾಗರಿಕರಿಗೆ ಇರುವ ಸಂಪರ್ಕ ಬಂದಾದರೆ ನಾಲ್ಕು ಜಿಲ್ಲೆಯ ನಾಗರೀಕರಿಗೆ ತುಂಬಾ ತೊಂದರೆಯಾಗುವ ಹಿನ್ನಲೆಯಲ್ಲಿ ಈ ಆದೇಶ ಹೊರಡಿಸಲಾಗಿದೆ.

ಪರ್ಯಾಯ ಸಂಚಾರ ಮಾರ್ಗಗಳಾದ ತೀರ್ಥಹಳ್ಳಿ –ಉಡುಪಿ ಕಡೆಗೆ ಹೋಗುವ ವಾಹನಗಳು ತೀರ್ಥಹಳ್ಳಿ–ನಗರ–ನಾಗೋಡಿ–ಕೊಲ್ಲೂರು – ಕುಂದಾಪುರ–ಉಡುಪಿ ಮತ್ತು ತೀರ್ಥಹಳ್ಳಿ–ಶೃಂಗೇರಿ– ಕೆರೆಕಟ್ಟೆ – ಬಜಗೋಳಿ– ಕಾರ್ಕಳ – ಉಡುಪಿ ಮಾರ್ಗವಾಗಿ ಸಂಚರಿಸುವುದು.

ಉಡುಪಿ– ತೀರ್ಥಹಳ್ಳಿ ಕಡೆಗೆ ಹೋಗುವ ವಾಹನಗಳು ಉಡುಪಿ –ಕುಂದಾಪುರ–ಕೊಲ್ಲೂರು– ನಾಗೋಡಿ – ನಗರ – ತೀರ್ಥಹಳ್ಳಿ ಮತ್ತು ಕಾರ್ಕಳ – ಬಜಗೋಳಿ–ಕೆರೆಕಟ್ಟೆ–ಶೃಂಗೇರಿ– ತೀರ್ಥಹಳ್ಳಿ ಮಾರ್ಗವಾಗಿ ಸಂಚರಿಸುವಂತೆ ಆದೇಶದಲ್ಲಿ ಸೂಚಿಸಲಾಗಿದೆ.

## ಸಾಮಾಜಿಕ ಜಾಲತಾಣಗಳು ಪ್ರತಿಭಾ ಪ್ರದರ್ಶನದ ವೇದಿಕೆ



**ಬಳ್ಳಾರಿ, ಜೂ.11:** ಪ್ರತಿಭಾ ಪ್ರದರ್ಶನಕ್ಕೆ ಪ್ರಸ್ತುತ ದಿನಮಾನಗಳಲ್ಲಿ ಸಾಮಾಜಿಕ ಮಾಧ್ಯಮಗಳು ವೇದಿಕೆಯಾಗಿ ಮಾರ್ಪಾಟಾಗಿವೆ ಎಂದು ವಿವಿಯ ಕುಲಸಚಿವರಾದ ಪ್ರೊ. ವಿ ಲೋಕೇಶ್ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ ಬಿ ಆರ್ ಅಂಬೇಡ್ಕರ್ ಸಭಾಭವನದಲ್ಲಿ ದಿ. ರಮಣಿಕ ಗುಪ್ತ ಅವರ ಸ್ಮರಣಾರ್ಥ ಆಯೋಜಿಸಿರುವ 10 ದಿನಗಳ ರಾಷ್ಟ್ರೀಯ ರಂಗಭೂಮಿ ಕಾರ್ಯಾಗಾರದ ಸಮಾರೋಪ ಸಮಾರಂಭವನ್ನು ಪ್ರೊ ಶಾಂತನಾಯ್ಕ್ ಅವರ ರಚಿತ ವೇರಾಳು ನಾಟಕ ದೃಶ್ಯ ಪ್ರದರ್ಶಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ, ನಿಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಳ್ಳಲು ಶ್ರಮವಹಿಸಿ. ವಿವಿಯ ವಿದ್ಯಾರ್ಥಿಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸುವಂತಾಗಲಿ ಎಂದು ಹಾರೈಸಿದರು. ಹತ್ತು ದಿನಗಳ ಕಾರ್ಯಾಗಾರವು ಯಶಸ್ವಿಯಾಗಿರುವುದು ಸಂತಸವಾಗಿದೆ ಎಂದರು.

ಸಮಾರೋಪ ನುಡಿಯಲ್ಲಿ ಮಾತನಾಡಿದ ವಿಜಯನಗರ ಜಿಲ್ಲೆಯ, ಎನ್ ಎಸ್ ಡಿ ರಂಗ ನಿರ್ದೇಶಕರಾದ ಸಾಂಬಶಿವ ದಳವಾಯಿ, ಪ್ರತಿಯೊಬ್ಬರು ಸಾಹಿತ್ಯದ ರಸವನ್ನು ಸವಿಯುವ ಮೂಲಕ ಗುರುತಿಸಿಕೊಳ್ಳಬೇಕು. ಹತ್ತು ದಿನಗಳಲ್ಲಿ ನಾಟಕ ತರಬೇತಿ ಹಾಗೂ ನಾಟಕ ರಚನೆ ಸುಲಭದ ಮಾತಲ್ಲ. ನಾಟಕಕ್ಕೆ ನಿರ್ದಿಷ್ಟವಾದ ಸಮಯ ಬೇಕು. ಇಂತಹ ರಂಗಭೂಮಿ ಕಾರ್ಯಾಗಾರಗಳು ಮೈಸೂರು ಭಾಗಗಳಲ್ಲಿ ಕಾಣಿಸಿಕೊಳ್ಳುತ್ತಿದ್ದವು. ಬಳ್ಳಾರಿಯಲ್ಲಿ ಆಯೋಜಿಸಿದ್ದು ಸಂತಸಕರ ಎಂದರು.

# ಸಮರ್ಪಕ ರಸಗೊಬ್ಬರ ಪೂರೈಸಿ, ಎಪಿಎಂಸಿ ಎದುರು ರೈತಸಂಘದಿಂದ ಸತ್ಯಾಗ್ರಹ

**ಕಲಬುರಗಿ, ಜೂ. 11:** ರೈತರಿಗೆ ರಸಗೊಬ್ಬರ ಕೊರತೆಯಾಗದಂತೆ ಕೇಂದ್ರ, ರಾಜ್ಯ ಸರ್ಕಾರಗಳು ನೋಡಿಕೊಳ್ಳಬೇಕು, ಕೇಂದ್ರ ಸರ್ಕಾರ ಕಾಂಪ್ಲೆಕ್ಸ್ ಗೊಬ್ಬರಕ್ಕೆ ಸಹಾಯಧನ ನೀಡಬೇಕು ಎಂಬುದು ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ, ಕರ್ನಾಟಕ ಪ್ರಾಂತ ರೈತಸಂಘದ ಕಾರ್ಯಕರ್ತರು ನಗರದ ಎಪಿಎಂಸಿ ಎದುರು ಧರಣಿ ನಡೆಸಿದರು. ರಸಗೊಬ್ಬರ ಕೊರತೆ ನೀಗಿಸಬೇಕು, ಪೆಟ್ರೋಲ್, ಡೀಸೆಲ್ ಬೆಲೆ ಇಳಿಕೆ ಮಾಡಬೇಕು, ವಿದ್ಯುತ್ ಖಾಸಗೀಕರಣ ಕೈಬಿಡಬೇಕು ಎಂದು ಒತ್ತಾಯಿಸಿದರು.

ರಸಗೊಬ್ಬರ ದುಬಾರಿ ಬೆಲೆಯಿಂದಾಗಿ ರೈತರು ತತ್ತರಿಸಿದ್ದಾರೆ. ರೈತರು ಪಹಣಿ, ಆಧಾರ್ ಕಾರ್ಡ್ ನೊಂದಿಗೆ ಎರಡು ದಿನ ಪಾಳಿಯಲ್ಲಿ ನಿಂತರೂ ಗೊಬ್ಬರ ದೊರೆಯುತ್ತಿಲ್ಲ. ರೈತರಿಗೆ ಕೃಷಿ ನಷ್ಟದಲ್ಲಿ ನಡೆಯುತ್ತಿದೆ.





ಕಲಬುರಗಿ ಎಪಿಎಂಸಿ ಮುಂದೆ ಪ್ರತಿಭಟನೆ ನಡೆಸಿದ ಪ್ರಾಂತ ರೈತ ಸಂಘದ ಕಾರ್ಯಕರ್ತರು ರಯತರಿಗೆ ಸಮರ್ಪಕ ರಸಗೊಬ್ಬರ ಪೂರೈಕೆ ಮಾಡಿ ಎಂದು ಆಗ್ರಹಿಸಿದರು.

ಕೃಷಿ ವೆಚ್ಚ ಏರಿಕೆಯಾಗಿ ರೈತ ಕುಟುಂಬಗಳು ಸಾಲ ಮಾಡಿ ತೊಂದರೆಗೆ ಸಿಲುಕಿವೆ. ಆಹಾರ ಭದ್ರತೆ, ಸ್ವಾವಲಂಬನೆಗೆ ಶ್ರಮಿಸುತ್ತಿರುವ ರೈತರು ಆತ್ಮಸ್ಥೈರ್ಯ ಕಳೆದುಕೊಳ್ಳುತ್ತಿದ್ದಾರೆ. ಭೂಮಿ ಮತ್ತು ನೀರು ರೈತರ ಮೂಲಭೂತ ಅವಶ್ಯಕತೆ. ಇದನ್ನು ಪೂರೈಸುವ ಜವಾಬ್ದಾರಿ ಹೊಂದಿರುವ ಸರ್ಕಾರ ಗಳು ನುಣುಚಿ ಕೊಳ್ಳಲು ಯತ್ನಿಸುತ್ತಿವೆ ಎಂದು ದೂರಿದರು.ದೇಶಾದ್ಯಂತ ವ್ಯಾಪಕವಾಗಿರುವ ರಸಗೊಬ್ಬರ ಬಿಕ್ಕಟ್ಟು ರೈತರನ್ನು ಲೂಟಿ ಮಾಡುತ್ತಿದ್ದು, ಕೃಷಿಯನ್ನು ತೀವ್ರ ಬಿಕ್ಕಟ್ಟಿಗೆ ಸಿಲುಕಿಸುತ್ತಿವೆ. ಬಿತ್ತನೆ ಪ್ರಾರಂಭವಾಗುತ್ತಿದ್ದಂತೆ ರೈತರು ರಸಗೊಬ್ಬರ ತೀವ್ರ ಕೊರತೆ ಎದುರಿಸುತ್ತಿದ್ದಾರೆ. ಡಿ. ಕೆ.ಶಿವಕುಮಾರ, ಶಿವರಾಜಸಿಂಗ್ ಚವ್ಹಾಣರಿಗೆ ಕೃಷಿ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಮೂಲಕ ಮನವಿಪತ್ರ ಸಲ್ಲಿಸಿದರು.

**ಜೀವನ ವೆಚ್ಚ ಮತ್ತು ಬೇಸಾಯ ವೆಚ್ಚದ ಅಧಿಕ ಭಾರದಿಂದ ನರಳುತ್ತಿರುವ ರೈತರ ಗಾಯದ ಮೇಲೆ ಬರೆ ಎಳೆಯುವ ನಿರ್ಧಾರ ತಕ್ಷಣ ಕೈಬಿಡಬೇಕು. ರಾಜ್ಯ, ಕೇಂದ್ರ ಸರ್ಕಾರಗಳು ರೈತರ ಗೋಳಿಗೆ ಸ್ಪಂದಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಅನಿವಾರ್ಯವಾಗಲಿದೆ.**

**– ಶರಣಬಸಪ್ಪ ಮಮಶೆಟ್ಟಿ, ಅಧ್ಯಕ್ಷ, ಕರ್ನಾಟಕ ಪ್ರಾಂತ ರೈತ ಸಂಘ.**

### ವಲಸೆ ಕುಟುಂಬಗಳ ಮಾರ್ಗದರ್ಶಕಿ ಶಿಕ್ಷಕಿ ಪ್ರಮೀಳಾ ಹೇಳಿಕೆ

## ವಲಸೆ ಕಾರ್ಮಿಕರ ಮಕ್ಕಳಿಗೆ ಕನ್ನಡ ಕಲಿಸಿ, ಮುಖ್ಯವಾಹಿನಿಗೆ ತರುವ ಕಾರ್ಯ

**ಹಾಸನ, ಜೂ.11:** ಶಿಕ್ಷಣವೆಂದರೆ ಕೇವಲ ನಾಲ್ಕು ಗೋಡೆಗಳ ನಡುವೆ ಪಾಠ ಮಾಡುವುದಲ್ಲ, ಬದಲಾಗಿ ಭವಿಷ್ಯದ ಪ್ರಜೆಗಳನ್ನು ರೂಪಿಸುವುದು ಎಂಬುದನ್ನು ಹಾಸನ ಸರ್ಕಾರಿ ಶಾಲೆಯ ಶಿಕ್ಷಕಿಯೊಬ್ಬರು ಸಾಬೀತು ಪಡಿಸಿದ್ದಾರೆ.

ಉದ್ಯೋಗಾವಕಾಶಗಳನ್ನು ಅರಸಿ ಸಾವಿರಾರು ಕಿಲೋಮೀಟರ್ ದೂರದ ಬಿಹಾರದಿಂದ ಹಾಸನಕ್ಕೆ ವಲಸೆ ಬಂದಿರುವ ಕಾರ್ಮಿಕರ ಮಕ್ಕಳಿಗೆ ಇಲ್ಲಿನ ಭಾಷೆ, ಸಂಸ್ಕೃತಿ ಸಂಪೂರ್ಣ ಹೊಸದು. ಇಂತಹ ಪರಿಸ್ಥಿತಿಯಲ್ಲಿ ಈ ಮಕ್ಕಳಿಗೆ ಕನ್ನಡ ಕಲಿಸಿ, ಅವರನ್ನು ಮುಖ್ಯವಾಹಿನಿಗೆ ತರುವ ಒಂದು ಒಳ್ಳೆಯ ಕೆಲಸವನ್ನು ಹಾಸನದ ಪೀರುಮನಹಳ್ಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಎಸ್.ಪಿ. ಪ್ರಮೀಳಾ ಮಾಡುತ್ತಿದ್ದಾರೆ.

ಪ್ರತಿದಿನ ಬೆಳಿಗ್ಗೆ ಪ್ರಮೀಳಾ ಅವರು ಕೆಲಸಕ್ಕೆ ಹೊರಡುವಾಗ, ವಲಸೆ ಕುಟುಂಬಗಳ ಎಂಟು ಮಕ್ಕಳು ಅವರೊಂದಿಗೆ ಆಟೋರಿಕ್ಷಾದಲ್ಲಿ ಶಾಲೆಗೆ ತೆರಳುತ್ತಾರೆ. ಪ್ರಮೀಳಾ ಅವರ ಮನೆಗೂ ಹಾಗೂ ಪೀರುಮನಹಳ್ಳಿಯ ಶಾಲೆಗೂ ಸುಮಾರು ಎಂಟು ಕಿಲೋಮೀಟರ್ ಅಂತರವಿದೆ. ಆದರೂ, ಈ ಮಕ್ಕಳನ್ನು ಪ್ರತಿದಿನ ತಮ್ಮೊಂದಿಗೇ ಆಟೋದಲ್ಲಿ ಕರೆದೊಯ್ದು, ಸುರಕ್ಷಿತವಾಗಿ ಶಾಲೆಗೆ ತಲುಪಿಸಿ, ವಿದ್ಯಾಭ್ಯಾಸ ನೀಡುವ ಜವಾಬ್ದಾರಿಯನ್ನು ಅವರು ಅತ್ಯಂತ ಪ್ರೀತಿಯಿಂದ ಹೊತ್ತುಕೊಂಡಿದ್ದಾರೆ. ಕಳೆದ ಮೂರು ವರ್ಷಗಳಿಂದ ಪ್ರಮೀಳಾ ಅವರು ಕೇವಲ ಸರ್ಕಾರಿ ಶಾಲೆಯ ಶಿಕ್ಷಕಿಯಾಗಿ ಮಾತ್ರವಲ್ಲದೆ, ಈ ವಲಸೆ ಕುಟುಂಬಗಳ ಮಕ್ಕಳಿಗೆ ಮಾರ್ಗದರ್ಶಕಿಯಾಗಿ ಹಾಗೂ ಪೋಷಕಿಯಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.



ತಮ್ಮ 27 ವರ್ಷಗಳ ಸುದೀರ್ಘ ವೃತ್ತಿ ಅನುಭವವನ್ನು ಬಳಸಿಕೊಂಡು, ಬಿಹಾರದ ಮಕ್ಕಳಿಗೆ ಎದುರಾಗಿದ್ದ ಭಾಷಾ ಸಮಸ್ಯೆಯನ್ನು ನಿವಾರಿಸುವಲ್ಲಿ ಅವರು ಯಶಸ್ವಿಯಾಗಿದ್ದಾರೆ. ಹಿಂದಿ ಮತ್ತು ಭೋಜ್‌ಪುರಿ ಮಾತನಾಡುವ ಈ ಮಕ್ಕಳಿಗೆ ಕನ್ನಡದ ಅಕ್ಷರಗಳನ್ನು ಕಲಿಸಿ, ಔಪಚಾರಿಕ ಶಿಕ್ಷಣ ವ್ಯವಸ್ಥೆಯೊಳಗೆ ಅವರನ್ನು ತರುವಲ್ಲಿ ಪ್ರಮೀಳಾ ಅವರ ಶ್ರಮ ಅಪಾರವಾಗಿದೆ.

ಆರಂಭದಲ್ಲಿ ಕನ್ನಡ ಭಾಷೆ, ಉಚ್ಚಾರಣೆ ಅರ್ಥಮಾಡಿಕೊಳ್ಳಲು ಕಷ್ಟಪಡುತ್ತಿದ್ದ ಮಕ್ಕಳು, ಈಗ ಶಿಕ್ಷಕಿಯ ಸತತ ಪ್ರಯತ್ನ ಹಾಗೂ ಪ್ರೀತಿಯ ಪಾಠದಿಂದಾಗಿ ಕನ್ನಡವನ್ನು ಸ್ಪಷ್ಟವಾಗಿ ಓದಲು ಮತ್ತು ಮಾತನಾಡಲು ಕಲಿಯುತ್ತಿದ್ದಾರೆ. ರಾಜ್ಯದ ಇತರ ಶಾಲೆಗಳಿಗೂ ಪ್ರಮೀಳಾ ಅವರ ಈ ಕಾರ್ಯ ಮಾದರಿಯಾಗಿದೆ. ಇದು ವಲಸೆ ಕಾರ್ಮಿಕರ ಕುಟುಂಬಗಳಲ್ಲಿ ತಮ್ಮ ಮಕ್ಕಳ ಭವಿಷ್ಯದ ಬಗ್ಗೆ ಹೊಸ ಭರವಸೆಯನ್ನು ಮೂಡಿಸಿದೆ.

ಕಾಡುತ್ತಿದೆ ಕಡ್ಡಾಯ ದಾಖಲೆಗಳ ಆತಂಕ –ಆದರೆ, ಈ ಶೈಕ್ಷಣಿಕ ಪ್ರಗತಿ ಮತ್ತು ಸಂತಸದ ನಡುವೆಯೂ ಶಿಕ್ಷಕಿ ಪ್ರಮೀಳಾ ಅವರನ್ನು ಕಾಡುತ್ತಿರುವ ಒಂದು ಬಹುದೊಡ್ಡ ಆತಂಕವೆಂದರೆ, ಮಕ್ಕಳ ಭವಿಷ್ಯಕ್ಕೆ ಅಡ್ಡಿಯಾಗಿರುವ ಕಡ್ಡಾಯ ದಾಖಲೆಗಳ ಕೊರತೆ. ಹೌದು, ಬಹುತೇಕ ವಲಸೆ ಕಾರ್ಮಿಕರ ಮಕ್ಕಳ ಬಳಿ ಸೂಕ್ತವಾದ ಗುರುತಿನ ಚೀಟಿಗಳಿಲ್ಲ. ಪ್ರಮುಖವಾಗಿ ಈ ಮಕ್ಕಳ ಬಳಿ ಆಧಾರ್ ಕಾರ್ಡ್ ಇಲ್ಲದಿರುವುದು ಮುಂದಿನ ದಿನಗಳಲ್ಲಿ ದೊಡ್ಡ ಸಮಸ್ಯೆಯಾಗಿ ಪರಿಣಮಿಸಲಿದೆ. ಪ್ರಾಥಮಿಕ ಶಿಕ್ಷಣ ಪೂರೈಸಿದ ಬಳಿಕ, ಮುಂದಿನ ಹೈಸ್ಕೂಲ್ ತರಗತಿಗಳಿಗೆ ಪ್ರವೇಶ ಪಡೆಯಲು ಮತ್ತು ಭವಿಷ್ಯದಲ್ಲಿ ಎಸ್‌ಎಸ್‌ಎಲ್‌ಸಿ ಬೋರ್ಡ್ ಪರೀಕ್ಷೆ ಬರೆಯಲು ಆಧಾರ್ ಕಾರ್ಡ್ ಕಡ್ಡಾಯವಾಗಿದೆ.

ಸಕಾಲದಲ್ಲಿ ಈ ಮಕ್ಕಳಿಗೆ ಅಗತ್ಯ ದಾಖಲೆಗಳನ್ನು ಒದಗಿಸದಿದ್ದರೆ, ಭರವಸೆಯಿಂದ ಶಾಲೆಗೆ ಬರುತ್ತಿರುವ ಈ ಮಕ್ಕಳು ಅನಿವಾರ್ಯವಾಗಿ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುವ ಸಾಧ್ಯತೆಯಿದೆ ಎಂಬುದು ಶಿಕ್ಷಕಿಯ ಅತಿದೊಡ್ಡ ಕಳವಳವಾಗಿದೆ. ದಿನಗೂಲಿ ನಂಬಿ ಬದುಕುವ ವಲಸೆ ಜೀವನದ ಕಾರಣದಿಂದಾಗಿ ಪೋಷಕರಿಗೆ ಸರ್ಕಾರಿ ಕಚೇರಿಗಳಿಗೆ ಅಲೆದಾಡಿ ದಾಖಲೆಗಳನ್ನು ಮಾಡಿಸಲು ಸಾಧ್ಯವಾಗುತ್ತಿಲ್ಲ. ಒಂದು ವೇಳೆ ಈ ಮಕ್ಕಳು ಶಾಲೆಯಿಂದ ಹೊರಗುಳಿದರೆ, ಅವರು ಮತ್ತೆ ಜಮೀನುಗಳಲ್ಲಿ ಅಥವಾ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಾಲಕಾರ್ಮಿಕರಾಗಿ ದುಡಿಯುವ ಅಪಾಯವಿದೆ.

ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಹಾಗೂ ಹಾಸನ ಜಿಲ್ಲಾಡಳಿತ ವಿಶೇಷ ಗಮನ ಹರಿಸಬೇಕಿದೆ. ವಲಸೆ ಕಾರ್ಮಿಕರ ಮಕ್ಕಳಿಗೆ ಶಾಲಾ ಮಟ್ಟದಲ್ಲೇ ಅಥವಾ ಸ್ಥಳದಲ್ಲೇ ಗುರುತಿನ ಚೀಟಿ ಮಾಡಿಕೊಡುವಂತಹ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳುವ ತುರ್ತು ಅವಶ್ಯಕತೆಯಿದೆ. ನಿಸ್ವಾರ್ಥದಿಂದ ಸೇವೆ ಸಲ್ಲಿಸುತ್ತಿರುವ ಪ್ರಮೀಳಾ ಅವರಂತಹ ಶಿಕ್ಷಕಿಯರ ಶ್ರಮ ಸಾರ್ಥಕವಾಗ ಬೇಕಾದರೆ, ಈ ಮಕ್ಕಳಿಗೆ ಶಿಕ್ಷಣ ಮುಂದುವರಿಸಲು ಇರುವ ತಾಂತ್ರಿಕ ಹಾಗೂ ಆಡಳಿತಾತ್ಮಕ ಅಡೆತಡೆಗಳನ್ನು ಸರ್ಕಾರವೇ ಖುದ್ದಾಗಿ ನಿವಾರಿಸಬೇಕಿದೆ. ಭಾಷೆಯ ಗಡಿ ದಾಟಿ ಅತ್ಯುತ್ಸಾಹದಿಂದ ಕಲಿಯುತ್ತಿರುವ ಈ ಪುಟಾಣಿಗಳ ಶೈಕ್ಷಣಿಕ ಭವಿಷ್ಯವು ಕೇವಲ ಒಂದು ದಾಖಲೆಯ ಕೊರತೆಯಿಂದಾಗಿ ಕಲಿಕೆ ನಿಲ್ಲದಂತೆ ನೋಡಿಕೊಳ್ಳುವ ದೊಡ್ಡ ಜವಬ್ದಾರಿ ಸಮಾಜದ ಮೇಲಿದೆ.

ದೆಹಲಿ ಕರ್ನಾಟಕ ಸಂಘ (ರಿ)
ರಾವ್ ತುಲಾರಾಮ್ ಮಾರ್ಗ, ಸೆಕ್ಟರ್–12, ಆರ್.ಕೆ. ಪುರಂ, ನವದೆಹಲಿ–110022

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀಮತಿ ಕುಮಾರಿ ಎಚ್.ಎನ್.

ದೆಹಲಿ ಕರ್ನಾಟಕ ಸಂಘದ ಆಜೀವ ಸದಸ್ಯರಾದ ಶ್ರೀಮತಿ ಕುಮಾರಿ ಎಚ್.ಎನ್. ಅವರು ಇಂದು (07.06.2026) ಹೃದಯಾಘಾತದಿಂದ ವಿಧಿವಶರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಇವರು ಕರ್ನಾಟಕ ಭವನದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ಅನಂತ ಜಿ. ಅವರ ಧರ್ಮಪತ್ನಿ.


ಸಂಘದ ಕಾರ್ಯಕಾರಿ ಸಮಿತಿಗೆ ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಇವರು ಸಂಘದ ಕಾರ್ಯ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದರು. ದೆಹಲಿ ಕರ್ನಾಟಕ ಸಂಘದ ಬೆಳವಣಿಗೆಗೆ ವಿಶೇಷ ಆಸಕ್ತಿಯನ್ನು ಹೊಂದಿದ್ದರು.

ಮೃತರ ಆತ್ಮಕ್ಕೆ ಮೋಕ್ಷ ಸಿಗಲಿ, ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಕುಟುಂಬ ವರ್ಗಕ್ಕೆ ದೇವರು ದಯಪಾಲಿಸಲಿ ಭಗವಂತನಲ್ಲಿ ಪ್ರಾರ್ಥನೆ.

ರೇಣುಕುಮಾರ್ ಆರ್.
ಅಧ್ಯಕ್ಷರು

ರಾಧಾಕೃಷ್ಣ
ಪ್ರಧಾನ ಕಾರ್ಯದರ್ಶಿ

### ತಿರುಮಲ: ಶ್ರೀರಾಮಚಂದ್ರನ ಗೋಕುಲಾನಂದರ ದಿವ್ಯ ದರ್ಶನ



ತಿರುಪತಿ, ಜೂ. 11. ಗುರುವಾರ ಬೆಳಿಗ್ಗೆ ನಡೆದ ಕರ್ವೇತಿನಗರ ಶ್ರೀ ರುಕ್ಮಿಣಿ–ಸತ್ಯಭಾಮ ಸಮೇತ ಶ್ರೀ ವೇಣುಗೋಪಾಲಸ್ವಾಮಿಯ ವಾರ್ಷಿಕ ಬ್ರಹ್ಮೋತ್ಸವಗಳು, ಹನುಮಾನ್ ವಾಹನ ಸೇವೆಯು ಭಕ್ತರನ್ನು ಭಕ್ತಿಭಾವದಿಂದ ಮೋಡಿ ಮಾಡಿತು. ಶ್ರೀ ರಾಮಚಂದ್ರನ ವೇಷ ಧರಿಸಿದ ಸ್ವಾಮಿಯು ಹನುಮಾನ್ ವಾಹನದ ಮೇಲೆ ಸವಾರಿ ಮಾಡುತ್ತಾ ಭಕ್ತರಿಗೆ ದೈವಿಕ ದರ್ಶನ ನೀಡಿದರು. ಬ್ರಹ್ಮೋತ್ಸವದ ಆರನೇ ದಿನದಂದು, ಹನುಮನ ಮೇಲೆ ಕುಳಿತ ಶ್ರೀ ವೇಣುಗೋಪಾಲ ಸ್ವಾಮಿಯು, ತ್ರೇತಾಯುಗದಲ್ಲಿ ವಿಷ್ಣುವು ಶ್ರೀ ರಾಮನಾಗಿ ಅವತಾರ ತಾಳಿದ ಪರಮಾತ್ಮನ ಘಟನೆಯನ್ನು ಸ್ಮರಿಸಿದರು. ಭಗವಂತನ ದಿವ್ಯ ಶುಭ ಪ್ರತಿಮೆಯ ದರ್ಶನ ಪಡೆದ ಭಕ್ತರು ಸಂತೋಷದಿಂದ ಮುಳುಗಿದರು.

# ರಾಯಚೂರಿಗೆ ಏಮ್ಸ್ ಮಂಜೂರು ಮಾಡಿ: ಕೇಂದ್ರ ಸಚಿವರಿಗೆ ಮನವಿ

**ರಾಯಚೂರು, ಜೂ. 11:** ಕೇಂದ್ರ ಸಚಿವರಿಗೆ ಮನವರಿಕೆ ಮಾಡಿ ರಾಯಚೂರಿಗೆ ಏಮ್ಸ್ ಮಂಜೂರು ಮಾಡಿಸಬೇಕು ಎಂದು ಒತ್ತಾಯಿಸಿ ಏಮ್ಸ್ ಹೋರಾಟ ಸಮಿತಿಯ ನಿಯೋಗವು ಕೇಂದ್ರ ಪ್ರಭಾರ ಅಧಿಕಾರಿ ಉಜ್ವಲ್ ಕುಮಾರ್ ಘೋಷ್ ಅವರನ್ನು ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಿತು.



ರಾಯಚೂರಿಗೆ ಆಗಮಿಸಿದ್ದ ಕೇಂದ್ರ ಪ್ರಭಾರ ಅಧಿಕಾರಿ ಉಜ್ವಲ ಕುಮಾರ ಘೋಷ್ ಅವರಿಗೆ ಭೇಟಿಯಾದ ಏಮ್ಸ್ ಹೋರಾಟಡ ಸಮಿತಿಯ ನಿಯೋಗವು, ರಾಯಚೂರಿಗೆ ಏಮ್ಸ್ ಮಂಜೂರು ಮಡುವಂತೆ ಆಗ್ರಹಿಸಿ ಮನವಿ ಸಲ್ಲಿಸಿತು.

ಏಮ್ಸ್ ಮಂಜೂರು ಮಾಡುವಂತೆ ಒತ್ತಾಯಿಸಿ ಸುದೀರ್ಘ 1,488 ದಿನಗಳಿಂದ ಹೋರಾಟ ನಡೆಯುತ್ತಿರುವ ಬಗ್ಗೆ ವಿವರಿಸಿದರು. ಪ್ರಾದೇಶಿಕ ಅಸಮತೋಲನೆ ನಿವಾರಣೆಗಾಗಿ, ವಿಶೇಷ ಸ್ಥಾನಮಾನಕ್ಕೆ ಒಳಪಟ್ಟ, ಐಐಟಿಯಿಂದ ವಂಚಿತಗೊಂಡ, ಮಹತ್ವಕಾಂಕ್ಷಿ ಜಿಲ್ಲೆಗೆ ಏಮ್ಸ್ ಆರೋಗ್ಯ ಸಂಸ್ಥೆಯನ್ನು ಮಂಜೂರು ಮಾಡುವಂತೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಯುತ್ತಿದೆ ಎಂದು ತಿಳಿಸಿದರು.

ರಾಜ್ಯದ ಮುಖ್ಯಮಂತ್ರಿಗಳು ಹಲವಾರು ಪತ್ರಗಳನ್ನು ಬರೆದಿದ್ದಾರೆ. ಖುದ್ದಾಗಿ ಪ್ರಧಾನಮಂತ್ರಿ ಅವರನ್ನು ಭೇಟಿ ಮಾಡಿ ಶಿಫಾರಸು ಮಾಡಿದ್ದಾರೆ. ಕೇಂದ್ರ ಸರ್ಕಾರ ಸುದೀರ್ಘವಾಗಿ ನಡೆಯುತ್ತಿರುವ ಹೋರಾಟಕ್ಕಾಗಲಿ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಮಹತ್ವದ ಶಿಫಾರಸುಗಳಿಗಾಗಲಿ ಪೂರಕವಾಗಿ ಸ್ಪಂದಿಸುತ್ತಿಲ್ಲ ಎಂದು ಅಸಮಾಧಾನ ಹೊರಹಾಕಿದರು.ಕಲ್ಯಾಣ ಕರ್ನಾಟಕ ಪ್ರದೇಶದ ಹಿಂದುಳಿದ, ರೋಗಪೀಡಿತ ರಾಯಚೂರಿಗೆ ಏಮ್ಸ್ ಆರೋಗ್ಯ ಸಂಸ್ಥೆಯನ್ನು ಮಂಜೂರು ಮಾಡುವ ಬಗ್ಗೆ ಸಂಬಂಧಿಸಿದ ಕೇಂದ್ರ ಸಚಿವಾಲಯದೊಂದಿಗೆ ಚರ್ಚಿಸಿ ಮನವರಿಕೆ ಮಾಡಿ ಆದಷ್ಟು ಶೀಘ್ರದಲ್ಲಿಯೇ ರಾಯಚೂರಿಗೆ ಏಮ್ಸ್ ಸಂಸ್ಥೆಯನ್ನು ಘೋಷಿಸಬೇಕು ಎಂದು ಒತ್ತಾಯಿಸಿದರು.

ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಪ್ರಭಾರಿ ಅಧಿಕಾರಿ ಉಜ್ವಲ್ ಕುಮಾರ್ ಘೋಷ್ ಅವರು, ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸಲು ಅಗತ್ಯ ಇರುವ ಎಲ್ಲ ಲಭ್ಯಗಳು ಲಭ್ಯ ಇರುವುದು ನನ್ನ ಗಮನಕ್ಕೆ ಬಂದಿದೆ, ಶೀಘ್ರದಲ್ಲಿಯೇ ಸಂಬಂಧಿಸಿದ ಕೇಂದ್ರ ಸಚಿವರೊಂದಿಗೆ ವಿವರವಾಗಿ ಚರ್ಚಿಸಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಭರವಸೆ ನೀಡಿದರು.



ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾದ ಪ್ರೊ.ಮಾ.ನಾಗರಾಜ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ.ವಿಜಯೇಂದ್ರ ಗುರುವಾರ ಪಕ್ಷದ ಕಚೇರಿ ಜಗನ್ನಾಥಭವನದಲ್ಲಿ ಆತ್ಮೀಯವಾಗಿ ಅಭಿನಂದಿಸಿದರು. ರಾಜ್ಯಘಟಕದ ಉಸ್ತುವಾರಿ ರಾಧಾಮೋಹನದಾಸ್ ಅಗರ್‌ವಾಲ್ ಹಾಗೂ ಇತರರು ಇದ್ದರು.

# ಪರೀಕ್ಷೆ ಫಲಿತಾಂಶ ಹಗರಣ ಖಂಡಿಸುತ್ತಾ ಕ್ರಮಕೈಗೊಳ್ಳಲು ಎಬಿವಿಪಿ ಆಗ್ರಹ




**ಬಳ್ಳಾರಿ, ಜೂ.11:** ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯವು ಭ್ರಷ್ಟಾಚಾರಿಗಳ ತವರು ಮನೆಯಾಗಿದೆ. ಪರೀಕ್ಷಾ ಫಲಿತಾಂಶವನ್ನು ಪ್ರಕಟಿಸಿದ ನಂತರವೂ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಂದ ಹಣ ಪಡೆದು, ಅವರನ್ನು ಉತ್ತೀರ್ಣಗೊಳಿಸುತ್ತಿರುವುದು ಕಂಡುಬಂದಿರುತ್ತದೆ ಎಂದು ಎಬಿವಿಪಿ ಆರೋಪಿಸಿದೆ.

ಈ ಹಗರಣದಲ್ಲಿ ರಿಯಾಜ್, ವೆಂಕಟೇಶ್ ವನದುರ್ಗ, ಯಲ್ಲಾಲಿಂಗ, ಚಂದ್ರಮೋಹನ್, ಉಮೇಶ್ ಹಾಗೂ ಇತರರು ಒಳಗೊಂಡಂತೆ ಪರೀಕ್ಷೆ ಫಲಿತಾಂಶ ಬಿಡುಗಡೆ ಮಾಡುವ ಸಮಯದಲ್ಲಿ ಪಿ.ಜಿ. ಅಥವಾ ಡಿಗ್ರಿ ವಿದ್ಯಾರ್ಥಿಗಳ ಕೋಡಿಂಗ್–ಡಿಕೋಡಿಂಗ್ ಅಂಕಗಳನ್ನು ಅಂಕಗಳನ್ನು ನಮೂದಿಸುವುದು ಇವರೇ ನೋಡಿಕೊಳ್ಳುತ್ತಾರೆ. ಈ ಅವ್ಯವಹಾರವು ತುಂಬಾ ದಿನಗಳಿಂದ ನಡೆಯುತ್ತಿದ್ದು, ಈಗ ಸಾಕ್ಷ್ಯಾಧಾರಗಳ ಸಮೇತ ಬೆಳಕಿಗೆ ಬಂದಿದೆ. ವೆಂಕಟೇಶ ವನದುರ್ಗ, ರಿಯಾಜ್ ಇವರನ್ನೊಳಗೊಂಡಂತೆ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಹಣ ಪಡೆದು ಉತ್ತೀರ್ಣಗೊಳಿಸಿದ್ದಾರೆ.

ಆದರೆ ಇವರು ಮಾಡುತ್ತಿರುವ ಈ ಅವ್ಯವಹಾರದಿಂದ ಬುದ್ಧಿವಂತ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ. ಹೀಗೆ ಹಣದಿಂದ ಪದವಿಯನ್ನು ಪಡೆದುಕೊಳ್ಳುವುದಾದರೆ ದಿನವಿಡೀ ಕಾಲೇಜುಗಳಿಗೆ ಬಂದು ಪಾಠ ಕೇಳಿ ಪರೀಕ್ಷೆ ಬರೆದ ವಿದ್ಯಾರ್ಥಿಗಳ ಗತಿ ಏನು?

ಮುಂದುವರೆದು, ವಿಶ್ವವಿದ್ಯಾಲಯದ ಪರೀಕ್ಷಾಂಗ ವಿಭಾಗದ ಅಧಿಕಾರಿಗಳು ಈವರೆಗೂ ಪರೀಕ್ಷಾ ಕಾರ್ಯಗಳಿಗೆ ಇವರುಗಳನ್ನೇ ನೇಮಿಸಿರುತ್ತಾರೆ. ಹಾಗಾಗಿ ಈ ವ್ಯವಹಾರದಲ್ಲಿ ಭಾಗಿಗಳಾದ ಎಲ್ಲಾ ಭ್ರಷ್ಟಾಚಾರಿಗಳನ್ನು ಕೂಡಲೇ ಅಮಾನತ್ತುಗೊಳಿಸಿ, ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಮಾನ್ಯ ಕುಲಪತಿಗಳು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ ಇವರಿಗೆ ಮನವಿ ಸಲಿಸಿ ಅಭಾವಿಪ ಬಳ್ಳಾರಿ ಆಗ್ರಹಿಸಲಾಯಿತು.

# ಎಂಟು ತಿಂಗಳಿಂದ ಸ್ಥಗಿತಗೊಂಡಿದ್ದ ಕಲಬುರಗಿ ಬೆಂಗಳೂರು ವಿಮಾನ ಸೇವೆ ಪುನರಾರಂಭಕ್ಕೆ ಚಾಲನೆ

**ಕಲಬುರಗಿ, ಜೂ. 11:** ಕಲಬುರಗಿ–ಬೆಂಗಳೂರು ನಡುವೆ ವಿಮಾನ ಸೇವೆ ಪುನರಾರಂಭಕ್ಕೆ ಶಾಸಕ ಎಂ.ವೈ.ಪಾಟೀಲ್ ಚಾಲನೆ ನೀಡಿದರು. ಸ್ಟಾರ್ ಏರ್ ಸಂಸ್ಥೆಯಿಂದ ವಿಮಾನ ಯಾನ ಸೇವೆ ಪುನರಾರಂಭವಾಗಿದ್ದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಲೋಹದ ಹಕ್ಕಿ ಹಾರಾಟಕ್ಕೆ ಆರ್ಥಿಕ ನೆರವು ನೀಡುವ ಮೂಲಕ ವಿಮಾನಯಾನ ಸೇವೆ ಮತ್ತೆ ಆರಂಭಕ್ಕೆ ಕಾರಣವಾಗಿದೆ. ಎಂಟು ತಿಂಗಳ ಹಿಂದೆ ಸ್ಥಗಿತಗೊಂಡಿದ್ದ ವಿಮಾನ ಐವತ್ತು ಪ್ರಯಾಣಿಕರನ್ನು ಹೊತ್ತು ಬೆಂಗಳೂರಿಗೆ ಪ್ರಯಾಣಿಸಿತು.

ಕಲಬುರಗಿ ವಿಮಾನ ನಿಲ್ದಾಣದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಕರ್ನಾಟಕ ರೇಷ್ಮೆ ಉದ್ಯಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತೀಮಾ ಮತ್ತು ಅಫಜಲಪೂರ ಶಾಸಕ ಎಂ.ವೈ.ಪಾಟೀಲ ಅವರು ಸಾಂಕೇತಿಕವಾಗಿ ಸ್ಟಾರ್ ಏರ್ ವಿಮಾನ ಸಂಚಾರಕ್ಕೆ ಇಲ್ಲಿ ಕೇಕ್ ಕತ್ತರಿಸಿದಲ್ಲದೆ ಮೊದಲ ದಿನದ ಟ್ರಿಪ್‌ನಲ್ಲಿ ಪ್ರಯಾಣ ಮಾಡಲಿರುವ ಕೆ.ಕೆ.ಸಿ.ಸಿ.ಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ ಅವರ ಕುಟುಂಬದ ಸದ್ಯಸರಿಗೆ ಪ್ರಯಾಣದ ಟಿಕೆಟ್ ವಿತರಿಸುವ ಮೂಲಕ ವಿಮಾನ ಸೇವೆಗೆ ಚಾಲನೆ ನೀಡಿದರು.




ಬೆಂಗಳೂರಿನಿಂದ 117 ಸಂಖ್ಯೆಯ 76 ಆಸನವುಳ್ಳ ಸ್ಟಾರ್ ಏರ್ ವಿಮಾನವು ಸುಮಾರು 74 ಜನ ಪ್ರಯಾಣಿಕರನ್ನು ಹೊತ್ತ ವಿಮಾನವು ಬೆಳಿಗ್ಗೆ ಬೆಂಗಳೂರಿನಿಂದ 6.30ಕ್ಕೆ ಹೊರಟು 7.40ಕ್ಕೆ ಕಲಬುರಗಿ ವಿಮಾನ ನಿಲ್ದಾಣದಕ್ಕೆ ಬಂದಿಳಿತು. ಅದೇ ರೀತಿ ಕಲಬುರಗಿಯಿಂದ 117 ಸಂಖ್ಯೆಯ ಸ್ಟಾರ್ ಏರ್ ವಿಮಾನವು ಬೆಳಿಗ್ಗೆ 8.10 ಗಂಟೆಗೆ 50 ಜನರನ್ನು ಹೊತ್ತು ಬೆಂಗಳೂರಿಗೆ ಪ್ರಯಾಣ ಬೆಳೆಸಿತು. ಇದರಿಂದ ಮತ್ತೆ ಅಗಸದಲ್ಲಿ ಪ್ರಯಾಣಿಸುವ ಸೌಭಾಗ್ಯ ಸ್ಥಳೀಯರಿಗೆ ಒಲಿದು ಬಂದಿದೆ.

**ಪ್ರವಾಸೋದ್ಯಮ, ಹೂಡಿಕೆಗೆ ಸಹಕಾರಿ:** ಅತ್ತ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೆಂಗಳೂರು–ಕಲಬುರಗಿ ನಡುವಿನ ಮೊದಲ ಸ್ಟಾರ್ ಏರ್ ಹಾರಾಟಕ್ಕೆ ಕೇಕ್ ಕತ್ತರಿಸುವ ಮೂಲಕ ಚಾಲನೆ ನೀಡಿದ ಕೆ.ಕೆ.ಆರ್.ಡಿ.ಬಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಅವರು ಮಾತನಾಡಿ, ಪ್ರದೇಶದಲ್ಲಿನ ಪ್ರವಾಸೋದ್ಯಮ, ಆರ್ಥಿಕ ವಹಿವಾಟು, ಹೂಡಿಕೆಗೆ ವಿಮಾನ ಸೇವೆ ಪೂರಕವಾಗಿ ಸಹಕಾರಿಯಾಗಲಿದೆ. ಕಳೆದ ಹಲವಾರು ತಿಂಗಳಿನಿಂದ ಕಲಬುರಗಿ, ಬೀದರಗೆ ಬೆಂಗಳೂರಿನಿಂದ ವಿಮಾನ ಸೇವೆ ಸ್ಥಗಿತಗೊಂಡಿತ್ತು. ಕಳೆದ ಮಾರ್ಚ್ ಮಾಹೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸಚಿವರೆಲ್ಲರು ಸಭೆ ನಡೆಸಿ ಮತ್ತೆ ಬೆಂಗಳೂರು–ಕಲಬುರಗಿ, ಬೆಂಗಳೂರು–ಬೀದರ ನಡುವೆ ವಿಮಾನ ಸೇವೆ ಪ್ರಾರಂಭಿಸಲು ನಿರ್ಧರಿಸಿದ್ದರಿಂದ ಇದಕ್ಕೆ ಅಂದಾಜು ಮೊತ್ತ ಒಟ್ಟು 28.44 ಕೋಟಿ ರೂ. ತಗುಲಬಹುದೆಂದು ಅಂದಾಜಿಸಿತ್ತು. ಇದರಲ್ಲಿ ಮಂಡಳಿಯು ಶೇ.80ರಷ್ಟು ಅಂದರೆ ತಲಾ 22.76 ಕೋಟಿ ರೂ. ನೆರವು ನೀಡಿದ್ದು ಉಳಿದ ಶೇ.20ರಷ್ಟು ಮೊತ್ತ ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಭರಿಸಲಿದೆ ಎಂದಿದ್ದಾರೆ.

**ಪ್ರಯಾಣಿಕರಿಂದ ಉತ್ತಮ ಸ್ಪಂದನೆ:** ಸ್ಟಾರ್ ಏರ್ ಸಂಸ್ಥೆಯ ಏರ್ಪೋರ್ಟ್ ಹೆಡ್ ಸಿ.ಎ.ಬೋಪಣ್ಣ ಮಾತನಾಡಿ ಕಲಬುರಗಿ–ಬೆಂಗಳೂರು ನಡುವೆ ವಿಮಾನಯಾನ ಸೇವೆಗೆ ಪ್ರಯಾಣಿಕರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಮೊದಲ ದಿನವೇ ಬೆಂಗಳೂರಿ ನಿಂದ ಶೇ.90ರಷ್ಟು ಮತ್ತು ಕಲಬುರಗಿಯಿಂದ ಶೇ.65ರಷ್ಟು ಟಿಕೆಟ್ ಬುಕ್ ಆಗಿವೆ. ಪ್ರತಿ ಗಂಟೆಗೆ 850 ಕಿ.ಮೀ ಕ್ರಮಿಸುವ 76 ಮತ್ತು 88 ಆಸನ ಸಾಮರ್ಥ್ಯದ ಫಾಸ್ಟೆಸ್ಟ್ ಪ್ರಯಾಣಿಕ ಸ್ನೇಹಿ ವಿಮಾನಗಳು ಇಲ್ಲಿ ಸಂಚಾರ ಮಾಡಲಿವೆ. ಪ್ರಸ್ತುತ ನಮ್ಮ ಸಂಸ್ಥೆಯಲ್ಲಿ 9 ವಿಮಾನಗಳಿದ್ದು, ಮುಂದಿನ ಜುಲೈ, ಅಗಸ್ಟ್ ಮಾಹೆಯಲ್ಲಿ ಇನ್ನೆರಡು ವಿಮಾನ ಬರಲಿವೆ. ಕಲಬುರಗಿ–ಮುಂಬೈ ನಡುವೆ ವಿಮಾನ ಸೇವೆಗೆ ಬೇಡಿಕೆ ಇದ್ದು, ಪ್ರಸ್ತುತ ಮದ್ಯಪ್ರಾಚ್ಯದಲ್ಲಿ ಯುದ್ಧದ ಕಾರಣ ತೈಲ ಬೆಲೆ ಹೆಚ್ಚಳವಾಗಿದ್ದು, ಪರಿಸ್ಥಿತಿ ನಿಯಂತ್ರಣಕ್ಕೆ ಬಂದಲ್ಲಿ ಮುಂದೆ ಸೇವೆ ಆರಂಭಕ್ಕೆ ಯೋಚನೆ ಮಾಡಲಾಗುವುದು. ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ ರಾಜ್ಯ ಸರ್ಕಾರ ಮತ್ತು ಕೆ.ಕೆ.ಆರ್.ಡಿ.ಬಿ ಮಂಡಳಿಯು ಹಲವಾರು ತಿಂಗಳಿನಿಂದ ಸ್ಥಗಿತ ಗೊಂಡಿದ್ದ ವಿಮಾನ ಸೇವೆ ಮರು ಆರಂಭಕ್ಕೆ ಕಾರಣವಾಗಿದೆ. ವಿಶೇಷವಾಗಿ ಮಂಡಳಿಯು ಆರ್ಥಿಕ ಸಹಾಯ ನೀಡಿದೆ. ವಾಯುಯಾನ ಸೇವೆ ಆರಂಭದಿಂದ ಮುಂದಿನ ದಿನದಲ್ಲಿ ಪ್ರದೇಶದಲ್ಲಿ ಪ್ರವಾಸೋದ್ಯಮ, ಹೂಡಿಕೆಗೆ ಸಹಕಾರಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

## ಗಾಣಗಾಪೂರಕ್ಕೆ ಜಿಲ್ಲಾಧಿಕಾರಿ ಭೇಟಿ,

# ದತ್ತ ಕ್ಷೇತ್ರದಲ್ಲಿನ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

**ಕಲಬುರಗಿ, ಜೂ. 11:** ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಜಿಲ್ಲೆಯ ಶ್ರೀ ದತ್ತನ ಸುಕ್ಷೇತ್ರವಾದ ಐತಿಹಾಸಿಕ ದೇವಲ ಗಾಣಗಾಗಪುರ ಕ್ಷೇತ್ರಕ್ಕೆ ಭೇಟಿ ನೀಡಿ ದೇವಸ್ಥಾನ ಮತ್ತ ಅದರ ಸುತ್ತುಮುತ್ತಲು ನಡೆಯುತ್ತಿರುವ ವಿವಿಧ ಪ್ರವಾಸಿ ಮೂಲಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು ಪರಿಶೀಲನೆ ನಡೆಸಿದರು.



ದತ್ತನ ಸನ್ನಿಧಾನಕ್ಕೆ ಭೇಟಿ ನೀಡಿ ದರ್ಶನ ಪಡೆದ ಜಿಲ್ಲಾಧಿಕಾರಗಿಳು ಆರತಿ ಬೆಳಗಿದ ನಂತರ ದೇವಸ್ಥಾನ ಸುತ್ತ ನಡೆಯುತ್ತಿರುವ ಕಾಮಗಾರಿಗಳನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೆರೆ ರಾಜಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಬರುವ ಭಕ್ತಾದಿಗಳಿಗೆ ಇಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಬೇಕು. ಕ್ಷೇತ್ರದಾದ್ಯಂತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ದೇವಸ್ಥಾನ ಆಡಳಿತ ಮಂಡಳಿ ಕಾರ್ಯ ನಿರ್ವಹಿಸಬೇಕು ಎಂದರಲ್ಲದೆ ಪ್ರಗತಿಯಲ್ಲಿರುವ ವಿವಿಧ ಮೂಲಸೌಕರ್ಯ ಕಾಮಗಾರಿಗಳಿಗೆ ವೇಗ ನೀಡಿ ಕಾಲಮಿತಿಯಲ್ಲಿ ಪೂರೈಸಬೇಕು ಎಂದು ದೇವಸ್ಥಾನದ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಡಿ.ಸಿ ಅವರು ಗಾಣಗಾಪುರ್ ಬ್ರಿಜ್ ಕಮ್ ಬ್ಯಾರೇಜ್ ಗೆ ಭೇಟಿ ನೀಡಿ, ಅಲ್ಲಲ್ಲಿ ಗ್ರಿಲ್ ಮುರಿದಿರುವುದರಿಂದ ಕೂಡಲೆ ದುರಸ್ತಿ ಮಾಡುವಂತೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ಅಫಜಲಪೂರ ಹೋಗುವ ಮಾರ್ಗದಲ್ಲಿ ಅತನೂರ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಬಿತ್ತನೆ ಬೀಜ ಮತ್ತು ಅಫಜಲಪೂರ ಪಟ್ಟಣದಲ್ಲಿನ ಆರ್.ಎಸ್.ಕೆ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ರಸಗೊಬ್ಬರ ವಿತರಣೆ ಮಾಡಿದಲ್ಲದೆ ಪಟ್ಟಣದ ಎರಡ್ಮೂರು ರಸಗೊಬ್ಬರ ಮಾರಾಟ ಅಂಗಡಿಗಲಿಗೆ ದಿಢೀರ್ ಭೇಟಿ ನೀಡಿ ದಾಸ್ತಾನು, ಮಾರಾಟ, ಪಿ.ಓ.ಎಸ್ ಅಪಡೇಟ್ ಮಾಡುತ್ತಿರುವ ಕುರಿತು ಖುದ್ದಾಗಿ ಪರಿಶೀಲಿಸಿದರು. ಡಿ.ಎ.ಪಿ., ಯೂರಿಯಾ ನಿಗದಿತ ದರಕ್ಕಿಂತ ಹಡಚ್ಚಿನ ದರಕ್ಕೆ ಮಾರಾಟ ಮಾಡಿದರೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದರು.

ನಂತರ ತಹಸಿಲ್ದಾರ್ ಕಚೇರಿ ಆವರಣದಲ್ಲಿ ಪುರಸಭೆ ಮತ್ತು ಕಂದಾಯ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಪಟ್ಟಣ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಪುರಸಭೆಯ ಜವಾಬ್ದಾರಿಯಾಗಿದೆ. ಅದನ್ನು ಕಟ್ಟುನಿಟ್ಟಾಗಿ ಮಾಡಬೇಕು. ಇನ್ನು ಮಸತ್ವ ಇಲಾಖೆಯಾಗಿರುವ ಕಂದಾಯ ಇಲಾಖೆಯು ಜನಸ್ನೇಹಿಯಾಗಿ ಕಾರ್ಯ ನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಅನಗತ್ಯ ಕಚೇರಿಗೆ ಅಲೆದಾಡಿಸಬಾರದು ಎಂದು ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

## ಕನ್ನಡದ ಸ್ವಾಭಿಮಾನದ ವಿಷಯದಲ್ಲಿ ಬೆಳಗಾವಿ ಪಾಲಿಕೆ ಅಧಿಕಾರಿಗಳ ಬೇಜವಾಬ್ದಾರಿ, ನಿರ್ಲಕ್ಷ್ಯಕ್ಕೆ ಆಕ್ರೋಶ

# ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂಬ ಅಧಿಕೃತ ಠರಾವು ಅಂಗೀಕಾರ ಕುರಿತು ಡಿ.ಸಿ ಆದೇಶಕ್ಕೆ ಕಿಮ್ಮತ್ತಿಲ್ಲ

**ಬೆಳಗಾವಿ, ಜೂ.11:** ಗಡಿನಾಡು ಬೆಳಗಾವಿಯಲ್ಲಿ ಕನ್ನಡದ ಸ್ವಾಭಿಮಾನದ ವಿಷಯದಲ್ಲಿ ಮಹಾನಗರ ಪಾಲಿಕೆಯ ಅಧಿಕಾರಿಗಳ ಬೇಜವಾಬ್ದಾರಿತನ ಮತ್ತು ನಿರ್ಲಕ್ಷ್ಯದ ಧೋರಣೆ ಮತ್ತೊಮ್ಮೆ ಬಯಲಾಗಿದೆ. ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗ ಎಂಬ ಅಧಿಕೃತ ಠರಾವನ್ನು ಪಾಲಿಕೆಯಲ್ಲಿ ಅಂಗೀಕರಿಸುವ ವಿಷಯದಲ್ಲಿ ಉಂಟಾಗಿರುವ ಬೆಳವಣಿಗೆಗಳ ಕುರಿತು ವರದಿ ನೀಡುವಂತೆ ಜಿಲ್ಲಾಧಿಕಾರಿಗಳು ಸ್ವತಃ ಆದೇಶಿಸಿದ್ದರೂ, ಪಾಲಿಕೆ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿರುವುದು ಆಕ್ರೋಶಕ್ಕೆ ಕಾರಣವಾಗಿದೆ.

ಸಚಿವರ ಸಮ್ಮುಖದಲ್ಲೇ ನಡೆದಿದ್ದ ಸಭ 'ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಉನ್ನತ ಮಟ್ಟದ ಸಭೆ ನಡೆದಿತ್ತು. ಈ ಸಭೆಯಲ್ಲಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ನಗರ ಪೊಲೀಸ್ ಆಯುಕ್ತ ಭೂಷಣ ಬೋರಸೆ ಹಾಗೂ ಮಹಾನಗರ ಪಾಲಿಕೆ ಆಯುಕ್ತರು ಭಾಗವಹಿಸಿದ್ದರು. ಕನ್ನಡಪರ ಸಂಘಟನೆಗಳ ನಿರಂತರ ಒತ್ತಾಯದ ಹಿನ್ನೆಲೆಯಲ್ಲಿ ಮಾತನಾಡಿದ್ದ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು, ಈವರೆಗೆ ನಡೆದಿರುವ ಎಲ್ಲಾ ಬೆಳವಣಿಗೆಗಳ ಕುರಿತು ತಮಗೆ ಲಿಖಿತ ವರದಿ ಸಲ್ಲಿಸುವಂತೆ ಪಾಲಿಕೆ ಆಯುಕ್ತರಿಗೆ ಸ್ಪಷ್ಟ ಸೂಚನೆ ನೀಡಿದ್ದರು. ವರದಿ ಬಂದ ಬಳಿಕ ಮುಂದಿನ ಕಾನೂನು ನಿರ್ದೇಶನ ನೀಡುವು ದಾಗಿಯೂ ಹೇಳಿದ್ದರು.




ಸಭೆಯಲ್ಲಿ 'ಹೂಂ' ಅಂದು ಆಮೇಲೆ ಮರೆತ ಪಾಲಿಕೆ! ಜಿಲ್ಲಾಧಿಕಾರಿಗಳ ಕಟು ಆಜ್ಞೆಗೆ ಸಭೆಯಲ್ಲಿ ತಲೆದೂಗಿದ್ದ ಪಾಲಿಕೆ ಅಧಿಕಾರಿಗಳು, ಸಭೆ ಮುಗಿದು ಹಲವು ದಿನಗಳೇ ಕಳೆದರೂ ಜಿಲ್ಲಾ ಧಿಕಾರಿಗಳಿಗೆ ಯಾವುದೇ ಅಧಿಕೃತ ವರದಿಯನ್ನಾಗಲಿ, ಪತ್ರವನ್ನಾಗಲಿ ಸಲ್ಲಿಸಿಲ್ಲ. ಸಚಿವರು ಮತ್ತು ಉನ್ನತ ಅಧಿಕಾರಿಗಳ ಸಮ್ಮುಖದಲ್ಲಿ ಕೈಗೊಂಡ ತೀರ್ಮಾನವನ್ನೇ ಗಾಳಿಗೆ ತೂರಿರುವ ಪಾಲಿಕೆಯ ಈ ನಡೆ, ಆಡಳಿತಾತ್ಮಕ ನಿರ್ಲಕ್ಷ್ಯವೋ ಅಥವಾ ಉದ್ದೇಶ ಪೂರ್ವಕ ವಿಳಂಬವೋ ಎಂಬ ಅನುಮಾನವನ್ನು ಸಾರ್ವಜನಿಕರಲ್ಲಿ ಮೂಡಿಸಿದೆ.

ಬೆಳಗಾವಿ ಕರ್ನಾಟಕದ ಎರಡನೇ ರಾಜಧಾನಿ. ಇಲ್ಲಿ ಭವ್ಯವಾದ ಸುವರ್ಣ ವಿಧಾನಸೌಧವಿದೆ, ಸರ್ಕಾರದ ಎಲ್ಲಾ ದಾಖಲೆಗಳಲ್ಲೂ ಬೆಳಗಾವಿ ಕರ್ನಾಟಕದ ಭಾಗವೆಂದೇ ಇದೆ. ಪರಿಸ್ಥಿತಿ ಹೀಗಿರುವಾಗ, ಸ್ಥಳೀಯ ಮಹಾನಗರ ಪಾಲಿಕೆಯಲ್ಲಿ ಇದನ್ನು ಒಂದು ಠರಾವಿನ ರೂಪದಲ್ಲಿ ಅಂಗೀಕರಿಸಲು ಅಧಿಕಾರಿಗಳು ಇಷ್ಟೊಂದು ವಿಳಂಬ ಮಾಡುತ್ತಿರುವುದು ಕನ್ನಡಪರ ಸಂಘಟನೆಗಳ ಕೆಂಗಣ್ಣಿಗೆ ಗುರಿಯಾಗಿದೆ. ಕನ್ನಡ ಸಂಘಟನೆಗಳು ಪ್ರಾದೇಶಿಕ ಆಯುಕ್ತರ ಕಚೇರಿಗೂ ಹಲವು ಬಾರಿ ಮನವಿ ಸಲ್ಲಿಸಿವೆ. ಆದರೆ ಆ ಮನವಿಗಳು ಕೇವಲ ಕಸದ ಬುಟ್ಟಿ ಸೇರುತ್ತಿವೆಯೇ ಹೊರತು ಯಾವುದೇ ಗಂಭೀರ ಕ್ರಮ ಜರುಗುತ್ತಿಲ್ಲ ಎಂಬ ಬೇಸರ ಕನ್ನಡಿಗರದ್ದಾಗಿದೆ.

**ಸರ್ಕಾರದ ತಕ್ಷಣದ ಮಧ್ಯಪ್ರವೇಶಕ್ಕೆ ಆಗ್ರಹ:** ಬೆಳಗಾವಿ ಕೇವಲ ಒಂದು ಗಡಿ ಜಿಲ್ಲೆಯಲ್ಲ, ಅದು ಕೋಟ್ಯಂತರ ಕನ್ನಡಿಗರ ಭಾಷಾ ಸ್ವಾಭಿಮಾನದ ಪ್ರತೀಕ. ಜಿಲ್ಲಾಧಿಕಾರಿಗಳ ಆದೇಶವನ್ನೇ ಪಾಲಿಸದ ಪಾಲಿಕೆ ಅಧಿಕಾರಿಗಳ ವಿರುದ್ಧ ರಾಜ್ಯ ಸರ್ಕಾರ ತಕ್ಷಣವೇ ಶಿಸ್ತು ಕ್ರಮ ಕೈಗೊಳ್ಳಬೇಕಿದೆ. ಸರ್ಕಾರ ಈ ವಿಷಯದಲ್ಲಿ ನೇರವಾಗಿ ಮಧ್ಯಪ್ರವೇಶಿಸಿ, ಪಾಲಿಕೆಯಿಂದ ಸ್ಪಷ್ಟನೆ ಪಡೆಯಬೇಕು ಮತ್ತು ಕನ್ನಡ ಸಂಘಟನೆಗಳ ಮನವಿಗೆ ಸೂಕ್ತ ನ್ಯಾಯ ಒದಗಿಸಬೇಕು. ಇಲ್ಲದಿದ್ದರೆ ಅಧಿಕಾರಿಗಳ ಈ ಉದಾಸೀನ ಧೋರಣೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಜನಾಕ್ರೋಶಕ್ಕೆ ಕಾರಣವಾಗುವುದರಲ್ಲಿ ಸಂಶಯವಿಲ್ಲ.

# ಎಸ್‌ಐಆರ್‌ಗೆ ಏಜೆಂಟ್‌ರನ್ನು ನೇಮಿಸಿಕೊಳ್ಳಿ ರಾಜಕೀಯ ಪಕ್ಷಗಳಿಗೆ ವಿಜಯ ಮೆಕ್ಕಳಕಿ ಸೂಚನೆ




**ವಿಜಯಪುರ,ಜೂ.11–** ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತಂತೆ ಆಯಾ ರಾಜಕೀಯ ಪಕ್ಷದವರು ತಮ್ಮ ಮತಗಟ್ಟೆ ಮಟ್ಟದ ಏಜೆಂಟರನ್ನು ಕೂಡಲೇ ನೇಮಕ ಮಾಡಿಕೊಳ್ಳಬೇಕು ಎಂದು ವಿಜಯಪುರ ನಗರ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳಾದ ಮಹಾನಗರ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹೇಳಿದರು.

ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಕೈಗೊಳ್ಳುವ ಕುರಿತಂತೆ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಇತ್ತಿಚಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರ ಮತಕ್ಷೇತ್ರದಲ್ಲಿ 2026ರ ಮೇ 26 ರಂತೆ ಒಟ್ಟು 2,92,179 ಮತದಾರರಿದ್ದಾರೆ. ಒಟ್ಟು 285 ಮತಗಟ್ಟೆಗಳಿದ್ದು 285 ಜನ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಗೂ 28 ಜನ ಮತಗಟ್ಟೆ ಮಟ್ಟದ ಮೇಲ್ವಿಚಾರಕರು ಕಾರ್ಯ ನಿರ್ವಹಿಸುತ್ತಿದ್ದಾರೆ.

ರಾಜಕೀಯ ಪಕ್ಷದವರು ತಮ್ಮ ಮತಗಟ್ಟೆ ಮಟ್ಟದ ಏಜೆಂಟ್ ರನ್ನು ಕೂಡಲೇ ನೇಮಕ ಮಾಡಿಕೊಳ್ಳಬೇಕು ಎಂದು ಹೇಳಿದರು. ನಗರ ಮತಕ್ಷೇತ್ರ ಸಂಬಂಧಿಸಿದಂತೆ ಮತದಾರರ ಪಟ್ಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಮತದಾರರ ನೋಂದಣಾಧಿಕಾರಿಗಳು, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಚುನಾವಣಾ ಆಯೋಗದ ಎಲ್ಲ ಹಂತಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಒಳಗೊಂಡಿರುವ ಪಾರದರ್ಶಕ ಪ್ರಕ್ರಿಯೆಯಾಗಿದೆ ಎಂದು ರಾಜಕೀಯ ಪಕ್ಷಗಳಿಗೆ ತಿಳಿಸಿದರು.

# ಗೃಹ ಸಚಿವರ ಜಿಲ್ಲೆಯಲ್ಲೇ ಲಂಚಾವತಾರ, ಪೋಕ್ಸೊ ಸಂತ್ರಸ್ತೆಗೆ ಲಂಚದ ಬೇಡಿಕೆ : ಲೋಕಾ ಬಲೆಗೆ ಮಹಿಳಾ ಪೊಲೀಸ್




**ಕಲಬುರಗಿ, ಜೂ. 11:** ಪೋಕ್ಸೊ ಪ್ರಕರಣದ ತನಿಖೆಗೆ ಸಹಕರಿಸಲು ದೂರುದಾರರಿಂದ ಲಂಚಕ್ಕೆ ಬೇಡಿಕೆಯಿಟ್ಟು ಹಣ ಪಡೆಯುವಾಗ ಲೋಕಾಯುಕ್ತರಿಗೆ ಸಿಕ್ಕಿಬಿದ್ದ ಘಟನೆ ಗೃಹ ಸಚಿವರ ತವರು ಜಿಲ್ಲೆಯಲ್ಲಿ ನಡೆದಿದ್ದು, ನಗರದ ಸ್ಟೇಷನ್ ಬಜಾರ್ ಠಾಣೆಯ ಇಬ್ಬರು ಪೊಲೀಸರನ್ನು ಅಮಾನತುಗೊಳಿಸಿ ನಗರ ಪೊಲೀಸ್ ಕಮಿಷನರ್ ಡಾ.ಶರಣಪ್ಪ ಎಸ್.ಡಿ ಅವರು ಆದೇಶ ಹೊರಡಿಸಿದ್ದಾರೆ.

ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪೋಕ್ಸೊ ಕಾಯ್ದೆಯಡಿ ದಾಖಲಾದ ಪ್ರಕರಣದಲ್ಲಿ ನೊಂದ ಬಾಲಕಿಯ ಹೇಳಿಕೆ ಪಡೆದುಕೊಳ್ಳುವ ಸಂಬಂಧ ತನಿಖಾ ಸಹಾಯಕ ಸಿಬ್ಬಂದಿಯಾಗಿದ್ದ ಜ್ಯೋತಿ ಹಾಗೂ ಎಎಸ್ಐ ಶಿವಶರಣಪ್ಪ ಅವರು ದೂರು ದಾರರನ್ನು ಪೊಲೀಸ್ ಠಾಣೆಗೆ ಕರೆಯಿಸಿಕೊಂಡಿದ್ದರು.

ಪ್ರಕರಣದಲ್ಲಿ ಸಹಾಯ ಮಾಡುವುದಾಗಿ ಹೇಳಿ ದೂರುದಾರ ರಿಂದ 10 ಸಾವಿರ ಲಂಚದ ಬೇಡಿಕೆ ಇಟ್ಟಿದ್ದು, ಅದರ ಭಾಗವಾಗಿ 9 ಸಾವಿರ ಹಣವನ್ನು ಪಡೆಯುವಾಗ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದರು. ಗೃಹ ಸಚಿವರ ತವರಿನಲ್ಲೇ ಪೊಲೀಸರು ಲಂಚಕ್ಕೆ ಬೇಡಿಕೆಯಿಟ್ಟು ಸಿಕ್ಕಿಬಿದ್ದ ಸುದ್ದಿ ಎಲ್ಲೆಡೆ ಸದ್ದುಮಾಡಿತ್ತು.

ಪೋಕ್ಸೊದಂತಹ ಗಂಭೀರ ಪ್ರಕರಣದಲ್ಲಿ ದೂರುದಾರರಿಗೆ ನೆರವು ನೀಡುವ ಹೆಸರಿನಲ್ಲಿ ಹಣಕ್ಕೆ ಬೇಡಿಕೆ ಇಟ್ಟಿರುವುದು ಹಾಗೂ ಕರ್ತವ್ಯ ನಿರ್ವಹಣೆಯಲ್ಲಿ ಅತೀವ ನಿರ್ಲಕ್ಷ್ಯ ಮತ್ತು ಬೇಜವಾಬ್ದಾರಿತನ ತೋರಿರುವುದು ಪ್ರಾಥಮಿಕ ತನಿಖೆಯಲ್ಲಿ ಕಂಡುಬಂದ ಹಿನ್ನೆಲೆ ಯಲ್ಲಿ, ಕರ್ನಾಟಕ ರಾಜ್ಯ ಪೊಲೀಸ್ ಶಿಸ್ತಿನ ನಡಾವಳಿ ಅನ್ವಯ ಇಲಾಖಾ ಶಿಸ್ತು ಕ್ರಮ ಬಾಕಿ ಇರಿಸಿ ಇಬ್ಬರೂ ಸಿಬ್ಬಂದಿಯನ್ನು ಅಮಾನತುಗೊಳಿಸ ಲಾಗಿದೆ ಎಂದು ಆದೇಶದಲ್ಲಿ ಡಾ.ಶರಣಪ್ಪ ಸ್ಪಷ್ಟಪಡಿಸಿದ್ದಾರೆ.

# ಪ್ರವಾಹ ಪರಿಸ್ಥಿತಿ ಎದುರಿಸಲು ಸನ್ನದ್ಧರಾಗಿ ಅಧಿಕಾರಿಗಳಿಗೆ ವಿಜಯಪುರ ಡಿ.ಸಿ ಸೂಚನೆ

**ವಿಜಯಪುರ,ಜೂ.11** ಮುಂಗಾರು ಪೂರ್ವ ಮಳೆ ಆರಂಭವಾಗಿದ್ದು, ಯಾವುದೇ ಸಂದರ್ಭದಲ್ಲಿ ತಲೆದೋರಬಹುದಾದ ಪ್ರವಾಹ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಅಧಿಕಾರಿಗಳು ಸರ್ವ ಸನ್ನದ್ದರಾಗಿರಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರ ಅಧಿಕಾರಿಗಳಿಗೆ ಸೂಚಿಸಿದರು. ಪ್ರವಾಹಕ್ಕೆ ಸಂಬಂಧಿಸಿದಂತೆ ಪ್ರತಿ ಗ್ರಾಮಕ್ಕೊಬ್ಬ ನೋಡಲ್ ಅಧಿಕಾರಿಯನ್ನು ನೇಮಕ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಆಲಮಟ್ಟಿಗೆ ಕೃಷ್ಣಾ ನದಿಯಿಂದ ಹೆಚ್ಚುವರಿ ನೀರು ಹರಿಯಲಾರಂಭಿಸಿದರೆ ಮುದ್ದೇಬಿಹಾಳ ತಾಲೂಕಿನ ಕೆಲ ಹಳ್ಳಿಗಳು ಪ್ರವಾಹ ಪೀಡಿತವಾಗುವ ಸಂಭವವಿದೆ. ಈ ಕುರಿತು ಕೆಬಿಜೆನ್ನೆಲ್ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕು ಎಂದರು.



# ಅಮೆರಿಕ ದಾಳಿ ನಂತರ ಬಹ್ರೇನ್, ಕುವೈತ್, ಜೋರ್ಡಾನ್ ಮೇಲೆ ಇರಾನ್ ಗುರಿ

**ವಾಷಿಂಗ್ಟನ್/ಟೆಹ್ರಾನ್, ಜೂ.11:** ಗುರುವಾರ ಅಮೆರಿಕ ಮತ್ತು ಇರಾನ್ ಪಡೆಗಳು ಮಧ್ಯಪ್ರಾಚ್ಯದಾದ್ಯಂತ ಸತತ ಎರಡನೇ ದಿನವೂ ಹೊಸ ದಾಳಿಗಳನ್ನು ನಡೆಸಿವೆ, ಇದು ಉದ್ವಿಗ್ನತೆಯನ್ನು ನಾಟಕೀಯವಾಗಿ ಹೆಚ್ಚಿಸಿದೆ ಮತ್ತು ವ್ಯಾಪಕ ಪ್ರಾದೇಶಿಕ ಸಂಘರ್ಷದ ಭಯವನ್ನು ಹೆಚ್ಚಿಸಿದೆ. ಮಾತುಕತೆಗಳನ್ನು ವಿಳಂಬ ಮಾಡಿದ್ದಕ್ಕಾಗಿ ಟೆಹ್ರಾನ್ "ಬೆಲೆ ತೆರಬೇಕಾಗುತ್ತದೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದಾರೆ.

ಮತ್ತು ಒಪ್ಪಂದವನ್ನು ಮಾಡಿಕೊಳ್ಳಲು ಮತ್ತು "ಬದುಕುಳಿಯಲು" ಇನ್ನೂ ಅವಕಾಶವಿದೆ ಎಂದು ಸೂಚಿಸಿದ್ದಾರೆ. ದಕ್ಷಿಣ ಇರಾನ್ ಮಿಲಿಟರಿ, ಕಣ್ಗಾವಲು ಮತ್ತು ರಾಡಾರ್ ತಾಣಗಳನ್ನು ಗುರಿಯಾಗಿಸಿಕೊಂಡು "ಸ್ವರಕ್ಷಣಾ ದಾಳಿಗಳು" ಎಂದು ವಿವರಿಸಿದ ಅಲೆಯನ್ನು ಪೂರ್ಣಗೊಳಿಸಿದೆ ಎಂದು ಅಮೆರಿಕ ಸೆಂಟ್ರಲ್ ಕಮಾಂಡ್ ಹೇಳಿದೆ. ಅಮೆರಿಕದ ಪಡೆಗಳು ಇರಾನ್‌ಗೆ "ಕಠಿಣವಾಗಿ" ಹೊಡೆಯುತ್ತವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಜ್ಞೆ ಮಾಡಿದ ಕೆಲವೇ ಗಂಟೆಗಳ ನಂತರ ಮತ್ತು ಸಂಘರ್ಷವನ್ನು ಶಾಶ್ವತವಾಗಿ ಕೊನೆಗೊಳಿಸಲು ಟೆಹ್ರಾನ್ "ಒಪ್ಪಂದ ಮಾಡಿಕೊಳ್ಳಲು ತುಂಬಾ ಸಮಯ ತೆಗೆದುಕೊಳ್ಳುತ್ತಿದೆ" ಎಂದು ಆರೋಪಿಸಿದ ನಂತರ ಈ ದಾಳಿಗಳು ನಡೆದಿವೆ. ಪ್ರದೇಶದಾದ್ಯಂತದ ಅಮೆರಿಕದ ಮಿಲಿಟರಿ ಸ್ವತ್ತುಗಳನ್ನು ಗುರಿಯಾಗಿಸಿಕೊಂಡು ಇರಾನ್ ಮತ್ತೊಂದು ಸುತ್ತಿನ ದಾಳಿಯನ್ನು ಪ್ರಾರಂಭಿಸಿತು. ಬಹ್ರೇನ್, ಕುವೈತ್ ಮತ್ತು ಜೋರ್ಡಾನ್‌ನಲ್ಲಿರುವ ನೆಲೆಗಳು ಸತತ ಎರಡನೇ ದಿನವೂ ಇರಾನಿನ ಗುಂಡಿನ ದಾಳಿಗೆ ಒಳಗಾದವು. ಜೋರ್ಡಾನ್‌ನಲ್ಲಿರುವ ಯುಎಸ್ ಕಮಾಂಡ್ ಸೆಂಟರ್ ಮೇಲೆ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಹಾರಿಸಿರುವುದಾಗಿ ಇರಾನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಹೇಳಿದೆ. ಇರಾನಿನ ರಾಜ್ಯ ಮಾಧ್ಯಮದ ಪ್ರಕಾರ, ಜೋರ್ಡಾನ್ನ ಮುವಾಫಕ್ ಸಾಲ್ಟಿ ವಾಯುನೆಲೆಯಲ್ಲಿ 12 ಕ್ಷಿಪಣಿಗಳನ್ನು ಉಡಾಯಿಸಿದ ನಂತರ ಐಆರ್‌ಜಿಸಿ "ಹೆಚ್ಚಿನ ಸಂಖ್ಯೆಯ" ಯುಎಸ್ ಫೈಟರ್ ಜೆಟ್‌ಗಳು ಮತ್ತು ಮಿಲಿಟರಿ ಸೌಲಭ್ಯಗಳನ್ನು ನಾಶಪಡಿಸಿದೆ ಎಂದು ಹೇಳಿಕೊಂಡಿದೆ. ಆದಾಗ್ಯೂ, ಜೋರ್ಡಾನ್ ರಾಜ್ಯ ಮಾಧ್ಯಮವು ದೇಶದ ವಾಯು ರಕ್ಷಣಾ ವ್ಯವಸ್ಥೆಗಳು ಮತ್ತು ವಾಯುಪಡೆಯು 20 ಕ್ಷಿಪಣಿಗಳನ್ನು ತಡೆದು ಹೊಡೆದುರುಳಿಸಿದೆ ಎಂದು ಹೆಸರಿಸದ ಮಿಲಿಟರಿ ಅಧಿಕಾರಿಯನ್ನು ಉಲ್ಲೇಖಿಸಿ ವರದಿ ಮಾಡಿದೆ. ಕ್ಷಿಪಣಿಗಳನ್ನು ಮಧ್ಯ ಜೋರ್ಡಾನ್ನ ಅಜ್ರಾಕ್ ಕಡೆಗೆ ಹಾರಿಸಲಾಗಿದೆ ಎಂದು ವರದಿಯಾಗಿದೆ ಮತ್ತು ಯಾವುದೇ ಸಾವುನೋವುಗಳು ಅಥವಾ ವಸ್ತು ಹಾನಿಯಾಗಿಲ್ಲ. ಏತನ್ಮಧ್ಯೆ, ಗುರುವಾರ ಮುಂಜಾನೆ ಓಮನ್ ಕೊಲ್ಲಿಯಲ್ಲಿ ಇರಾನಿನ ಸರಕು ಸಾಗಣೆ ದೋಣಿಯ ಮೇಲೆ ಅಮೆರಿಕದ ಕ್ಷಿಪಣಿ ಎರಗಿದೆ ಎಂದು ವರದಿಯಾಗಿದೆ ಎಂದು ಮೆಹರ್ ಸುದ್ದಿ ಸಂಸ್ಥೆ ತಿಳಿಸಿದೆ. ಶಿನಾಸ್



ಬಂದರಿನ ಬಳಿ ಹಡಗೊಂದನ್ನು ಒಳಗೊಂಡ ಘಟನೆಯ ವರದಿಗಳನ್ನು ಗಮನಿಸುತ್ತಿರುವುದಾಗಿ ಒಮಾನ್ನಲ್ಲಿರುವ ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. "ನಾವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ ಮತ್ತು ಹೆಚ್ಚಿನ ವಿವರಗಳಿಗಾಗಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುತ್ತಿದ್ದೇವೆ" ಎಂದು ರಾಯಭಾರ ಕಚೇರಿ ತಿಳಿಸಿದೆ. ಕುವೈತ್ನ ಸೈನ್ಯವು ತನ್ನ ವಾಯು ರಕ್ಷಣಾ ವ್ಯವಸ್ಥೆಗಳು "ಪ್ರತಿಕೂಲ ವೈಮಾನಿಕ ಗುರಿಗಳನ್ನು" ತಡೆಹಿಡಿದಿವೆ ಎಂದು ಘೋಷಿಸಿತು. ದಾಳಿಯ ನಂತರ ಕುವೈತ್ ತನ್ನ ವಾಯುಪ್ರದೇಶವನ್ನು ತಾತ್ಕಾಲಿಕವಾಗಿ ಮುಚ್ಚಿತು ಮತ್ತು ಗುರುವಾರ ಮುಂಜಾನೆ ಅದನ್ನು ಮತ್ತೆ ತೆರೆಯಿತು. ಇರಾನ್ ಒಳಗೆ, ಟೆಹ್ರಾನ್, ದಕ್ಷಿಣ ಬಂದರು ನಗರ ಬಂದರ್ ಅಬ್ಬಾಸ್ ಮತ್ತು ಆಯಕಟ್ಟಿನ ಹಾರ್ಮುಜ್ ಜಲಸಂಧಿಯ ಬಳಿಯ ಇತರ ಪ್ರದೇಶಗಳಲ್ಲಿ ಸ್ಫೋಟಗಳು ಸಂಭವಿಸಿವೆ ಎಂದು ರಾಜ್ಯ ಮಾಧ್ಯಮ ವರದಿ ಮಾಡಿದೆ. ಇರಾನ್ ರಾಜ್ಯ ಮಾಧ್ಯಮವು ಹಾರ್ಮುಜ್ ಜಲಸಂಧಿಯನ್ನು ಸಾಗಿಸುತ್ತಿದ್ದ ಎರಡು ತೈಲ ಟ್ಯಾಂಕರ್‌ಗಳನ್ನು ಹೊಡೆದುರುಳಿಸಿದೆ ಎಂದು ಐಆರ್‌ಜಿಸಿ ಹೇಳಿಕೊಂಡಿದೆ. ನಿರ್ಣಾಯಕ ಹಡಗು ಮಾರ್ಗವು "ಎಲ್ಲಾ ರೀತಿಯ ಹಡಗುಗಳಿಗೆ ಸಂಪೂರ್ಣವಾಗಿ ಮುಚ್ಚಲ್ಪಟ್ಟಿದೆ" ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದ ಸ್ವಲ್ಪ ಸಮಯದ ನಂತರ.

"ಹಾರ್ಮುಜ್ ಜಲಸಂಧಿಯ ಒಳಗೆ ಮತ್ತು ಹೊರಗೆ ವಾಣಿಜ್ಯ ಹಡಗುಗಳು ಸಾಗಣೆಯನ್ನು ಮುಂದುವರೆಸುತ್ತಿವೆ" ಎಂದು ಹೇಳುವ ಮೂಲಕ ಅಇಓಖಿಅಔಒ ಈ ಹೇಳಿಕೆಯನ್ನು ವಿವಾದಿಸಿತು.

ತೈಲ ಮಾರುಕಟ್ಟೆಗಳು ಬೆಳವಣಿಗೆಗಳಿಗೆ ತೀವ್ರವಾಗಿ ಪ್ರತಿಕ್ರಿಯಿಸಿದವು. ಹಡಗು ಮಾರ್ಗವನ್ನು ಮುಚ್ಚುವುದು ಮತ್ತು ಆಪಾದಿತ ಟ್ಯಾಂಕರ್ ದಾಳಿಗಳ ವರದಿಗಳ ನಂತರ ಸುಮಾರು ಎರಡು ಪ್ರತಿಶತದಷ್ಟು ಏರಿಕೆಯಾದ ನಂತರ ಜಾಗತಿಕ ಮಾನದಂಡವಾದ ಬ್ರೆಂಟ್ ಕಚ್ಚಾ ತೈಲವು ಬ್ಯಾರಲ್‌ಗೆ 95 ಡಾಲರ್‌ಗೆ ಏರಿತು.

ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯನ್ ಪ್ರತಿಕ್ರಿಯಿಸಿ ಇರಾನ್ "ಯಾವುದೇ ಒತ್ತಡ ಅಥವಾ ಬೆದರಿಕೆಯ ವಿರುದ್ಧ ದೃಢವಾಗಿ ನಿಲ್ಲುತ್ತದೆ" ಎಂದು ಹೇಳಿದರು.

ಇರಾನ್‌ನ ವಿದೇಶಾಂಗ ಸಚಿವಾಲಯವು ವಾಷಿಂಗ್ಟನ್ ರಾಜತಾಂತ್ರಿಕತೆಯನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿತು, ಯುನೈಟೆಡ್ ಸ್ಟೇಟ್ಸ್ "ಅದು ಕಳುಹಿಸುವ ವಿರೋಧಾತ್ಮಕ ಸಂದೇಶಗಳ ಮೂಲಕ ರಾಜತಾಂತ್ರಿಕ ಪ್ರಕ್ರಿಯೆಯನ್ನು ಹಾನಿಗೊಳಿಸುತ್ತಿದೆ" ಎಂದು ಹೇಳಿದೆ. ಏಪ್ರಿಲ್ನಲ್ಲಿ ಕದನ ವಿರಾಮವನ್ನು ತಲುಪಿದ್ದರೂ ಸಹ ಪ್ರಸ್ತುತ ಉಲ್ಬಣವು ಬಂದಿದೆ, ಅದು ಆರಂಭದಲ್ಲಿ ಎರಡು ವಾರಗಳವರೆಗೆ ಇರುತ್ತದೆ ಎಂದು ಉದ್ದೇಶಿಸಲಾಗಿತ್ತು. ಅಂದಿನಿಂದ ಎರಡೂ ಕಡೆಯವರು ಮಧ್ಯಂತರ ಗುಂಡಿನ ದಾಳಿ ನಡೆಸುತ್ತಿದ್ದರೂ, ಪೂರ್ಣ ಪ್ರಮಾಣದ ಹಗೆತನಕ್ಕೆ ಮರಳುವುದನ್ನು ಅವರು ತಪ್ಪಿಸಿದ್ದಾರೆ.

**ಮತ್ತಷ್ಟು ಮಿಲಿಟರಿ ಕ್ರಮ ಸನ್ನಿಹಿತವಾಗಿದೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ. "ನಾವು ನಿನ್ನೆ ಅವರನ್ನು ತೀವ್ರವಾಗಿ ಹೊಡೆದಿದ್ದೇವೆ ಮತ್ತು ಇಂದು ನಾವು ಅವರನ್ನು ಮತ್ತೆ ತೀವ್ರವಾಗಿ ಹೊಡೆಯಲಿದ್ದೇವೆ" ಎಂದು ಟ್ರಂಪ್ ಟ್ರೂತ್ ಸೋಷಿಯಲ್‌ನಲ್ಲಿ ಬರೆದಿದ್ದಾರೆ. ಇರಾನಿನ ನಾಯಕರು "ಒಪ್ಪಂದವನ್ನು ಮಾತುಕತೆ ನಡೆಸಲು ತುಂಬಾ ಸಮಯ ತೆಗೆದುಕೊಂಡಿದ್ದಾರೆ" ಎಂದು ಅವರು ಆರೋಪಿಸಿದರು.**

**ಇರಾನ್‌ಗೆ ಒಪ್ಪಂದಕ್ಕೆ ಬರಲು ಅವಕಾಶ ನೀಡಲಾಗಿದೆ. ಆದರೆ ಹಾಗೆ ಮಾಡಲು ವಿಫಲವಾಗಿದೆ ಎಂದು ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಹೇಳಿದರು, ದೇಶದಲ್ಲಿನ "ಪ್ರಮುಖ ಸೌಲಭ್ಯಗಳ ಮೇಲೆ ಬಾಂಬ್‌ಗಳು ಬೀಳುತ್ತವೆ" ಎಂದು ಹೇಳಿದರು.**

**ಶಾಂತಿ ಒಪ್ಪಂದವನ್ನು ಭದ್ರಪಡಿಸಿಕೊಳ್ಳದಿದ್ದರೆ ಇರಾನ್ ಹೆಚ್ಚುವರಿ ದಾಳಿಗಳನ್ನು ಎದುರಿಸಬೇಕಾಗುತ್ತದೆ ಎಂದು ಟ್ರಂಪ್ ಮತ್ತಷ್ಟು ಎಚ್ಚರಿಸಿದರು.**

# ಇರಾನ್ ಮೇಲಿನ ಯೋಜಿತ ದಾಳಿಗೆ ಟ್ರಂಪ್ ತಡೆ: ಮಿತ್ರರಾಷ್ಟ್ರಗಳ ಅನುಮೋದನೆ

**ವಾಷಿಂಗ್ಟನ್,ಜೂ.11:** ಮಂಗಳವಾರ ರಾತ್ರಿ ಇರಾನ್‌ಗೆ "ತುಂಬಾ ಕಠಿಣ" ಹೊಡೆತ ನೀಡುವುದಾಗಿ ಬೆದರಿಕೆ ಹಾಕಿದ ಕೆಲವು ಗಂಟೆಗಳ ನಂತರ, ಟೆಹ್ರಾನ್‌ನೊಂದಿಗಿನ ಮಾತುಕತೆಗಳು ಇರಾನ್‌ನ ನಾಯಕತ್ವದ ಅತ್ಯುನ್ನತ ಮಟ್ಟವನ್ನು ತಲುಪಿದ ನಂತರ, ಯೋಜಿತ ದಾಳಿಗಳು ಮತ್ತು ಬಾಂಬ್ ದಾಳಿಗಳನ್ನು ರದ್ದುಗೊಳಿಸಿರುವುದಾಗಿ ಘೋಷಿಸಿದ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯೂ-ಟರ್ನ್ ತೆಗೆದುಕೊಂಡರು. "ಇರಾನ್ ಇಸ್ಲಾಮಿಕ್ ಗಣರಾಜ್ಯದೊಂದಿಗಿನ ಚರ್ಚೆಗಳನ್ನು ಇರಾನ್ ನಾಯಕತ್ವದ ಅತ್ಯುನ್ನತ ಮಟ್ಟಕ್ಕೆ ತರಲಾಗಿದೆ ಮತ್ತು ಅನುಮೋದಿಸಲಾಗಿದೆ ಎಂಬ ಅಂಶದ ಆಧಾರದ ಮೇಲೆ, ನಾನು ಅಮೆರಿಕ ಅಧ್ಯಕ್ಷನಾಗಿ, ಇಂದು ಸಂಜೆ ಇರಾನ್ ವಿರುದ್ಧದ ನಿಗದಿತ ದಾಳಿ ಮತ್ತು ಬಾಂಬ್ ದಾಳಿಗಳನ್ನು ರದ್ದುಗೊಳಿಸಿದ್ದೇನೆ" ಎಂದು ಟ್ರಂಪ್ ಟ್ರೂತ್ ಸೋಷಿಯಲ್‌ನಲ್ಲಿ ಬರೆದಿದ್ದಾರೆ. ಇರಾನ್ನೊಂದಿಗಿನ ಶಾಂತಿ ಒಪ್ಪಂದವು ಹತ್ತಿರದಲ್ಲಿದೆ, ಆದರೆ ಯಾವುದೂ ಹೊರಹೊಮ್ಮುವುದಿಲ್ಲ ಎಂದು ತಿಂಗಳುಗಳಿಂದ ಹೇಳಿಕೊಂಡಿರುವ ಟ್ರಂಪ್ - ಉದ್ದೇಶಿತ



ಒಪ್ಪಂದವನ್ನು ಇನ್ನೂ ಅಧಿಕೃತಗೊಳಿಸಲಾಗಿಲ್ಲ ಎಂದು ಸೂಚಿಸಿದ್ದಾರೆ, ಯುದ್ಧ ಮಾಡುತ್ತಿರುವ ದೇಶಗಳು ಪರಿಶೀಲಿಸಲು ನಿಜವಾದ ಒಪ್ಪಂದ ಅಸ್ತಿತ್ವದಲ್ಲಿದೆಯೇ ಎಂಬುದು ಸ್ಪಷ್ಟವಾಗಿಲ್ಲ. ಒಮಾನ್ ಕೊಲ್ಲಿಯಲ್ಲಿ ಇರಾನಿನ ಬಂದರುಗಳ ಮೇಲಿನ ಯುಎಸ್ ನೌಕಾ ದಿಗ್ಬಂಧನವು "ಈ ಒಪ್ಪಂದವನ್ನು ಅಂತಿಮಗೊಳಿಸುವವರೆಗೆ ಪೂರ್ಣ ಬಲದಲ್ಲಿ ಮತ್ತು ಪರಿಣಾಮಕಾರಿಯಾಗಿರುತ್ತದೆ" ಎಂದು ಟ್ರಂಪ್ ಬರೆದಿದ್ದಾರೆ. ಇದಕ್ಕೂ ಮೊದಲು, ಅಮೆರಿಕವು ಇರಾನ್ ಮೇಲೆ ಪ್ರಬಲವಾದ ಹೊಸ ಸುತ್ತಿನ ದಾಳಿಗಳನ್ನು ನಡೆಸಲಿದೆ ಎಂದು ಟ್ರಂಪ್ ಎಚ್ಚರಿಸಿದ್ದರು ಮತ್ತು ಟೆಹ್ರಾನ್ನ ಪ್ರಮುಖ ತೈಲ ರಫ್ತು ಕೇಂದ್ರವಾದ ಖಾರ್ಗ್ ದ್ವೀಪವನ್ನು ಹಿಡಿತಕ್ಕೆ ತೆಗೆದುಕೊಳ್ಳುವ ಸಾಧ್ಯತೆಯನ್ನು ಸಹ ಪ್ರಸ್ತಾಪಿಸಿದ್ದರು. ಆದಾಗ್ಯೂ, ಸಂಜೆಯ ಹೊತ್ತಿಗೆ, ಗಮನವು ಮಿಲಿಟರಿ ಕ್ರಮದಿಂದ ರಾಜತಾಂತ್ರಿಕತೆಯತ್ತ ಬದಲಾಯಿತು. ಆದಾಗ್ಯೂ, ಟ್ರಂಪ್ ಘೋಷಣೆಯ ನಂತರ ಟೆಹ್ರಾನ್ ಯುಎಸ್ ಜೊತೆಗಿನ ಆರಂಭಿಕ ತಿಳುವಳಿಕೆ ಒಪ್ಪಂದಕ್ಕಾಗಿ ಯಾವುದೇ ಪಠ್ಯವನ್ನು ಅನುಮೋದಿಸಿಲ್ಲ ಎಂದು ವರದಿಯಾಗಿದೆ.

## ಟ್ರಂಪ್ ಬೆದರಿಕೆ ನಂತರ ಖಾರ್ಗ್ ದ್ವೀಪ ವಶಪಡಿಸಿಕೊಳ್ಳಲು ಅಮೆರಿಕ ಪ್ರಯತ್ನ: ದಿಟ್ಟ ಪ್ರತ್ಯುತ್ತರ- ಇರಾನ್ ಎಚ್ಚರಿಕೆ

**ಖಾರ್ಗ್ ದ್ವೀಪವನ್ನು ವಶಪಡಿಸಿಕೊಳ್ಳಲು ಅಥವಾ ದಾಳಿ ಮಾಡಲು ಅಮೆರಿಕ ಧೈರ್ಯ ಮಾಡಿದರೆ, ಇರಾನ್ "ದೃಢ, ಪುಡಿಪುಡಿಯಾದ, ನೋವಿನ ಮತ್ತು ವಿಷಾದಕರ ಪ್ರತಿಕ್ರಿಯೆ" ನೀಡುವುದಾಗಿ ಎಚ್ಚರಿಸಿದೆ. ಟ್ರಂಪ್ ಅವರ ಬೆದರಿಕೆಗಳನ್ನು "ಗೊಂದಲಮಯ ಮತ್ತು ಅನಿಯಮಿತ" ಎಂದು ತಳ್ಳಿಹಾಕಿದ ಇರಾನ್ ಸಂಸತ್ತಿನ ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ ಆಯೋಗದ ಅಧ್ಯಕ್ಷ ಇಬ್ರಾಹಿಂ ಅಜೀಜಿ, ಟ್ರಂಪ್ ಅವರ ಬೆದರಿಕೆಗಳನ್ನು "ಗೊಂದಲಮಯ ಮತ್ತು ಅನಿಯಮಿತ" ಎಂದು ತಳ್ಳಿಹಾಕಿದರು. ಸಣ್ಣ ಪ್ರದೇಶವನ್ನು ವಶಪಡಿಸಿಕೊಳ್ಳಲು**



**ಅಥವಾ ದಾಳಿ ಮಾಡಲು ಪ್ರಯತ್ನಿಸುವ ಯಾವುದೇ ಪ್ರಯತ್ನಗಳ ವಿರುದ್ಧ ಇರಾನ್ ಸಂಪೂರ್ಣ ಬಲದಿಂದ ಪ್ರತಿಕ್ರಿಯಿಸುತ್ತದೆ ಎಂಬುದರಲ್ಲಿ ಸಂದೇಹವಿಲ್ಲ ಎಂದು ಹೇಳಿದರು.**

# ಅಮೆರಿಕದೊಂದಿಗೆ ಯಾವುದೇ ಹೊಸ ಮಾತುಕತೆಯಲ್ಲಿ ಇರಾನ್ ಭಾಗಿಯಾಗಿಲ್ಲ

**ಟೆಹ್ರಾನ್, ಜೂ.11:** ಇರಾನ್ ಈ ಕ್ಷಣದವರೆಗೆ ಅಮೆರಿಕದೊಂದಿಗೆ ಯಾವುದೇ ಹೊಸ ಮಾತುಕತೆಗಳಲ್ಲಿ ಭಾಗಿಯಾಗಿಲ್ಲ ಎಂದು ದೇಶದ ಮಾತುಕತೆ ತಂಡಕ್ಕೆ ಹತ್ತಿರವಿರುವ ಅನಾಮಧೇಯ ಮೂಲ ತಿಳಿಸಿದೆ.

ದೇಶದ ಅರೆ-ಅಧಿಕೃತ ಐಆರ್‌ಜಿಸಿ ಒಡೆತನದ ಫಾರ್ಸ್ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಮೂಲ, ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಒಪ್ಪಂದಕ್ಕೆ ಮಧ್ಯಸ್ಥಿಕೆ ವಹಿಸಲು ಕತಾರಿ ಮತ್ತು ಪಾಕಿಸ್ತಾನಿ ಅಧಿಕಾರಿಗಳು ಮಾಡುತ್ತಿರುವ ಪ್ರಯತ್ನಗಳನ್ನು ತಳ್ಳಿಹಾಕಿತು, ಇದು ಆಶಯದಂತೆಯೇ ಒಪ್ಪಂದವನ್ನು ತಲುಪುವ ಯಾವುದೇ ಸಾಧ್ಯತೆಯನ್ನು ಹೆಚ್ಚಾಗಿ ಪರಿಗಣಿಸುತ್ತದೆ.

ತನ್ನ ಮೂಲವನ್ನು ಉಲ್ಲೇಖಿಸಿ, ಇಸ್ಲಾಮಿಕ್ ಗಣರಾಜ್ಯವು ಪರೋಕ್ಷ ಮಾತುಕತೆಗಳ ಉದ್ದಕ್ಕೂ ತನ್ನ ನಿಲುವುಗಳಿಗೆ ಅಂಟಿಕೊಂಡಿದೆ ಎಂದು ಫಾರ್ಸ್ ವರದಿ ಮಾಡಿದೆ, ಟೆಹ್ರಾನ್ ಮಂಡಿಸಿದ ಒಪ್ಪಂದದ ಕರಡು ಜ್ಞಾಪಕ ಪತ್ರವನ್ನು ಶ್ವೇತಭವನವು ಹಸಿರು ನಿಶಾನೆ ತೋರಿಸಿಲ್ಲ ಎಂದು ಗಮನಿಸಿದೆ.



ಇತ್ತೀಚಿನ ಯುಎಸ್ ಮಿಲಿಟರಿ ಬೆದರಿಕೆಗಳನ್ನು ಉಲ್ಲೇಖಿಸಿ, ಮೂಲವು ಫಾರ್ಸ್‌ಗೆ "ಹೆಚ್ಚಿದ ಒತ್ತಡಕ್ಕೆ ಪ್ರಾಥಮಿಕ ಕಾರಣವೆಂದರೆ ಮಾತುಕತೆ ಕೋಷ್ಟಕದಲ್ಲಿ ತನ್ನ ಸ್ಥಾನಗಳನ್ನು ಸಮರ್ಥಿಸಿಕೊಳ್ಳುವಲ್ಲಿ ಇರಾನ್‌ನ ದೃಢತೆ" ಎಂದು ಹೇಳಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪದೇ ಪದೇ ಎರಡೂ ಕಡೆಯವರ ನಡುವಿನ ಪ್ರಮುಖ ಹಗೆತನಗಳು ಈ ಹಿಂದಿನ ವಾರ ಪುನರಾರಂಭಗೊಂಡಿದ್ದರೂ ಸಹ, ಎರಡೂ ಕಡೆಯವರ ನಡುವಿನ ಪ್ರಮುಖ ಹಗೆತನಗಳು ಪುನರಾರಂಭಗೊಂಡಿದ್ದರೂ ಸಹ, ಎರಡೂ ಕಡೆಯವರ ನಡುವಿನ ಒಪ್ಪಂದಕ್ಕೆ ಹತ್ತಿರದಲ್ಲಿವೆ ಎಂದು ಪದೇ ಪದೇ ಹೇಳಿಕೊಂಡಿದ್ದಾರೆ.

ಗುರುವಾರ, ಟ್ರಂಪ್ ವಾಷಿಂಗ್ಟನ್ ಕೆಲವೇ ಗಂಟೆಗಳಲ್ಲಿ ಇರಾನ್ ಮೇಲೆ "ತುಂಬಾ ಕಠಿಣ" ದಾಳಿ ಮಾಡಲಿದೆ ಎಂದು ಹೆಮ್ಮೆಪಡುತ್ತಾ, "ದೊಡ್ಡ" ದಾಳಿಗಳನ್ನು ನಡೆಸುವುದಾಗಿ ಮತ್ತು ಇರಾನಿನ ಪ್ರಮುಖ ತೈಲ ಮೂಲಸೌಕರ್ಯವನ್ನು ವಶಪಡಿಸಿಕೊಳ್ಳುವುದಾಗಿ ಬೆದರಿಕೆ ಹಾಕಿದರು.

## 350 ಶತಕೋಟಿ ಪ್ಯಾಕೇಜ್‌ಗೆ ಹಸಿರು ನಿಶಾನೆ ತೋರಿಸಲು ಟ್ರಂಪ್ ಒತ್ತಾಯ

**ವಾಷಿಂಗ್ಟನ್, ಜೂನ್ 11:** ಮುಂದಿನ ವರ್ಷದ ಮಧ್ಯಂತರ ಚುನಾವಣೆಗಳಿಗೆ ಮುಂಚಿತವಾಗಿ ಫೆಡರಲ್ ಚುನಾವಣಾ ನಿಯಮಗಳಲ್ಲಿ ವ್ಯಾಪಕ ಬದಲಾವಣೆಗಳನ್ನು ಪರಿಚಯಿಸುವ 350 ಬಿಲಿಯನ್ ಡಾಲರ್ ರಕ್ಷಣಾ ವೆಚ್ಚ ಪ್ಯಾಕೇಜ್ ತ್ವರಿತವಾಗಿ ಅಂಗೀಕರಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಾಂಗ್ರೆಸ್ಸಿನ ರಿಪಬ್ಲಿಕನ್ನರನ್ನು ಒತ್ತಾಯಿಸಿದ್ದಾರೆ. ಗುರುವಾರ ಟ್ರೂತ್ ಸೋಶಿಯಲ್‌ನಲ್ಲಿ ಪೋಸ್ಟ್ ಮಾಡಿದ ಟ್ರಂಪ್, "ರೆಕಾನ್ 3.0" ಎಂದು ವಿವರಿಸಿದ ಪ್ಯಾಕೇಜ್ ಅನ್ನು "ತಕ್ಷಣ" ಸರಿಸಲು ಶಾಸಕರಿಗೆ ಕರೆ ನೀಡಿದರು, ಇದು ರಿಪಬ್ಲಿಕನ್ನರು ಡೆಮಾಕ್ರಟಿಕ್ ಬೆಂಬಲವಿಲ್ಲದೆ ಅಂಗೀಕರಿಸಲು ಆಶಿಸುವ ಹೊಸ ಬಜೆಟ್ ಮಸೂದೆಯಾಗಿದೆ. ಟ್ರಂಪ್ ಪ್ರಕಾರ, ಯುಎಸ್ ಮಿಲಿಟರಿ ಬಜೆಟ್ ಅನ್ನು 1.5 ಟ್ರಿಲಿಯನ್‌ಗೆ ತರಲು ಮತ್ತು "ಸ್ವಾತಂತ್ರ್ಯದ ಶಸ್ತ್ರಾಗಾರವನ್ನು ನಿರ್ಮಿಸಲು" ಪ್ರಸ್ತಾವಿತ ನಿಧಿಯ ಅಗತ್ಯವಿತ್ತು.

ಇದಲ್ಲದೆ, ಇದು ಗೋಲ್ಡನ್ ಡೋಮ್ ಕ್ಷಿಪಣಿ ರಕ್ಷಣಾ ಗುರಾಣಿ, ಮುಂದಿನ ಪೀಳಿಗೆಯ ಈ-47 ಫೈಟರ್ ಜೆಟ್, ಃ-21 ಬಾಂಬರ್, ಡ್ರೋನ್, ಬಾಹ್ಯಾಕಾಶ ಆಧಾರಿತ ರಕ್ಷಣಾ ಸಾಮರ್ಥ್ಯ ಮತ್ತು ವಿಸ್ತೃತ ಮದ್ದುಗುಂಡು ದಾಸ್ತಾನು ಸೇರಿದಂತೆ ಹಲವಾರು ಯೋಜಿತ ಭವಿಷ್ಯದ ಮಿಲಿಟರಿ ಕಾರ್ಯಕ್ರಮಗಳನ್ನು ಬೆಂಬಲಿಸುತ್ತದೆ ಎಂದು ವರದಿ ಮಾಡಿದೆ.

# ಮಧ್ಯ ಆಫ್ರಿಕಾದಲ್ಲಿ ಎಬೋಲಾ ಪ್ರತಿಕ್ರಿಯೆಗೆ ಅಮೆರಿಕ ಹೆಚ್ಚುವರಿ ಅನುದಾನ ಘೋಷಣೆ

**ವಾಷಿಂಗ್ಟನ್, ಜೂ.11:** ಪೂರ್ವ ಮತ್ತು ಮಧ್ಯ ಆಫ್ರಿಕಾದಲ್ಲಿ ಎಬೋಲಾ ಸನ್ನದ್ಧತಾ ಪ್ರಯತ್ನಗಳನ್ನು ಬೆಂಬಲಿಸಲು ಅಮೆರಿಕ ಬುಧವಾರ ಹೆಚ್ಚುವರಿ 20 ದಶಲಕ್ಷ ಡಾಲರ್ ನೆರವನ್ನು ಘೋಷಿಸಿದೆ, ಇದು ಪ್ರಸ್ತುತ ಎಬೋಲಾ ಪ್ರತಿಕ್ರಿಯೆಗೆ ವಿದೇಶಾಂಗ ಇಲಾಖೆಯ ನೇರ ಕೊಡುಗೆಯನ್ನು 220 ಮಿಲಿಯನ್ ಡಾಲರ್ಗಳಿಗಿಂತ ಹೆಚ್ಚು ಹೆಚ್ಚಿಸಿದೆ. ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ (ಆಖಅ) ಕೇಂದ್ರೀಕೃತವಾಗಿರುವ ಎಬೋಲಾ ಏಕಾಏಕಿ ನಿಯಂತ್ರಿಸಲು ಆರೋಗ್ಯ ಅಧಿಕಾರಿಗಳು ಕೆಲಸ ಮಾಡುತ್ತಿರುವುದರಿಂದ ಬುರುಂಡಿ, ಕೀನ್ಯಾ, ರುವಾಂಡಾ ಮತ್ತು ದಕ್ಷಿಣ ಸುಡಾನ್‌ನಲ್ಲಿ ಸನ್ನದ್ಧತಾ ಚಟುವಟಿಕೆಗಳನ್ನು ಈ ನಿಧಿ ಬೆಂಬಲಿಸುತ್ತದೆ. "ಇಲಾಖೆಯ ನಡೆಯುತ್ತಿರುವ ಎಬೋಲಾ ಪ್ರತಿಕ್ರಿಯೆ ಮತ್ತು ಸನ್ನದ್ಧತಾ ಪ್ರಯತ್ನಗಳಿಗೆ ಇಲಾಖೆ 20 ದಶಲಕ್ಷ ಡಾಲರ್ ಹೆಚ್ಚುವರಿ ಹಣವನ್ನು ಘೋಷಿಸುತ್ತಿದೆ" ಎಂದು ಅಮೆರಿಕ ವಿದೇಶಾಂಗ ಇಲಾಖೆ ಹೇಳಿಕೆಯಲ್ಲಿ ತಿಳಿಸಿದೆ. ಮೇ ತಿಂಗಳಲ್ಲಿ ಘೋಷಿಸಲಾದ ವಿಶಾಲವಾದ ಗಖ ನೆರವು ಪ್ಯಾಕೇಜ್ ಅಡಿಯಲ್ಲಿ ಆಖಅ, ದಕ್ಷಿಣ ಸುಡಾನ್ ಮತ್ತು ಉಗಾಂಡಾದಲ್ಲಿ ಎಬೋಲಾ ಪ್ರತಿಕ್ರಿಯೆ ಮತ್ತು ಮಾನವೀಯ ಸಹಾಯಕ್ಕಾಗಿ ನಿಗದಿಪಡಿಸಿದ ಗಖಆ 350ದಶಲಕ್ಷ ಡಾಲರ್ ಜೊತೆಗೆ ಹೊಸ ನಿಧಿ ಬರುತ್ತದೆ. "ಎಬೋಲಾ ಪ್ರತಿಕ್ರಿಯೆಗೆ ಅಮೆರಿಕ ಅತಿದೊಡ್ಡ ಆರ್ಥಿಕ ಕೊಡುಗೆ ನೀಡುತ್ತಿದೆ" ಎಂದು ಇಲಾಖೆ ತಿಳಿಸಿದೆ. ಪ್ರಾದೇಶಿಕ ಸರ್ಕಾರಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ವೈರಸ್ನ ಮತ್ತಷ್ಟು ಗಡಿಯಾಚೆಗಿನ ಪ್ರಸರಣವನ್ನು ತಡೆಗಟ್ಟಲು ಕೆಲಸ ಮಾಡುತ್ತಿರುವುದರಿಂದ ಆರೋಗ್ಯ ಅಧಿಕಾರಿಗಳು ಏಕಾಏಕಿ ಮೇಲ್ವಿಚಾರಣೆಯನ್ನು ಮುಂದುವರೆಸಿದ್ದಾರೆ. ಇತ್ತೀಚಿನ ಯುಎಸ್ ಬೆಂಬಲಿತ ಚಟುವಟಿಕೆಗಳಲ್ಲಿ ಯುನಿಸೆಫ್ ಪೂರ್ವ ಕಾಂಗೋದಲ್ಲಿನ ಮುಂಚೂಣಿಯ ಆರೋಗ್ಯ ಸೌಲಭ್ಯಗಳಿಗೆ 150 ಮೆಟ್ರಿಕ್ ಟನ್ ನೀರು, ನೈರ್ಮಲ್ಯ ಮತ್ತು ಸೋಂಕು ನಿಯಂತ್ರಣ ಸರಬರಾಜುಗಳನ್ನು ತಲುಪಿಸಿದೆ, ಇದು ಆರು ತಿಂಗಳವರೆಗೆ ಸುಮಾರು 100,000 ಜನರನ್ನು ಬೆಂಬಲಿಸಲು ಸಾಕಾಗುತ್ತದೆ.

# ಪ್ರತಿಯೊಬ್ಬ ಯುವಕನನ್ನೂ ಸೂರ್ಯವಂಶಿ ಜೊತೆ ಹೋಲಿಸಬೇಡಿ: ದ್ರಾವಿಡ್ ಎಚ್ಚರಿಕೆ




**ಬೆಂಗಳೂರು, ಜೂ.11 :** ಕರ್ನಾಟಕದ ಕ್ರಿಕೆಟ್ ದಂತಕಥೆ ರಾಹುಲ್ ದ್ರಾವಿಡ್ ಗುರುವಾರ ಹದಿಹರೆಯದ ಬ್ಯಾಟಿಂಗ್ ಸಂವೇದನೆ ವೈಭವ್ ಸೂರ್ಯವಂಶಿ ಅವರನ್ನು "ವಿಶಿಷ್ಟ ಆಟಗಾರ" ಎಂದು ಬಣ್ಣಿಸಿದ್ದಾರೆ ಮತ್ತು ಪ್ರತಿ ಭರವಸೆಯ ಯುವಕನನ್ನು ಉದಯೋನ್ಮುಖ ತಾರೆಯೊಂದಿಗೆ ಹೋಲಿಸುವುದರ ವಿರುದ್ಧ ಎಚ್ಚರಿಕೆ ನೀಡಿದ್ದಾರೆ,

ಅವರ ಸಾಮರ್ಥ್ಯದ ಪ್ರತಿಭೆಗಳು ಒಂದು ಪೀಳಿಗೆಯಲ್ಲಿ ಒಮ್ಮೆ ಮಾತ್ರ ಕಾಣಿಸಿಕೊಳ್ಳುತ್ತವೆ ಎಂದು ಹೇಳಿದರು. ಸೂರ್ಯವಂಶಿ ಅವರ ಉದಯದ ಸುತ್ತಲಿನ ಉತ್ಸಾಹವು ಇತರ ಯುವ ಕ್ರಿಕೆಟಿಗರಿಂದ ಅವಾಸ್ತವಿಕ ನಿರೀಕ್ಷೆಗಳಿಗೆ ಕಾರಣವಾಗಬಾರದು ಎಂದು ದ್ರಾವಿಡ್ ಹೇಳಿದರು. "ಎಲ್ಲರನ್ನೂ ವೈಭವ್ ಸೂರ್ಯವಂಶಿ ಜೊತೆ ಹೋಲಿಸಬಾರದು. ಅವರು ವಿಶಿಷ್ಟ ಆಟಗಾರ. ಅಂತಹ ಆಟಗಾರರು ಬಹಳ ವಿರಳವಾಗಿ ಬರುತ್ತಾರೆ. ನಾವು ಅದನ್ನು ಗುರುತಿಸಬೇಕು ಮತ್ತು ಪ್ರಶಂಸಿಸಬೇಕು" ಎಂದು ಕರ್ನಾಟಕವು ಇದೇ ರೀತಿಯ ಸಾಮರ್ಥ್ಯದ ಆಟಗಾರನನ್ನು ಗುರುತಿಸಲು ಬಯಸುತ್ತಿದೆಯೇ ಎಂದು ಕೇಳಿದಾಗ ದ್ರಾವಿಡ್ ಹೇಳಿದರು.

ವಿಶ್ವ ಕ್ರಿಕೆಟ್‌ನಲ್ಲಿ ಅಸಾಧಾರಣ ಪ್ರತಿಭೆಗಳು ಸಾಂದರ್ಭಿಕವಾಗಿ ಮಾತ್ರ ಹೊರಹೊಮ್ಮುತ್ತವೆ ಮತ್ತು ಶ್ರೇಯಾಂಕಗಳ ಮೂಲಕ ಬರುವ ಪ್ರತಿಯೊಬ್ಬ ಯುವಕನಿಗೆ ಮಾನದಂಡವಾಗಿ ಬಳಸಲಾಗುವುದಿಲ್ಲ ಎಂದು ಭಾರತದ ಮಾಜಿ ನಾಯಕ ಹೇಳಿದರು. "ಅವರು ವಿಶೇಷ ಪ್ರತಿಭೆ ಮತ್ತು ನಾವು ಅದನ್ನು ಒಪ್ಪಿಕೊಳ್ಳಬೇಕು. ಅವರು ಪ್ರದರ್ಶನ ನೀಡುತ್ತಲೇ ಇರುತ್ತಾರೆ, ಭಾರತಕ್ಕಾಗಿ ಆಡುತ್ತಾರೆ ಮತ್ತು ದೇಶಕ್ಕಾಗಿ ಪಂದ್ಯಗಳನ್ನು ಗೆಲ್ಲುತ್ತಾರೆ ಎಂದು ಆಶಿಸುತ್ತೇವೆ" ಎಂದು ಅವರು ಹೇಳಿದರು.

# ಫಿಫಾ ವಿಶ್ವಕಪ್: ಅತಿಹೆಚ್ಚು ಗೋಲು ಹೊಡೆದ ಅಗ್ರ 5 ಆಟಗಾರರು

**ನವದೆಹಲಿ, ಜೂ.11:** ಜಾಗತಿಕ ಕ್ರೀಡಾ ಲೋಕದ ಮಹಾ ಹಬ್ಬ ಫಿಫಾ ವಿಶ್ವಕಪ್ 2026 ಅಧಿಕೃತವಾಗಿ ಆರಂಭವಾಗಿದೆ. ಫುಟ್ಬಾಲ್ ಇತಿಹಾಸದಲ್ಲೇ ಮೊದಲ ಬಾರಿಗೆ ದಾಖಲೆಯ 48 ತಂಡಗಳು ಈ ಬಾರಿಯ ಮಹಾಸಮರದಲ್ಲಿ ಪಾಲ್ಗೊಳ್ಳುತ್ತಿದ್ದು, ಇಡೀ ವಿಶ್ವವೇ ಈ ಐತಿಹಾಸಿಕ ಕ್ಷಣವನ್ನು ಕಣ್ತುಂಬಿಕೊಳ್ಳಲು ಸಜ್ಜಾಗಿದೆ. ಈ ರೋಚಕ ಪಂದ್ಯಾವಳಿಗಳು ಆರಂಭವಾಗುತ್ತಿರುವ ಬೆನ್ನಲ್ಲೇ, ವಿಶ್ವಕಪ್ ಇತಿಹಾಸದಲ್ಲಿ ಇದುವರೆಗೆ ಅತಿ ಹೆಚ್ಚು ಗೋಲು ಬಾರಿಸಿ ಜಾಗತಿಕ ದಾಖಲೆ ಬರೆದಿರುವ ಟಾಪ್-5 ಶ್ರೇಷ್ಠ ಆಟಗಾರರ ರೋಚಕ ವಿವರ ಇಲ್ಲಿದೆ.

ಫುಟ್ಬಾಲ್ ಸಾಮ್ರಾಜ್ಯದ ಅತಿ ದೊಡ್ಡ ವೇದಿಕೆಯಲ್ಲಿ ನೂರಾರು ಸ್ಟಾರ್ ಆಟಗಾರರು ಬಂದು ಹೋಗಿದ್ದಾರೆ. ಆದರೆ ಜರ್ಮನಿಯ ದೈತ್ಯ ಆಟಗಾರ ಮಿರೋಸ್ಲಾವ್ ಕ್ಲೋಸ್ ಅವರ ಹೆಸರಲ್ಲಿರುವ ಆ ಒಂದು ದಾಖಲೆಯನ್ನು ಮುರಿಯಲು ಇಂದಿಗೂ ಯಾರಿಂದಲೂ ಸಾಧ್ಯವಾಗಿಲ್ಲ. ವಿಶ್ವಕಪ್ ಇತಿಹಾಸದ ಟಾಪ್-5 ಗೋಲು ಸರದಾರರ ಪಟ್ಟಿ ಇಲ್ಲಿದೆ

**1. ಮಿರೋಸ್ಲಾವ್ ಕ್ಲೋಸ್ (ಜರ್ಮನಿ):** ಫಿಫಾ ವಿಶ್ವಕಪ್ ಇತಿಹಾಸದಲ್ಲೇ ಅತ್ಯಂತ ಹೆಚ್ಚು ಗೋಲು ಬಾರಿಸಿದ ಸಾರ್ವಕಾಲಿಕ ದಾಖಲೆ ಜರ್ಮನಿಯ ಮಿರೋಸ್ಲಾವ್ ಕ್ಲೋಸ್ ಹೆಸರಲ್ಲಿದೆ. ಇವರು 2002 ರಿಂದ 2014 ರವರೆಗೆ ಒಟ್ಟು 4 ವಿಶ್ವಕಪ್ ಟೂರ್ನಿಗಳನ್ನು ಆಡಿದ್ದು, ಬರೋಬ್ಬರಿ 16 ಗೋಲುಗಳನ್ನು ಸಿಡಿಸಿದ್ದಾರೆ. 2014 ರ ವಿಶ್ವಕಪ್‌ನಲ್ಲಿ ಬ್ರೆಜಿಲ್‌ನ ದಿಗ್ಗಜ ರೊನಾಲ್ಡೊ ಅವರ ದಾಖಲೆಯನ್ನು ಮುರಿದ ಕ್ಲೋಸ್, ಅಂದಿನಿಂದ ಇಂದಿನವರೆಗೂ ಅಗ್ರಸ್ಥಾನದಲ್ಲೇ ವಿರಾಜಮಾನರಾಗಿದ್ದಾರೆ.

**2. ರೊನಾಲ್ಡೊ (ಬ್ರೆಜಿಲ್):** ಫುಟ್ಬಾಲ್ ಇತಿಹಾಸದ ಅತ್ಯಂತ ಪ್ರಸಿದ್ಧ ಫಾರ್ವರ್ಡ್ ಆಟಗಾರರಲ್ಲಿ ಒಬ್ಬರಾದ ಬ್ರೆಜಿಲ್‌ನ ರೊನಾಲ್ಡೊ 15 ಗೋಲುಗಳೊಂದಿಗೆ ಈ ಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ. 2002 ರ ಫಿಫಾ ವಿಶ್ವಕಪ್ನಲ್ಲಿ ಬ್ರೆಜಿಲ್ ತಂಡ ಚಾಂಪಿಯನ್ ಪಟ್ಟ ಅಲಂಕರಿಸಲು ರೊನಾಲ್ಡೊ ಪ್ರಮುಖ ಕಾರಣವಾಗಿದ್ದರು. ಆ ಒಂದೇ ಟೂರ್ನಿಯಲ್ಲಿ ಅವರು ಭರ್ಜರಿ 8 ಗೋಲುಗಳನ್ನು ಬಾರಿಸಿ ಅತಿಹೆಚ್ಚು ಗೋಲು ಗಳಿಸಿದ ಆಟಗಾರ ಎನಿಸಿಕೊಂಡಿದ್ದರು.

**3. ಗರ್ಡ್ ಮುಲ್ಲರ್ (ಜರ್ಮನಿ):** ಜರ್ಮನಿಯ ಮತ್ತೊಬ್ಬ ಶ್ರೇಷ್ಠ ಫುಟ್ಬಾಲ್ ದೈತ್ಯ ಗರ್ಡ್ ಮುಲ್ಲರ್ 14 ಗೋಲುಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. 1974 ರ ವಿಶ್ವಕಪ್‌ನಲ್ಲಿ ಪಶ್ಚಿಮ ಜರ್ಮನಿ ತಂಡ ಟ್ರೋಫಿ ಗೆಲ್ಲುವಲ್ಲಿ ಇವರು ಪ್ರಮುಖ ಪಾತ್ರ ವಹಿಸಿದ್ದರು. ಮೈದಾನದಲ್ಲಿ ಅತ್ಯಂತ ವೇಗವಾಗಿ ಹಾಗೂ ನಿಖರವಾಗಿ ಗೋಲು ಬಾರಿಸುವ ಚಾಣಾಕ್ಷ ವೃತ್ತಿಪರ ಆಟಗಾರ ಎಂದು ಮುಲ್ಲರ್ ಜಗತ್ಪ್ರಸಿದ್ಧರಾಗಿದ್ದರು.



**4. ಜಸ್ಟ್ ಫಾಂಟೈನ್ (ಫ್ರಾನ್ಸ್):** ಫ್ರಾನ್ಸ್ ದೇಶದ ಜಸ್ಟ್ ಫಾಂಟೈನ್ ನಾಲ್ಕನೇ ಸ್ಥಾನದಲ್ಲಿದ್ದಾರೆ. ಇವರ ಹೆಸರಲ್ಲಿರುವ ದಾಖಲೆ ಮಾತ್ರ ಇಂದಿಗೂ ಯಾರಿಗೂ ಮುರಿಯಲಾಗದ ರಹಸ್ಯವಾಗಿಯೇ ಉಳಿದಿದೆ. ಫಾಂಟೈನ್ ಕೇವಲ ಒಂದೇ ಒಂದು ವಿಶ್ವಕಪ್ ಟೂರ್ನಿಯಲ್ಲಿ (1958ರ ವಿಶ್ವಕಪ್) ಬರೋಬ್ಬರಿ 13 ಗೋಲುಗಳನ್ನು ಸಿಡಿಸಿ ಈ ಮೈಲಿಗಲ್ಲು ನೆಟ್ಟಿದ್ದರು. ಒಂದೇ ವಿಶ್ವಕಪ್ನಲ್ಲಿ ಅತಿ ಹೆಚ್ಚು ಗೋಲು ಬಾರಿಸಿದ ಇವರ ಈ ದಾಖಲೆ ಆರು ದಶಕಗಳ ಆಚೆಗೂ ಅಖಂಡವಾಗಿದೆ.

**5. ಲಿಯೋನೆಲ್ ಮೆಸ್ಸಿ (ಅರ್ಜೆಂಟೀನಾ):** ಅರ್ಜೆಂಟೀನಾದ ಜಾದೂಗಾರ ಮತ್ತು ಇಂದಿನ ತಲೆಮಾರಿನ ಶ್ರೇಷ್ಠ ಆಟಗಾರ ಲಿಯೋನೆಲ್ ಮೆಸ್ಸಿ 13 ಗೋಲುಗಳೊಂದಿಗೆ ಟಾಪ್-5 ಪಟ್ಟಿಯನ್ನು ಪೂರ್ಣಗೊಳಿಸಿದ್ದಾರೆ. 2022 ರಲ್ಲಿ ಕತಾರ್‌ನಲ್ಲಿ ನಡೆದ ವಿಶ್ವಕಪ್ನಲ್ಲಿ ಅರ್ಜೆಂಟೀನಾ ತಂಡವನ್ನು ಮುನ್ನಡೆಸಿ ಪ್ರಶಸ್ತಿ ಗೆದ್ದುಕೊಟ್ಟ ಮೆಸ್ಸಿ, ವಿಶ್ವಕಪ್ ಟ್ರೋಫಿಯನ್ನು ಎತ್ತಿ ಹಿಡಿಯುವ ಮೂಲಕ ಫುಟ್ಬಾಲ್ ಇತಿಹಾಸದ ಸಾರ್ವಕಾಲಿಕ ಶ್ರೇಷ್ಠ ಆಟಗಾರರ ಸಾಲಿಗೆ ಅಧಿಕೃತವಾಗಿ ಸೇರ್ಪಡೆಯಾಗಿದ್ದಾರೆ.